ಸಂಪುಟ: 21, ಸಂಚಿಕೆ: 218, ಪುಟಗಳು: 8, ಶುಕ್ರವಾರ, 17 ಮೇ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಮಾನವ ದೇಹದಲ್ಲಿರುವ ಆತ್ಮವೊಂದೇ ಪೂಜೆಗೆ ಅರ್ಹವಾದ ದೇವರು

• ಸ್ವಾಮಿ ವಿವೇಕಾನಂದ

## ಪಂಚಾಂಗ

(ಶುಕ್ರವಾರ 17, ಮೇ-2024)

- ಶ್ರೀ ಕ್ರೋಧಿ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಶುಕ್ಲ ಪಕ್ಷ, ನವಮಿ ದಶಮಿ, ಶುಕ್ರವಾರ,
- ಪೂರ್ವಫಾಲ್ಗುಣಿ ನಕ್ಷತ್ರ
- ರಾಹುಕಾಲ 10:45 ರಿಂದ 12:20
- ಗುಳಿಕಕಾಲ 07:35 ರಿಂದ 09:10
- ಯಮಗಂಡಕಾಲ 03:30 ರಿಂದ 05:05

## ಬಗೆದಷ್ಟು ಬಯಲಾಗ್ತಿದೆ ವಿಶ್ವನ ದುಷ್ಕೃತ್ಯ
# ಅಂಜಲಿ ಹಂತಕ ಅರೆಸ್ಟ್





**ಹುಬ್ಬಳ್ಳಿ:** ನೇಹಾ ಹತ್ಯೆ ಮಾದರಿಯಲ್ಲಿ ನಡೆದಿದ್ದ ಅಂಜಲಿ ಕೊಲೆ ಪ್ರಕರಣದ ಆರೋಪಿಯನ್ನು ಕೊನೆಗೂ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಆರೋಪಿ ವಿಶ್ವನ ಬಗ್ಗೆ ಬಗೆದಷ್ಟು ಆತನ ಕೃತ್ಯಗಳು ಬಯಲಾಗುತ್ತಿವೆ. ಈತನ ವೃತ್ತಿಯೇ ಕಳ್ಳತನ, ಪವೃತ್ತಿಯಲ್ಲಿ ಅಮಾಯಕ ಹೆಣ್ಣುಮಕ್ಕಳನ್ನು ಮೋಸ ಮಾಡುತ್ತಿದ್ದ.ಇಷ್ಟೇ ಅಲ್ಲದೇ ಮದ್ಯ ವ್ಯಸನಕ್ಕೆ ಬಲಿಯಾಗಿದ್ದ ಈತ ಹಲವು ಬಾರಿ ಕಳ್ಳತನ ಮಾಡಿ ಸಿಕ್ಕಿಕೊಂಡಿದ್ದ ಎಂದು ತಿಳಿದು ಬಂದಿದೆ.

ಪುಟ 2

# ಅಂಜಲಿ ಬಳಿಕ ರೈಲಿನಲ್ಲಿ ಮಹಿಳೆಗೆ ಚಾಕು ಹಾಕಲು ಯತ್ನ

**ಹುಬ್ಬಳ್ಳಿ:** ಅಂಜಲಿ ಕೊಲೆ ಮಾಡಿದ್ದಲ್ಲದೇ ಮತ್ತೊಂದು ಕೊಲೆ ಮಾಡಲು ಹೋಗಿ ಕಿರಾತಕ ವಿಶ್ವ ಈಗ ಅರೆಸ್ಟ್ ಆಗಿದ್ದಾನೆ.

ಅಂಜಲಿಯನ್ನು ಹತ್ಯೆ ಮಾಡಿದ ಬಳಿಕ ವಿಶ್ವ ಪರಾರಿಯಾಗಿ ದಾವಣಗೆರೆ ರೈಲಿನಲ್ಲಿ ಪ್ರಯಾಣ ಮಾಡುತ್ತಿದ್ದ.ಈ ವೇಳೆ ರೈಲಿನಲ್ಲಿ ಮಹಿಳೆ ಜೊತೆ ಗಲಾಟೆ ಮಾಡಿ ಸಿಟ್ಟಾಗಿ ಚಾಕು ಹಾಕಲು ಮುಂದಾಗಿದ್ದ.

ಈ ವಿಚಾರ ತಿಳಿಯುತ್ತಿದ್ದಂತೆ ಪ್ರಯಾಣಿಕರು ಆತನಿಗೆ ರೈಲಿನಲ್ಲೇ ಹಿಗ್ಗಾಮುಗ್ಗಾ ಥಳಿಸಿದ್ದರು.ಜನರಿಂದ ತಪ್ಪಿಸಿಕೊಳ್ಳಲು ವಿಶ್ವ ರೈಲಿನಿಂದ ಜಿಗಿದಿದ್ದ. ಹಳಿಯಲ್ಲಿ ಬಿದ್ದು ಗಾಯಗೊಂಡಿದ್ದ ಈತನನ್ನು ದಾವಣಗೆರೆ ರೈಲ್ವೇ ಪೊಲೀಸರು ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದರು. ಚಿಕಿತ್ಸೆ ವೇಳೆ ವಿಶ್ವನ ವಿಳಾಸ ಇತ್ಯಾದಿ ಮಾಹಿತಿಗಳನ್ನು ಪರಿಶೀಲಿಸಿದಾಗ ಈತನೇ ಅಂಜಲಿಯನ್ನು ಕೊಲೆ ಮಾಡಿದ ಆರೋಪಿ ಎನ್ನುವುದು ಪೊಲೀಸರಿಗೆ ದೃಢಪಡುತ್ತದೆ.

ಈಗ ವಿಶ್ವನನ್ನು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.ಪೊಲೀಸ್ ಆಯುಕ್ತೆ ರೇಣುಕಾ ಸುಕುಮಾರ್ ಆಸ್ಪತ್ರೆಗೆ ಭೇಟಿ ನೀಡಿದ್ದಾರೆ.



## ಸಂಕ್ಷಿಪ್ತ ಸುದ್ದಿ

### ದೇವಸ್ಥಾನಗಳ ಬಳಿ ರೀಲ್ಸ್ ನಿಷೇಧ

ಉತ್ತರಾಖಂಡದಲ್ಲಿ ಚಾರ್ ಧಾಮ್ ಯಾತ್ರೆ ಶುರುವಾಗಿದ್ದು, ಮೇ 31ರವರೆಗೆ ವಿಐಪಿ ದರ್ಶನಕ್ಕೆ ಅವಕಾಶ ನೀಡದಿರಲು ಸರ್ಕಾರ ನಿರ್ಧರಿಸಿದೆ. ಅಷ್ಟೇ ಅಲ್ಲದೆ ದೇವಾಲಯದಗಳ 50 ಮೀಟರ್ ವ್ಯಾಪ್ತಿಯಲ್ಲಿ ಯಾರೂ ರೀಲ್ಸ್‌ಗಳನ್ನು ಮಾಡುವಂತಿಲ್ಲ ಎನ್ನುವ ಕಠಿಣ ನಿಯಮವನ್ನು ಜಾರಿಗೆ ತರಲಾಗಿದೆ. ಕೇದಾರನಾಥ, ಬದರಿನಾಥ್, ಯಮುನೋತ್ರಿ ಮತ್ತು ಗಂಗೋತ್ರಿಯಲ್ಲಿ ವಿಐಪಿ ದರ್ಶನಕ್ಕೆ ಅವಕಾಶ ನೀಡದಿರಲು ನಿರ್ಧರಿಸಿದೆ. ಹರಿದ್ವಾರ ಮತ್ತು ರಿಷಿಕೇಶದಲ್ಲಿ ಆಫ್‌ಲೈನ್ ನೋಂದಣಿ ಮೇ 19 (ಭಾನುವಾರ)ದವರೆಗೆ ಮುಚ್ಚಿರುತ್ತದೆ ಎಂದು ಮುಖ್ಯ ಕಾರ್ಯದರ್ಶಿ ರಾಧಾ ರತುರಿ ತಿಳಿಸಿದ್ದಾರೆ. ದೇವಾಲಯಗಳ 50 ಮೀಟರ್ ವ್ಯಾಪ್ತಿಯಲ್ಲಿ ವಿಡಿಯೋಗ್ರಫಿ ಮತ್ತು ಸಾಮಾಜಿಕ ಮಾಧ್ಯಮ ರೀಲ್‌ಗಳ ಮೇಕಿಂಗ್ ಮೇಲೆ ನಿಷೇಧ ಹೇರಲಾಗಿದೆ. ಕೆಲವು ಯಾತ್ರಾರ್ಥಿಗಳಿಂದ ದೇವಾಲಯಗಳ ಆವರಣದಲ್ಲಿ ವೀಡಿಯೊಗ್ರಫಿ ಮಾಡಲಾಗುತ್ತಿದೆ ಮತ್ತು ರೀಲ್ಸ್‌ಗಳನ್ನು ಮಾಡಲಾಗುತ್ತಿದೆ, ಇದರಿಂದಾಗಿ ಜನರು ಒಂದೇ ಸ್ಥಳದಲ್ಲಿ ಸೇರುತ್ತಾರೆ, ಇದರಿಂದ ಅನನುಕೂಲತೆ ಉಂಟಾಗುತ್ತದೆ ಎಂದು ರಾತುರಿ ಹೇಳಿದರು.

ಪುಟ 2



### ಪೊಲೀಸ್ ಬಸ್ ಕಳವಿಗೆ ಯತ್ನ

ಕಲಬುರಗಿ: ಕೇಂದ್ರೀಯ ಮೀಸಲು ಪೊಲೀಸ್ ಪಡೆ ಬಸ್ ಅನ್ನು ಕಳ್ಳತನ ಮಾಡಲು ಯತ್ನಿಸಿದ್ದ ಘಟನೆ ಕಲಬುರಗಿ ನಗರದಲ್ಲಿರುವ ಪೊಲೀಸ್ ಕಮಿಷನರ್ ಕಚೇರಿ ಆವರಣದಲ್ಲಿ ನಡೆದಿದೆ. ಸೋನು ಭಗಿರಥ ಕಳ್ಳತನದ ಆರೋಪಿ. ಕೆಎ 32 ಜಿ 1550 ನಂಬರ್‌ನ ಪೊಲೀಸರ ಬಸ್ ಅನ್ನು ಕಮಿಷನರ್ ಕಚೇರಿ ಆವರಣದಲ್ಲಿ ನಿಲ್ಲಿಸಲಾಗಿತ್ತು. ಚತ್ತಿಸಘಡ ಮೂಲದ ಕಳ್ಳ ಸೋನು ಭಗಿರಥ ಕಲಬುರಗಿಯಲ್ಲಿ ಸೆಂಟ್ರಿಂಗ್ ಕೆಲಸ ಮಾಡಿಕೊಂಡಿದ್ದನು. ಸೋಮವಾರ ಕುಡಿದ ನಶೆಯಲ್ಲಿ ಮಧ್ಯರಾತ್ರಿ ಕಮಿಷನರ್ ಕಚೇರಿ ಆವರಣದೊಳಗೆ ಬಂದಿದ್ದಾನೆ. ಬಳಿಕ ಆವರಣದಲ್ಲಿ ನಿಲ್ಲಿಸಿದ್ದ ಸಿಆರ್‌ಪಿಎಫ್ ಪೊಲೀಸರ ಬಸ್ ಒಳಗಡೆ ಹೋಗಿದ್ದಾನೆ. ಬಸ್ ಓರ್ವ ಕಾನ್‌ಸ್ಟೇಬಲ್ ಇದ್ದು, ನಿದ್ದೆಗೆ ಜಾರಿದ್ದರು. ಪೊಲೀಸ್ ಕಾನ್ಸಟೇಬಲ್ ಬಸ್‌ನ ಕಿಟಕಿಗೆ ತಮ್ಮ ಬಟ್ಟೆ ನೇತು ಹಾಕಿ, ಮಲಗಿದ್ದರು. ಇದನ್ನು ಕಂಡ ಕಳ್ಳ ಸೋನು ಪೊಲೀಸ್ ಕಾನ್ಸಟೇಬಲ್ ಜೇಬಿನಲ್ಲಿದ್ದ ಬಸ್ ಕೀ ತೆಗೆದುಕೊಂಡಿದ್ದಾನೆ. ಬಳಿಕ ಬಸ್ ಸ್ಟಾರ್ಟ್ ಮಾಡುತ್ತಿದ್ದ ಹಾಗೆ ಪೊಲೀಸ್ ಕಾನ್ಸಟೇಬಲ್ ಎಚ್ಚೆತ್ತುಕೊಂಡಿದ್ದಾನೆ. ತಕ್ಷಣ ಪೊಲೀಸ್ ಕಾನ್ಸಟೇಬಲ್ ಆರೋಪಿ ಸೋನು ಭಗಿರಥನನ್ನು ಬಂಧಿಸಿದ್ದಾರೆ.

# ಬೆಳ್ಳಂಬೆಳಗ್ಗೆ ಮಳೆ

## ಬೆಂಗಳೂರು ಸೇರಿ ಹಲವು ಜಿಲ್ಲೆಗಳಲ್ಲಿ ಮಳೆ
## ಆರೆಂಜ್ ಅಲರ್ಟ್ ಘೋಷಣೆ

**ಬೆಂಗಳೂರು:** ಹಲವು ದಿನಗಳಿಂದ ಬಿಸಿಲಿನ ಬೇಗೆಯಿಂದ ಬಳಲುತ್ತಿದ್ದ ಜನತೆಗೆ ವರುಣ ಕೃಪೆ ತೋರಿದ್ದಾನೆ. ರಾಜಧಾನಿ ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಇಂದು ಬೆಳಗ್ಗೆ 5 ಗಂಟೆಯಿಂದಲೇ ಮಳೆ ಸುರಿಯುತ್ತಿದೆ.

ಮೆಜೆಸ್ಟಿಕ್, ಜಯನಗರ, ಬನಶಂಕರಿ, ಶಿವಾಜಿನಗರ, ವಿಧಾನಸೌಧ, ವಸಂತನಗರ, ಟ್ಯಾನಿರೋಡ್, ಕಬ್ಬನ್ ಪಾರ್ಕ್, ಎಂ.ಜಿ.ರಸ್ತೆಯಲ್ಲಿ ಮಳೆ ಸುರಿಯುತ್ತಿದೆ. ಮುಂದಿನ ಮೂರು ದಿನಗಳ ಕಾಲ ಬೆಂಗಳೂರು ಸೇರಿದಂತೆ ರಾಜ್ಯದ ಕೆಲವೆಡೆ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮೈಸೂರು ಮತ್ತು ಬೆಂಗಳೂರು ಜಿಲ್ಲೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಆರೆಂಜ್ ಅಲರ್ಟ್ ಘೋಷಣೆ: ಬೆಂಗಳೂರು ಸೇರಿ ಕರ್ನಾಟಕದ 16ಕ್ಕೂ ಅಧಿಕ ಜಿಲ್ಲೆಗಳಲ್ಲಿ ಇಂದಿನಿಂದ 4 ದಿನ ಭಾರಿ ಮಳೆ ಸುರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಕೊಡಗು, ಕೋಲಾರ, ಮೈಸೂರು ಜಿಲ್ಲೆಗಳಲ್ಲಿ ಮೇ 19ರಿಂದ ಅತಿ ಹೆಚ್ಚು ಮಳೆಯಾಗಲಿದ್ದು ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಬಳ್ಳಾರಿ, ದಾವಣಗೆರೆ, ಚಿತ್ರದುರ್ಗ, ಕೊಡಗು, ಮೈಸೂರು, ಹಾಸನ, ಮಂಡ್ಯ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ.

ಗದಗ, ಕೊಪ್ಪಳ, ರಾಯಚೂರು, ಬಾಗಲಕೋಟೆ ಜಿಲ್ಲೆಗಳಲ್ಲಿ ಬಿರುಗಾಳಿಯೊಂದಿಗೆ ಗಾಳಿ ಬೀಸಲಿದೆ. ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗಲಿದೆ. ಬೆಳಗಾವಿ, ಬೀದರ್, ಧಾರವಾಡ, ಹಾವೇರಿ, ಕಲಬುರಗಿ, ವಿಜಯಪುರ, ಯಾದಗಿರಿಯಲ್ಲಿ ಕೂಡ ಮಳೆಯಾಗಲಿದೆ.

ಹಲವು ಕಡೆಗಳಲ್ಲಿ ಮೋಡ ಕವಿದ ವಾತಾವರಣವಿದ್ದು ಮಧ್ಯಾಹ್ನ ನಂತರವೂ ಮಳೆ ಮುಂದುವರಿಯುವ ಸಾಧ್ಯತೆಯಿದೆ.



**ಮೇ20ರ ವರೆಗೆ ದಕ್ಷಿಣ ಒಳನಾಡಿನ ಎಲ್ಲಾ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದ್ದು ಭಾರತೀಯ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಜಾರಿ ಮಾಡಿದೆ. ಬೆಂಗಳೂರು, ಬೆಂಗಳೂರು ಗ್ರಾಮಾಂತರ, ರಾಮನಗರ, ಹಾಸನ, ಮಂಡ್ಯ, ಮೈಸೂರು, ಕೋಲಾರ, ಚಿಕ್ಕಬಳ್ಳಾಪುರ, ದೊಡ್ಡಬಳ್ಳಾಪುರ, ತುಮಕೂರು, ಚಿತ್ರದುರ್ಗದಲ್ಲಿ 115 ಮಿ.ಮೀನಿಂದ 204 ಮಿ.ಮೀ ಮಳೆಯಾಗುವ ಸಾಧ್ಯತೆಯಿದೆ ಎಂದು ಎಚ್ಚರಿಕೆ ನೀಡಿದೆ.**

### ಆರ್ ಸಿಬಿ ಪಂದ್ಯಕ್ಕೆ ಮಳೆ ಅಡ್ಡಿ?

**ನಾಳೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್ ಸಿಬಿ ಮತ್ತು ಸಿಎಸ್ ಕೆ ನಡುವೆ ನಿರ್ಣಾಯಕ ಪಂದ್ಯ ನಡೆಯಲಿದೆ. ಆರ್ ಸಿಬಿ ಪ್ಲೇ ಆಫ್ ಪ್ರವೇಶಕ್ಕೆ ಈ ಪಂದ್ಯ ಮುಖ್ಯವಾಗಿದೆ. ಒಂದು ವೇಳೆ ಮಳೆ ರದ್ದಾದರೆ ಆರ್ ಸಿಬಿ ಐಪಿಎಲ್ ನಿಂದ ಹೊರಬೀಳಲಿದೆ. ಸಿಎಸ್ ಕೆ ಪಾಲಿಗೆ ವರವಾಗಲಿದೆ. ಹವಾಮಾನ ಇಲಾಖೆಯಿಂದ ರಾಜ್ಯದಲ್ಲಿ ಮಳೆ ಮುನ್ಸೂಚನೆಯಿರುವುದರಿಂದ ಪಂದ್ಯದ ಅಭಿಮಾನಿಗಳಲ್ಲಿ ಆತಂಕ ಶುರುವಾಗಿದೆ.**




## ಐವರ ಅಸ್ಥಿಪಂಜರ ಕೇಸ್! ಎಫ್‌ಎಸ್‌ಎಲ್ ವರದಿಯಲ್ಲಿ ಬಯಲಾಯ್ತು
# ರಹಸ್ಯ



**ಚಿತ್ರದುರ್ಗ:** ಚಿತ್ರದುರ್ಗದಲ್ಲಿ ಐವರ ಅಸ್ಥಿಪಂಜರ ಪತ್ತೆ ಪ್ರಕರಣವನ್ನ ಪೊಲೀಸರು ಕೊನೆಗೂ ಭೇದಿಸಿದ್ದಾರೆ. ಐವರ ಮೃತದೇಹಗಳಲ್ಲಿ ನಿದ್ದೆ ಮಾತ್ರೆ ಅಂಶ ಪತ್ತೆಯಾಗಿರುವುದು ಎಫ್‌ಎಸ್‌ಎಲ್ ವರದಿಯಲ್ಲಿ ಪತ್ತೆಯಾಗಿದೆ.ಹೀಗಾಗಿ ಜಗನ್ನಾಥರೆಡ್ಡಿ ಕುಟುಂಬ ಬಹುತೇಕ ಸಾಮೂಹಿಕ ಆತ್ಮಹತ್ಯೆ ಮಾಡಿಕೊಂಡಿರಬಹುದು ಎನ್ನಲಾಗಿದೆ.

ಚಿತ್ರದುರ್ಗದ ಚಳ್ಳಕೆರೆ ಗೇಟ್ ಬಳಿಯ ಹಳೆ ಬೆಂಗಳೂರು ರಸ್ತೆಯ ಮನೆಯಲ್ಲಿ ಮೃತಪಟ್ಟು 4-5 ವರ್ಷಗಳ ಬಳಿಕ ಕಳೆದ ವರ್ಷ ಡಿಸೆಂಬರ್ 29ರಂದು ಐವರ ಅಸ್ಥಿ ಪಂಜರಗಳು ಪತ್ತೆಯಾಗಿದ್ದವು. ನಿವೃತ್ತ ಇಇ ಜಗನ್ನಾಥರೆಡ್ಡಿ, ಪತ್ನಿ ಪ್ರೇಮಲೀಲ, ಪುತ್ರಿ ತ್ರಿವೇಣಿ, ಪುತ್ರರಾದ ಕೃಷ್ಣ, ನರೇಂದ್ರ, ಅಸ್ಥಿಪಂಜರಗಳು ಅಂತ ಗುರುತಿಸಲಾಗಿತ್ತು.ಬಳಿಕ ಚಿತ್ರದುರ್ಗ ಬಡಾವಣೆ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ್ದರು.

ಮೃತರ ಅಸ್ಥಿಪಂಜರವನ್ನು ಪೊಲೀಸರು ಪರಿಶೀಲನೆ ಕಳುಹಿಸಿದ್ದರು.ಸದ್ಯ ನಿಗೂಢವಾಗಿದ್ದ ಸಾವಿನ ರಹಸ್ಯ ಎಫ್‌ಎಸ್‌ಎಲ್ ವರದಿಯಲ್ಲಿಬಯಲಾಗಿದೆ. ಈ ಬಗ್ಗೆಸುದ್ದಿಗೋಷ್ಠಿನಡೆಸಿಮಾಹಿತಿ ನೀಡಿದ ಚಿತ್ರದುರ್ಗ ಎಸ್‌ಪಿ ಧರ್ಮೇಂದ್ರ ಕುಮಾರ್ ಮೀನಾ, ಚಿತ್ರದುರ್ಗ ಚಳ್ಳಕೆರೆ ಗೇಟ್ ಜೈಲ್ ರಸ್ತೆಮನೆಯಲ್ಲಿ 5 ಅಸ್ಥಿ ಪಂಜರ ಪತ್ತೆಯಾಗಿತ್ತು. ಅಸ್ಥಿ ಪಂಜರ ಪತ್ತೆಯಾದ ತಕ್ಷಣ ಎಸ್‌ಎಫ್‌ಎಲ್‌ತಂಡ ಭೇಟಿ ನೀಡಿತ್ತು.ರಾಜ್ಯ ವಿಧಿ ವಿಜ್ಞಾನ ಪ್ರಯೋಗಾಯ ತಂಡ ಕೂಡಾ ಭೇಟಿ ನೀಡಿತ್ತು. ಮನೆಯಲ್ಲಿ 71 ಬೇರೆ ಬೇರೆ ಸಾಕ್ಷಿ ಕಲೆಕ್ಟ್ ಮಾಡಿ ಲ್ಯಾಬ್ ಗೆ ಕಳಿಸಿದ್ದೇವು. ಮರಣೋತ್ತರ ಪರೀಕ್ಷೆ ಕೂಡಾ ಡಾ.ವೇಣು ಮತ್ತು ಕೃಷ್ಣ ನೇತೃತ್ವದಲ್ಲಿ ನಡೆಸಲಾಗಿತ್ತು. ಸ್ಯಾಂಪಲ್ ಅನ್ನು ತನಿಖಾ ಅಧಿಕಾರಿಗಳು ಬೆಂಗಳೂರಿಗೆ ಕಳಿಸಿದ್ದರು.ಲ್ಯಾಬ್ ವರದಿಯಲ್ಲಿ ಸಂಪೂರ್ಣ ವರದಿಯನ್ನ ನೀಡಲಾಗಿದೆ. FSL & PM ವರದಿ ಇಟ್ಟುಕೊಂಡು ಅಂತಿಮ ವರದಿ ನೀಡಿದ್ದಾರೆ.

ಪವನ್ ಕುಮಾರ್ ಎಂಬ ವ್ಯಕ್ತಿ ಎಫ್‌ಐಆರ್ ದೂರು ನೀಡಿದ್ದರು.ಅದರಲ್ಲಿ ಮೃತರು ತಂದೆ ಜಗನ್ನಾಥ ರೆಡ್ಡಿ, ಪತ್ನಿ ಪ್ರೇಮಲೀಲಾ, ಪುತ್ರಿ ತ್ರಿವೇಣಿ, ಪುತ್ರರಾದ ಕೃಷ್ಣ, ನರೇಂದ್ರ, ಎಂದು ಮಾಹಿತಿ ನೀಡಿದ್ದರು. ವರದಿಯಲ್ಲಿ ಮೂಳೆಗಳಲ್ಲಿ ಯಾವುದೇ ಗಾಯದ ಗುರುತಿಲ್ಲ. ಈಖಐ ವರದಿಯಲ್ಲಿ ನಿದ್ರೆ ಮಾತ್ರೆ ಅಂಶ ಪತ್ತೆಯಾಗಿದೆ.ನಿದ್ರೆ ಮಾತ್ರೆಯ ಅಂಶ ಎಲ್ಲಾ ಮೃತ ದೇಹಗಳಲ್ಲಿ ಪತ್ತೆಯಾಗಿತ್ತು.ನಿದ್ರೆ ಮಾತ್ರೆ ಸೇವಿಸಿ ಸೂಸೈಡ್ ಮಾಡಿಕೊಂಡಿದ್ದಾರೆ.ಕಿಚನ್ ಎರಡು ಪಾತ್ರೆಯಲ್ಲಿ ಸೈನೈಡ್ ಅಂಶ ಕೂಡಾ ಪತ್ತೆಯಾಗಿದೆ. ಆದರೆ ಮೃತದೇಹಗಳಲ್ಲಿ ಸೈನೈಡ್ ಅಂಶ ಪತ್ತೆಯಾಗಿಲ್ಲ. ಸೈನೈಡ್ ತೆಗೆದುಕೊಂಡಿದ್ದು ನಾವು ಕನ್ಫರ್ಮ್ ಮಾಡೋದಕ್ಕೆ ಆಗಲ್ಲ. 2019 ಫೆಬ್ರವರಿ ಕೊನೆ ವಾರ ಅಥವಾ ಮಾರ್ಚ್ ಮೊದಲ ವಾರ ಐವರು ಸಾವು ಆಗಿದೆ ಎಂದು ವಿವರಿಸಿದ್ದಾರೆ.

## ಬಂಧನಕ್ಕೆ ತೆರಳಿದ್ದಾಗ ಪೊಲೀಸರ ಮೇಲೆ ಹಲ್ಲೆ
# ಆರೋಪಿಗೆ ಗುಂಡೇಟು



**ಚಿಕ್ಕಬಳ್ಳಾಪುರ:** ಬಂಧನಕ್ಕೆ ತೆರಳಿದ್ದಾಗ ಪೊಲೀಸ್ ಪೇದೆಯೊಬ್ಬರ ಮೇಲೆ ಹಲ್ಲೆ ನಡೆಸಿದ ಕೊಲೆ ಆರೋಪಿಯ ಕಾಲಿಗೆ ದೊಡ್ಡಬಳ್ಳಾಪುರ ಪೊಲೀಸರು ಗುಂಡೇಟು ನೀಡಿದ್ದಾರೆ.

ಹೇಮಂತ್ ಗೌಡ ಎಂಬವನ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಎರಡನೇ ಆರೋಪಿ ಯಲಹಂಕ ಬಳಿಯ ಶ್ರೀರಾಮನ ಹಳ್ಳಿ ಬಳಿ ಅಡಗಿರುವ ಖಚಿತ ಮಾಹಿತಿ ದೊಡ್ಡಬಳ್ಳಾಪುರ ಗ್ರಾಮಾಂತರ ಠಾಣೆ ಪೊಲೀಸರಿಗೆ ಸಿಕ್ಕಿತ್ತು. ಇದರಿಂದ ಆತನನ್ನು ಬಂಧಿಸಲು ಪೊಲೀಸರು ಇಂದು (ಶುಕ್ರವಾರ) ಮುಂಜಾನೆ ತೆರಳಿದ್ದರು.



## ಎಕ್ಸ್‌ಪ್ರೆಸ್‌ವೇಯಲ್ಲಿ ಸಂಚರಿಸುವ ಚಾಲಕರೇ ಎಚ್ಚರವಾಗಿರಿ
# 16 ದಿನದಲ್ಲಿ 12 ಸಾವಿರ ಕೇಸ್



**ಬೆಂಗಳೂರು:** ಎಕ್ಸ್‌ಪ್ರೆಸ್‌ವೇಯಲ್ಲಿ ಸಂಚಾರ ನಿಯಮ ಉಲ್ಲಂಘನೆ ಮಾಡುವ ವಾಹನ ಚಾಲಕರೇ ಎಚ್ಚರವಾಗಿರಿ. ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ ವಾಹನ ಚಾಲನೆ ಮಾಡಿಕೊಂಡು ಹೋಗುವಾಗ ಮೈಮರೆತು ಸಂಚಾರ ನಿಯಮ ಉಲ್ಲಂಘನೆ ಮಾಡಿಕೊಂಡು ಹೋಗಿರುವ ವಾಹನ ಮಾಲೀಕರ ಮೇಲೆ ಬರೋಬ್ಬರಿ 12 ಸಾವಿರಕ್ಕೂ ಅಧಿಕ ಕೇಸ್ ದಾಖಲಾಗಿದೆ.

ಪುಟ 2

## ಬಿರುಗಾಳಿ ಸಹಿತ ಭಾರಿ ಮಳೆ
# ಸಿಡಿಲಿಗೆ 11 ಮಂದಿ ಬಲಿ



**ಕೋಲ್ಕತ್ತಾ:** ಬಿರುಗಾಳಿಯಿಂದಾಗಿ ಮರದಿಂದ ಕೆಳಗೆ ಬಿದ್ದಿದ್ದ ಮಾವಿನ ಹಣ್ಣುಗಳನ್ನು ಸಂಗ್ರಹಿಸಲು ತೋಟಕ್ಕೆ ತೆರಳಿದ್ದವರು ಸೇರಿದಂತೆ ಪಶ್ಚಿಮ ಬಂಗಾಳದ ಮಾಲ್ದಾದಲ್ಲಿ ಗುರುವಾರ ಸಿಡಿಲು ಬಡಿದು ಹನ್ನೊಂದು ಮಂದಿ ಸಾವಿಗೀಡಾಗಿದ್ದಾರೆ. ಜಿಲ್ಲಾಡಳಿತವು ಮೃತರ ಕುಟುಂಬಕ್ಕೆ ತಲಾ 2 ಲಕ್ಷ ರೂಪಾಯಿ ಪರಿಹಾರ ಘೋಷಿಸಿದೆ. 'ದುರಂತ ಘಟನೆಯಲ್ಲಿ ಸಿಡಿಲು ಬಡಿದು ಮಾಲ್ದಾದಲ್ಲಿ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳೊಂದಿಗೆ ನಾನಿದ್ದೇನೆ. ಈ ಕಷ್ಟದ ಸಮಯದಲ್ಲಿ ಅವರಿಗೆ ನನ್ನ ಆಳವಾದ ಸಂತಾಪವನ್ನು ವ್ಯಕ್ತಪಡಿಸುತ್ತೇನೆ' ಎಂದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಪುಟ 2

## ಮುಂಬೈ ಬಿಲ್ ಬೋರ್ಡ್ ದುರಂತ
# ಜಾಹೀರಾತು ಕಂಪನಿ ಮಾಲೀಕ ಸೆರೆ

**ಮುಂಬೈ:** ಘಾಟ್‌ಕೋಪರ್‌ನಲ್ಲಿ ಬಿಲ್ ಬೋರ್ಡ್ ಕುಸಿದು ಬಿದ್ದು 16 ಜನರು ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾಹೀರಾತು ಫಲಕ ಅಳವಡಿಸುವ ಹೊಣೆ ಹೊತ್ತಿದ್ದ ಉದ್ಯಮಿ ಭವೇಶ್ ಭಿಂಡೆ ಎಂಬವರನ್ನು ರಾಜಸ್ಥಾನದ ಉದಯಪುರದಲ್ಲಿ ಪೊಲೀಸರು ಬಂಧಿಸಿದ್ದಾರೆ.

ಇಗೋ ಮೀಡಿಯಾ ಪ್ರೈವೇಟ್ ಲಿಮಿಟೆಡ್‌ನ ಮಾಲೀಕ ಭಿಂಡೆ ಅವರನ್ನು ಮುಂಬೈ ಪೊಲೀಸ್ ಕ್ರೈಂ ಬ್ರಾಂಚ್ ಬಂಧಿಸಿದೆ.ಆರೋಪಿಯ ಬಂಧನಕ್ಕೆ ಮುಂಬೈ ಪೊಲೀಸರಿಂದ ಒಟ್ಟು ಎಂಟು ತಂಡಗಳನ್ನು ವಿವಿಧ ಸ್ಥಳಗಳಿಗೆ ಕಳುಹಿಸಲಾಗಿತ್ತು.ಆರೋಪಿ ಪದೇ ಪದೇ ಸ್ಥಳ ಬದಲಿಸುತ್ತಿದ್ದ.ಅಲ್ಲದೇ ಹೆಸರು ಬದಲಿಸಿಕೊಂಡು ಉದಯಪುರದ ಹೋಟೆಲ್ ಒಂದರಲ್ಲಿ ತಂಗಿದ್ದ.ಇದೀಗ ಆರೋಪಿಯ ಬಂಧನವಾಗಿದ್ದು, ಇಂದು (ಶುಕ್ರವಾರ) ಬೆಳಗ್ಗೆ ಮುಂಬೈಗೆ ಕರೆತಂದು ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜಾಹೀರಾತು ಫಲಕ ಅಳವಡಿಕೆ ಕಂಪನಿ, ಫಲಕ ಅಳವಡಿಸುವಲ್ಲಿ ನಿಯಮ ಉಲ್ಲಂಘನೆಯಾಗಿರುವುದು ಸ್ಪ?ವಾಗಿದೆ. ಕಂಪನಿಗೆ 40★40 ಅಡಿಗಳ ಫಲಕ ಅಳವಡಿಸಲು ಮಾತ್ರ ಪರವಾನಿಗೆ ಇತ್ತು.ದುರ್ಘಟನೆಗೆ ಕಾರಣವಾದ ಜಾಹೀರಾತು ಫಲಕ 120★120 ಅಡಿ ಇತ್ತು. ಈ ವಿಚಾರ ಬಹಿರಂಗವಾಗುತ್ತಿದ್ದಂತೆ ಆರೋಪಿ ತಲೆಮರೆಸಿಕೊಂಡಿದ್ದ.

ಮೇ 12ರ ಸಂಜೆ ಘಾಟ್‌ಕೋಪರ್‌ನಲ್ಲಿ ಗಾಳಿ ಮಳೆಗೆ ಬೃಹತ್ ಜಾಹೀರಾತು ಫಲಕ ಕುಸಿದು ಬಿದ್ದಿತ್ತು.ಇದರ ಪರಿಣಾಮ ಮಳೆಯಿಂದಾಗಿ ಪೆಟ್ರೋಲ್ ಬಂಕ್‌ನಲ್ಲಿ ನಿಂತುಕೊಂಡಿದ್ದ 16 ಮಂದಿ ಸಾವಿಗೀಡಾಗಿದ್ದರು. ಘಟನೆಯಲ್ಲಿ 75 ಮಂದಿ ಗಾಯಗೊಂಡಿದ್ದರು.



## ಕೆರೆಯಲ್ಲಿ ಈಜಲು ಹೋಗಿ ನಾಲ್ವರು ಮಕ್ಕಳ ದಾರುಣ ಸಾವು

**ಹಾಸನ:** ಕೆರೆಯಲ್ಲಿ ಈಜಲು ಹೋಗಿದ್ದ ನಾಲ್ವರು ಮಕ್ಕಳು ದಾರುಣವಾಗಿ ಸಾವನ್ನಪ್ಪಿದ ಘಟನೆ ಆಲೂರು ತಾಲೂಕಿನ ತಿಮ್ಮನಹಳ್ಳಿ ಗ್ರಾಮದಲ್ಲಿ ನಡೆದಿದೆ. ಜೀವನ್ (13), ಸಾತ್ವಿಕ್ (11) ವಿಶ್ವ(12), ಪೃಥ್ವಿ (12 )ಸಾವನ್ನಪ್ಪಿದ್ದ ಮಕ್ಕಳು. ಮೃತ ಮಕ್ಕಳು ಮುತ್ತಿಗೆ ಗ್ರಾಮದವರಾಗಿದ್ದಾರೆ. ಶಾಲೆಗೆ ರಜೆ ಇರುವುದರಿಂದ ಕೆರೆಗೆ ಐವರು ಬಾಲಕರು ಈಜಲು ತೆರಳಿದ್ದರು. ಈ ಪೈಕಿ ಓರ್ವ ಬಾಲಕ ಪಾರಾಗಿ ಸಮೀಪದಲ್ಲಿದ್ದವರಿಗೆ ತಿಳಿಸಿದ್ದಾನೆ. ನಿವಾಸಿಗಳು ಕೆರೆ ಬಳಿ ಬಂದು ನೋಡುವಷ್ಟರಲ್ಲಿ ನಾಲ್ವರು ಬಾಲಕರು ಮೃತಪಟ್ಟಿದ್ದಾರೆ. ಮಕ್ಕಳ ಮೃತದೇಹಕ್ಕಾಗಿ ಅಗ್ನಿಶಾಮಕದಳದ ಸಿಬ್ಬಂದಿದ ಶೋಧಕಾರ್ಯ ನಡೆಸುತ್ತಿದ್ದಾರೆ.



## ನವಜಾತ ಗಂಡು ಶಿಶುವನ್ನು ಚರಂಡಿಗೆ ಎಸೆದು ಪಾಪಿ ತಾಯಿ

ವಿಜಯಪುರ: ಮಕ್ಕಳಿಲ್ಲವೆಂದು ಎಷ್ಟೋ ಮಂದಿ ಕೊರಗುತ್ತಾರೆ.ಈ ನಡುವೆ ಮಹಿಳೆಯೊಬ್ಬಳು ನವಜಾತ ಶಿಶುವನ್ನು ಚರಂಡಿಗೆ ಎಸೆದು ಹೋಗಿರುವ ಹೃದಯವಿದ್ರಾವಕ ಘಟನೆ ನಡೆದಿದೆ. ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ಅಲಕೊಪ್ಪರ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಮಹಿಳೆಯ ಕ್ರಮಕ್ಕೆ ಸಾರ್ವಜನಿಕರು ಆಕ್ರೋಶ ಹೊರಹಾಕಿದ್ದಾರೆ.ಮಹಿಳೆ ಮೃತಪಟ್ಟ ನವಜಾತ ಶಿಶುವನ್ನು ಪ್ಲಾಸ್ಟಿಲ್ ಹಾಳೆಯಲ್ಲಿ ಸುತ್ತಿ ಚರಂಡಿಗೆ ಎಸೆದು ಅಲ್ಲಿಂದ ಜಾಗ ಖಾಲಿ ಮಾಡಿದ್ದಾಳೆ.ಇತ್ತ ಶಿಶುವನ್ನು ಗಮನಿಸಿದ ಗ್ರಾಮಸ್ಥರು ಚರಂಡಿಯಿಂದ ಗಂಡು ಮಗುವನ್ನು ಮೇಲಕ್ಕೆತ್ತಿದ್ದಾರೆ.ಅಲ್ಲದೇ ಪೊಲೀಸರಿಗೂ ಮಾಹಿತಿ ನೀಡಿದ್ದಾರೆ.ಸ್ಥಳಕ್ಕೆ ದೌಡಾಯಿಸಿದ ಮುದ್ದೇಬಿಹಾಳ ಪೊಲೀಸರು ತಾಯಿಗಾಗಿ ಶೋಧ ನಡೆಸಿದ್ದಾರೆ.

## ಆರೋಪಿಯನ್ನು ಕೊಲೆ ಮಾಡಿ ಜೈಲಿಗೆ ಹೋಗಲು ಸಿದ್ಧ

**ಹುಬ್ಬಳ್ಳಿ:** ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಪ್ರಕರಣ ಮಾಸುವ ಮುನ್ನವೇ ಹುಬ್ಬಳ್ಳಿಯಲ್ಲಿ ಮತ್ತೊಂದು ಯುವತಿಯ ರಕ್ತ ಚೆಲ್ಲಿದೆ. ಹೌದು. ಪ್ರೀತಿ ನಿರಾಕರಿಸಿದ್ದಕ್ಕರ ಯುವತಿಯ ಮನೆಗೆ ನುಗ್ಗಿ ಯುವಕ ಬರ್ಬರವಾಗಿ ಕೊಲೆ ಮಾಡಿದ್ದಾನೆ. ಹುಬ್ಬಳ್ಳಿಯಲ್ಲಿ ನಡೆದ ಎರಡನೇ ಘಟನೆಗೆ ತೀವ್ರ ಆಕ್ರೋಶ ವ್ಯಕ್ತವಾಗುತ್ತಿದೆ.ಇನ್ನೆಷ್ಟು ಹೆಣ್ಣು ಮಕ್ಕಳು ಬಲಿಯಾಗಬೇಕು ಎಂದು ಜನ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ. ಇತ್ತ ಅಂಜಲಿ ಸಹೋದರಿ ಸಂಜನಾ ಮಾಧ್ಯಮಕ್ಕೆ ಪ್ರತಿಕ್ರಿಯಿಸಿ, ನಮ್ಮ ಪೊಲೀಸರ ಮೇಲೆ ನಂಬಿಕೆ ಇಲ್ಲ. ಹೀಗಾಗಿ ಆರೋಪಿಯನ್ನು ನಾನೇ ಕೊಲೆ ಮಾಡಿ ಜೈಲಿಗೆ ಹೋಗಲು ಸಿದ್ಧ ಅಂತ ಆಕ್ರೋಶ ಹೊರಹಾಕಿದ್ದಾರೆ. ಹುಬ್ಬಳ್ಳಿಯಲ್ಲಿ ಆರು ಹೆಣ್ಣು ಮಕ್ಕಳ ಸಾವಾಗಿದೆ. ಸಾಕಾ ನೀವು ನ್ಯಾಯ ಕೊಡಿಸೋಕೆ.ಇನ್ನೂ ಎಷ್ಟು ಬಲಿ ಬೇಕು.ಈಗ ಎರಡು ಸಾವು ಆಗಿದೆ ಇನ್ನೂ ನಾಲ್ಕು ಜನ ಸಾಯುತ್ತೀವಿ.ನಾವು ವಿಷ ತೆಗೆದುಕೊಂಡು ಸಾಯುತ್ತೇವೆ. ಹಾಗಾದ್ರೂ ನಮಗೆ ನ್ಯಾಯ ನೀಡಿ ಎಂದು ಕಿಡಿಕಾರಿದ್ದಾರೆ. ಅಂಜಲಿ ಮತ್ತು ನೇಹಾ ಇಬ್ಬರ ನಮಗೆ ಅಕ್ಕಂದಿರು.ಅವರ ಸಾವಿಗೆ ನ್ಯಾಯ ಬೇಕು.ಚೆನ್ನಮ್ಮ ಸರ್ಕಲ್ ನಲ್ಲಿ ನಿಲ್ಲಿಸಿ ಫಯಾಜ್ ಮತ್ತು ವಿಶ್ವನನನ್ನು ಎನ್ ಕೌಂಟರ್ ಮಾಡಬೇಕು.ಇಲ್ಲದಿದ್ದರೆ ಅವರನ್ನು ಹುಬ್ಬಳ್ಳಿ ಜನರ ಕೈಗೆ ತಂದುಕೊಡಿ ಎಂದು ಅಂಜಲಿ ಕುಟುಂಬಸ್ಥರು ಆಕ್ರೋಶಭರಿತ ಮಾತುಗಳನ್ನಾಡಿದ್ದಾರೆ.

### ದೇವರ ದರ್ಶನದ ಜೊತೆಗೆ ನ್ಯಾಯ ದೇವತೆಗೆ ಮೊರೆ ಹೋದ ಮಾಜಿ ಸಚಿವ

# ಜಾಮೀನು ಸಿಕ್ಕಿದರೂ ರೇವಣ್ಣಗೆ ಟೆನ್ಷನ್

**ಬೆಂಗಳೂರು:** ಜಾಮೀನು ಪಡೆದು ಜೈಲಿನಿಂದ ಹೊರಬಂದರೂ ಜೆಡಿಎಸ್ ಶಾಸಕ ಹೆಚ್‌ಡಿ ರೇವಣ್ಣ ಟೆನ್ಷನ್ ಕಡಿಮೆಯಾಗಿಲ್ಲ. ಇದೀಗ ರೇವಣ್ಣ ದೇವರ ದರ್ಶನದ ಜೊತೆಗೆ ನ್ಯಾಯ ದೇವತೆಗೆ ಮೊರೆ ಹೋಗಿದ್ದಾರೆ. ನಿನ್ನೆ ಬೆಳ್ಳಂ ಬೆಳಗ್ಗೆ ಬೆಂಗಳೂರಿನ ಜಯನಗರದ ಗಣಪತಿ ದೇವಸ್ಥಾನ, ಬಸವನಗುಡಿಯ ಗಂಗಾಧರೇಶ್ವರ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ ರೇವಣ್ಣ, ನಂತರ ನೇರವಾಗಿ ನ್ಯಾಯಾಲಯಕ್ಕೆ ಹಾಜರಾಗಿದ್ದಾರೆ.

ಕೆಆರ್ ನಗರ ಕಿಡ್ನ್ಯಾಪ್ ಕೇಸ್ ನಲ್ಲಿ ಜಾಮೀನು ಸಿಕ್ಕಿದೆ.ಇದೀಗ ಹೊಳೆನರಸೀಪುರದಲ್ಲಿ ದಾಖಲಾಗಿರೋ ಲೈಂಗಿಕ ದೌರ್ಜನ್ಯ ಕೇಸ್‌ನಲ್ಲೂ ಜಾಮೀನು ಪಡೆಯಲು ಮುಂದಾಗಿದ್ದಾರೆ.ಲೈಂಗಿಕ ದೌರ್ಜನ್ಯ ಕೇಸ್‌ನಲ್ಲೂ ಮೊದಲನೇ ಆರೋಪಿ ಆಗಿರುವ ರೇವಣ್ಣ, ಬೆಂಗಳೂರಿನ ಸಿಟಿ ಸಿವಿಲ್ ಕೋರ್ಟ್‌ಗೆ ಹಾಜಾರಾಗಿದ್ದಾರೆ.ನ್ಯಾಯಾಧೀಶರ ಮುಂದೆಯೇ ಹಾಜರಾಗಿ ಜಾಮೀನಿಗೆ ಅರ್ಜಿ ಸಲ್ಲಿಸಿದ್ದಾರೆ. ಹೊಳೆನರಸೀಪುರದ ಕೇಸ್ ಜಾಮೀನುಸಹಿತ ಕೇಸ್ ಆಗಿದ್ದರೂ ವಶಕ್ಕೆ ಪಡೆಯಬಹುದು ಎಂಬ ಅನುಮಾನದಿಂದ ಕೋರ್ಟ್‌ಗೆ ಹಾಜರಾಗಿದ್ದಾರೆ. ಈ ಹಿಂದೆಯೂ ಬಂಧನದ ಬೀತಿಯಿಂದ ನಿರೀಕ್ಷಣಾ ಜಾಮೀನಿಗೆ ಅರ್ಜಿ ಸಲ್ಲಿಸಿದ್ದರು.ಎಸ್‌ಐಟಿ ಎಸ್‌ಪಿಪಿ, ಜಾಮೀನು ರಹಿತ ಪ್ರಕರಣಗಳನ್ನ ದಾಖಲಿಸಿಲ್ಲ ಅಂತಾ ಸ್ಪಷ್ಟನೆ ಕೊಟ್ಟ ಬಳಿಕ ನಿರೀಕ್ಷಣಾ ಜಾಮೀನು ಅರ್ಜಿ ವಾಪಸ್ ಪಡೆದಿದ್ದರು.



### ಕಿಡ್ನ್ಯಾಪ್ ಕೇಸ್‌ನಲ್ಲಿ ಸಂಕಷ್ಟ?

**ಹೊಳೆನರಸೀಪುರ ಕೇಸ್‌ನಲ್ಲಿ ಬೇಲ್‌ಗಾಗಿ ಕೋರ್ಟ್ ಮೊರೆ ಹೋಗಿರೋ ರೇವಣ್ಣಗೆ ಇತ್ತ ಕೆ.ಆರ್ ನಗರ ಕೇಸ್‌ನಲ್ಲಿ ಮತ್ತೆ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ. ಜಾಮೀನು ರದ್ದು ಕೋರಿ ಎಸ್‌ಐಟಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸೋ ಸಾಧ್ಯತೆ ಇದೆ. ಯಾಕಂದರೆ, ಕಿಡ್ನ್ಯಾಪ್ ಪ್ರಕರಣದಲ್ಲಿ 2ನೇ ಆರೋಪಿ ಸತೀಶ್ ಬಾಬು ವಿಚಾರಣೆ ನಡೆಸಿರುವ ಎಸ್‌ಐಟಿಗೆ ಮಹತ್ವದ ಸಾಕ್ಷ್ಯ ಕಲೆಹಾಕಿದೆ.ಜೊತೆಗೆರೇವಣ್ಣ ವಿರುದ್ಧ ಬಲವಾದ ಸಾಕ್ಷ್ಯ ಕಲೆ ಹಾಕಲು ತಯಾರಿ ನಡೆಸಿದೆ. ಈ ಎಲ್ಲಾ ಅಂಶ ಮುಂದಿಟ್ಟು ಮೇಲ್ಮನವಿ ಸಲ್ಲಿಸೋ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ. ಅತ್ತ ಮೈಸೂರಿನ ಜಿಲ್ಲೆ ಸಾಲಿಗ್ರಾಮದಲ್ಲಿರುವ ರೇವಣ್ಣ ಪತ್ನಿ ಭವಾನಿಗೆ ಎಸ್‌ಐಟಿ 2 ನೋಟಿಸ್ ನೀಡಿದೆ.ಕಿಡ್ನ್ಯಾಪ್ ಕೇಸ್‌ನಲ್ಲಿ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದೆ.ಆದ್ರೆ, ಭವಾನಿ ಈವರೆಗೂ ವಿಚಾರಣೆಗೆ ಹಾಜರಾಗಿಲ್ಲ. ಸದ್ಯ ಕಾನೂನು ಕುಣಿಕೆಯಿಂದ ಬಚಾವಾಗಲು ರೇವಣ್ಣ ದೇವರ ದರ್ಶನದ ಜೊತೆಗೆ ಕಾನೂನು ಸಮರವನ್ನೂ ನಡೆಸುತ್ತಿದ್ದಾರೆ.**

## ಜೆಡಿಎಸ್ ಕಾರ್ಯಕರ್ತರಿಗೊಂದು ದೇವೇಗೌಡರ ಪತ್ರ

**ಬೆಂಗಳೂರು:** ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣ ರಾಜ್ಯದಲ್ಲಿ ಬಿರುಗಾಳಿ ಎಬ್ಬಿಸಿದೆ. ಅಲ್ಲದೇ ಈಗಾಗಲೇ ಸಂತ್ರಸ್ತೆ ಅಪಹರಣ ಆರೋಪದ ಪ್ರಕರಣದಲ್ಲಿ ಎಚ್‌ಡಿ ರೇವಣ್ಣ ಅವರು ಜೈಲಿಗೆಹೋಗಿ ಬಂದಿದ್ದಾರೆ.ಹೀಗಾಗಿ ಮಾಜಿ ಪ್ರಧಾನಿ, ಜೆಡಿಎಸ್‌ವರಿಷ್ಠ ಎಚ್‌ಡಿ ದೇವೇಗೌಡಅವರು ನೋವಿನಲ್ಲಿದ್ದಾರೆ.ಹೀಗಾಗಿ ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಅವರು ಅಭಿಮಾನಿಗಳು ಹಾಗೂ ಜೆಡಿಎಸ್ ಕಾರ್ಯಕರ್ತರಿಗೆ ಪತ್ರ ಬರೆದಿದ್ದು, ಈ ವರ್ಷ ಕಾರಣಾಂತರಗಳಿಂದ ನಾನು ಜನ್ಮದಿನವನ್ನು ಆಚರಿಸಿಕೊಳ್ಳುತ್ತಿಲ್ಲ, ಹೀಗಾಗಿ ತಾವೆಲ್ಲರೂ ಇದ್ದಲ್ಲಿಯೇ ಹಾರೈಸಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

ಎಚ್‌ಡಿ ದೇವೇಗೌಡ ಅವರು ಇದೇ ಮೇ 18ಕ್ಕೆ 91 ವರ್ಷ ಪೂರೈಸಿ 92ನೇ ವಸಂತಕ್ಕೆ ಕಾಲಿಡಲಿದ್ದಾರೆ. ಆದರೆ, ಈ ಬಾರಿ ಕಾರಣಾಂತರಗಳಿಂದ ಅವರು ಜನ್ಮದಿನವನ್ನು ಆಚರಿಸಿಕೊಳ್ಳುತ್ತಿಲ್ಲ. ಹೀಗಾಗಿ ತಾವೆಲ್ಲರೂ ಇದ್ದಲ್ಲಿಯೇ ಹಾರೈಸಬೇಕು ಎಂದು ಅಭಿಮಾನಿಗಳು ಹಾಗೂ ಜೆಡಿಎಸ್ ಕಾರ್ಯಕರ್ತರಲ್ಲಿ ವಿನಂತಿಸಿಕೊಂಡಿದ್ದಾರೆ. ಅಲ್ಲದೇ ಪ್ರಸಕ್ತ ನಡೆಯುತ್ತಿರುವ ವಿಧಾನ ಪರಿಷತ್ ಚುನಾವಣೆಯಲ್ಲಿ ಜೆಡಿಎಸ್ ?ಬಿಜೆಪಿ (ಎನ್‌ಡಿಎ) ಅಭ್ಯರ್ಥಿಗಳ ಗೆಲುವಿಗೆ ಎಲ್ಲರೂಪ್ರಾಮಾಣಿಕವಾಗಿ ಶ್ರಮಿಸಬೇಕುಹಾಗೂಪಕ್ಷದಸಂಘಟನೆಗೆಪ್ರತಿಯೊಬ್ಬ ರೂಬದ್ಧತೆಯಿಂದ ಕರ್ತವ್ಯನಿರ್ವಹಿಸಬೇಕು ಎಂದು ಕಾರ್ಯಕರ್ತರಿಗೆ ಕರೆ ನೀಡಿದ್ದಾರೆ.





### ನೋವಿನಲ್ಲಿ ಮಾಜಿ ಪ್ರಧಾನಿ ದೇವೇಗೌಡ

**ಪ್ರಮುಖವಾಗಿ ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಅವರಿಗೆ ತಮ್ಮ ಮೊಮ್ಮಗ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣದ ಬಗ್ಗೆ ಬಹಳಷ್ಟು ಚಿಂತೆಯಾಗಿದೆ. ಅಶ್ಲೀಲ ವಿಡಿಯೋ ಹಾಗೂ ರೇವಣ್ಣ ಬಂಧನದಿಂದ ದೇವೇಗೌಡರ ಕುಟುಂಬಕ್ಕೆ ಮುಜುಗರು ಉಂಟುಮಾಡಿದೆ.ಒಂದು ಕಡೆ ಪ್ರಜ್ವಲ್ ರೇವಣ್ಣ ವಿದೇಶದಲ್ಲಿ ತಲೆ ಮರೆಸಿಕೊಂಡಿದ್ದರೆ, ಮತ್ತೊಂದು ಕಡೆ ರಾಜ್ಯದಲ್ಲಿ ಎಚ್‌ಡಿ ರೇವಣ್ಣ ಅವರ ಬಂಧನ ಮತ್ತು ಬಿಡುಗಡೆ ಎಚ್‌ಡಿ ದೇವೇಗೌಡರ ಕುಟುಂಬವನ್ನು ಕಂಗೆಡಿಸಿದ್ದು, ಇಡೀ ದೊಡ್ಡಗೌಡರ ಕುಟುಂಬದಲ್ಲಿ ಆತಂಕ ಛಾಯೆ ಆವರಿಸಿದೆ. ಹೀಗಾಗಿ ಜನ್ಮದಿನದ ಆಚರಣೆಯನ್ನು ರದ್ದು ಮಾಡಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.**

## ತಿಮಿಂಗಿಲ ಪರಮೇಶ್ವರ್ ಪಕ್ಕದಲ್ಲೇ ಇದೆ

### ಮಾಜಿ ಮುಖ್ಯಮಂತ್ರಿ ಹೆಚ್‌ಡಿ ಕುಮಾರಸ್ವಾಮಿ ಹೇಳಿಕೆ

**ಮೈಸೂರು:** ತಿಮಿಂಗಿಲ ಗೃಹಸಚಿವ ಪರಮೇಶ್ವರ್ ಅವರ ಪಕ್ಕದಲ್ಲೇ ಕುಳಿತಿದೆ. ತಿಮಿಂಗಿಲ ಯಾರು ಅನ್ನೋದು ಪರಮೇಶ್ವರ್ ಅವರಿಗೆ ಚೆನ್ನಾಗಿ ಗೊತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್‌ಡಿ ಕುಮಾರಸ್ವಾಮಿ ಹೇಳಿದರು.

ಈ ಕುರಿತು ಮೈಸೂರಿನಲ್ಲಿ ಮಾತನಾಡಿದ ಅವರು, ಎಸ್‌ಐಟಿಯನ್ನು ಕಾಣದ ಕೈ ನಿಯಂತ್ರಿಸುತ್ತಿದೆ.ಆ ತಿಮಿಂಗಿಲವನ್ನು ಹಿಡಿಯೋದು ಬಿಟ್ಟು ನನ್ನನ್ನು ಕೇಳಿದರೇ ಹೇಗೆ?ಮಂಡ್ಯ ಶಾಸಕ ಒಂದು ವಾರದಲ್ಲಿ ತಿಮಿಂಗಿಲ ಸಿಗುತ್ತೆ ಎಂದರು, ಏನಾಯಿತು ಎಂದು ಪ್ರಶ್ನಿಸಿದರು. ತಿಮಿಂಗಿಲವನ್ನು ಕುಮಾರಸ್ವಾಮಿ ನುಂಗಿಕೊಳ್ಳಲಿ ಎಂಬ ಡಿ.ಕೆ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಸಮಯ ಬರಲಿ ನುಂಗಿದರೇ ಆಯಿತು. ಎಸ್‌ಐಟಿ ಅಧಿಕಾರಿಗಳು ಗೃಹ ಸಚಿವರಿಗೆ ಮಾಹಿತಿ ಕೊಡುತ್ತಿಲ್ಲ. ಬೇರೆಯವರಿಗೆ ಮಾಹಿತಿ ಕೊಡುತ್ತಿದ್ದಾರೆ. ಎಸ್‌ಐಟಿ ತನಿಖೆ ಸರಿಯಾಗಿ ಆಗುತ್ತಿಲ್ಲ. ನಿಮ್ಮ ತಂದೆ-ತಾಯಿ, ಸಹೋದರ, ಸಹೋದರಿಯ



ಮುಖ ನೋಡಿಕೊಂಡು ತನಿಖೆ ಮಾಡಿ.ನೊಂದ ಹೆಣ್ಣು ಮಕ್ಕಳಿಗೆ ನ್ಯಾಯ ಕೊಡಿಸಿ ಎಂದು ಎಸ್ ಐಟಿ ಅಧಿಕಾರಿಗಳಿಗೆ ಮನವಿ ಮಾಡಿದರು. ಪ್ರಜ್ವಲ್ ರೇವಣ್ಣ ಸಂಸದರಾಗಿದ್ದಲೇ ನನ್ನ ಸಂಪರ್ಕಕ್ಕೆ ಸಿಗುತ್ತಿರಲಿಲ್ಲ. ಈವಾಗ ಸಿಗುತ್ತಾರಾ?ಪ್ರಜ್ವಲ್ ರೇವಣ್ಣ ಮೊದಲಿನಿಂದಲೂ ನನ್ನ ಸಂಪರ್ಕದಲ್ಲಿ ಇಲ್ಲ. ಈ ಪ್ರಕರಣ ಆಗುವ ಹಿಂದೆಯೂ ನನ್ನ ಜೊತೆ ಸಂಪರ್ಕದಲ್ಲಿ ಇರಲಿಲ್ಲ. ಇನ್ನೂ ವಿದೇಶಕ್ಕೆ ಹೋದ ಮೇಲೆಹೇಗೆನನ್ನಸಂಪರ್ಕದಲ್ಲಿಇರುತ್ತಾರೆ.ಪ್ರಜ್ವಲ್ ರೇವಣ್ಣ ಬಗ್ಗೆ ನನಗೆ ಏನೂ ಗೊತ್ತಿಲ್ಲ ಎಂದರು. ಈ ಪ್ರಕರಣದಲ್ಲಿ ಎರಡು ಭಾಗ ಇದೆ.ಒಂದು ವಿಡಿಯೋ ಮಾಡಿಕೊಂಡವನ ಅಪರಾಧ ಮತ್ತೊಂದು ಆ ವಿಡಿಯೋವನ್ನ ವೈರಲ್ ಮಾಡಿ ಕುಟುಂಬವನ್ನ ಬೀದಿಗೆ ತಂದವರದ್ದು.ಬೀದಿಗೆ ತಂದವರದ್ದು ಘೋರ ಅಪರಾಧ.ಆದರೆ ಎಸ್ ಐಟಿ ವೈರಲ್ ಮಾಡಿದವರನ್ನ ಬಂಧಿಸುವಲ್ಲಿ ವಿಫಲವಾಗಿದೆ.ಆರೋಪಿ ಖಾಸಗಿ ವಾಹಿನಿಗೆ ಸಂದರ್ಶನ ನೀಡುತ್ತಾನೆ. ಎಸ್‌ಐಟಿಗೆ ಸಿಗುತ್ತಿಲ್ಲ ಅಂದರೇ ಏನು ಅರ್ಥ?ಎಸ್‌ಐಟಿ ಸೂಕ್ತವಾದ ತನಿಖೆ ನಡೆಸುತ್ತಿಲ್ಲ ಎಂದು ಆರೋಪಿಸಿದರು. ನನ್ನ ಬಳಿಯಿರುವ ಭ್ರಷ್ಟಾಚಾರದ ಮಾಹಿತಿಯ ಪೆನ್ ಡ್ರೈವ್ ನಿಮಗೆ ಕೊಡುತ್ತೇನೆ. ಅದರ ವಿರುದ್ಧ ಕ್ರಮ ತೆಗದುಕೊಳ್ಳುವ ತಾಕತ್ತು ಇದೆಯಾ?ಅಧಿಕಾರಿಗಳು ಭ್ರ?ಷ್ಟಾಚಾರಕ್ಕೆ ಹಣ ಹೊಂದಿಸಲು ಯಾವ ರೀತಿ ಪರದಾಡುತ್ತಿದ್ದಾರೆ ಎಂಬ ಬಗ್ಗೆ ಮಾಹಿತಿ ಇದೆ.ಈ ಬಗ್ಗೆ ಕ್ರಮ ಕೈಗೊಳ್ಳುತ್ತಾರಾ.ಸಿಎಂ ನನ್ನನ್ನು ಹಿಟ್ ಅಂಡ್ ರನ್ ಅನ್ನುತ್ತಾರೆ.ಈ ಹಿಂದೆ ದಾಖಲೆಗಳ ಸಮೇತ ನಾನು ಮಾಡಿದ ಆರೋಪಗಳಿಗೆ ಎಷ್ಟು ಕ್ರಮ ಕೈಗೊಂಡಿದ್ದಾರೆ.ಕ್ರಮ ತೆಗೆದುಕೊಳ್ಳಲು ಈ ಸರ್ಕಾರದಿಂದ ಸಾಧ್ಯವಿಲ್ಲ. ಅದಕ್ಕಾಗಿ ನಾನು ಪೆನ್ ಡ್ರೈವ್ ಕೊಡುತ್ತಿಲ್ಲ ಎಂದು ಕಿಡಿಕಾರಿದರು.

## ಮಹಾರಾಷ್ಟ್ರ ಸಿಎಂಗೆ ಸಚಿವ ಖಂಡ್ರೆ ಖಡಕ್ ವಾರ್ನಿಂಗ್

**ಬೀದರ್:** ಮಹಾರಾಷ್ಟ್ರ ಸಿಎಂ ಏಕನಾಥ್ ಶಿಂಧೆ ರಾಜ್ಯಕ್ಕೆ ಕಾಲಿಡಲಿ ನೋಡೋಣ ಎಂದು ಹೇಳುವ ಮೂಲಕ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಖಡಕ್ ವಾರ್ನಿಂಗ್ ಕೊಟ್ಟಿದ್ದಾರೆ.

ಬೀದರ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಮಹಾರಾಷ್ಟ್ರದ ಮಾದರಿ ರಾಜ್ಯದಲ್ಲೂ ನಾಥ ಆಪರೇಷನ್ ಸಿಎಂ ಶಿಂಧೆ ಹೇಳಿಕೆಗೆ ಪ್ರತಿಕ್ರಿಯಿಸಿದರು.ಸಂವಿಧಾನಿಕ ಸಿಎಂ ಸ್ಥಾನದಲ್ಲಿದ್ದುಕೊಂಡು ಈ ರೀತಿ ಹೇಳೋಕೆ ಶಿಂಧೆಗೆ ನಾಚಿಕೆಯಾಗಬೇಕು.ಬರೀ ರಾಜ್ಯದಲ್ಲಿ ಕಳವು ಮಾಡಬೇಕು ಅನ್ನೋದೇ ಅವರ ಉದ್ದೇಶ ಎಂದು ತೀರುಗೇಟು ನೀಡಿದರು.

ಆಪರೇಷನ್ ಕಮಲ ಮಾಡೋಣ ಅನ್ನೋದು ಒಂದು ಹಣ, ಆಸ್ತಿ ಕಸಿದುಕೊಳ್ಳುವ ಕೆಲಸ ಮಾಡೋಕೆ, ಇಂಥೋರಿಗೆ ಛೀಮಾರಿ ಹಾಕೋಣ.ಇಲ್ಲೇನು ಕಾಂಗ್ರೆಸ್ ನವರು ಗಿರಾಕಿಗಳು ಇದ್ದಾರಾ ಹೊತ್ತುಕೊಂಡು ಹೋಗೋಕೆ.ಅವರಿಗೆ ಇಲ್ಲಿ ಸುಮ್ಮನೆ ಬಿಡುತ್ತಾರಾ ಎಂದು ಶಿಂಧೆಗೆ ಖಂಡ್ರೆ ಟಾಂಗ್ ನೀಡಿದರು.

**ಏಕನಾಥ್ ಶಿಂಧೆ ಹೇಳಿದ್ದೇನು..?:**

ಕೆಲ ದಿನಗಳ ಹಿಂದೆ ಮಹಾರಾಷ್ಟ್ರದ ಸತಾರಾದಲ್ಲಿ ಮಾತನಾಡಿದ್ದ ಶಿಂಧೆ, ಕರ್ನಾಟಕದಲ್ಲಿ ಸರ್ಕಾರ ಪತನಕ್ಕೆ ತೆರೆಮರೆಯಲ್ಲಿ ಸರ್ಕಸ್ ನಡೆಯುತ್ತಿದೆ ಎಂಬ ಸ್ಫೋಟಕ ಹೇಳಿಕೆಯೊಂದನ್ನು ನೀಡಿದ್ದರು.ನಾನು ಇತ್ತೀಚೇಗೆ ಕರ್ನಾಟಕದ ಒಂದು ಸಭೆಗೆ ತೆರಳಿದ್ದೆ. ಕರ್ನಾಟಕದಲ್ಲಿಯೂ 'ನಾಥ' ಆಪರೇಷನ್ ಮಾಡೋದಿದೆ' ಅಂದಿದ್ದಾರೆ. 'ನಾಥ ಆಪರೇಷನ್' ಅಂದ್ರೆ ಏನು..? ಅಂತ ಕೇಳಿದೆ.ಆಗ ಅವರು, ನೀವು ಮಹಾರಾಷ್ಟ್ರದ ಮಹಾಘಟಬಂಧನ ಸರ್ಕಾರ ಪತನ ಮಾಡಿದ್ರಿ. ಹೀಗಾಗಿ ನಿಮ್ಮ ಅನುಭವ ನಮಗೆ ಬಹಳ ಅವಶ್ಯಕವಿದೆ ಎಂದರು.ಖಂಡಿತವಾಗಿಯೂ ನಾನು ಬರುತ್ತೇನೆ ಎಂದು ಹೇಳಿದ್ದೇನೆ ಅಂತಾ ಶಿಂಧೆ ಹೇಳುವ ಮೂಲಕ ಆಪರೇಷನ್ ಸುಳಿವು ಕೊಟ್ಟಿದ್ದರು.ಶಿಂಧೆ ಹೇಳಿಕೆ ರಾಜ್ಯ ರಾಜಕೀಯಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದೆ.

**ಮೊದಲನೇ ಪುಟದಿಂದ...**

## ಸಿಡಿಲಿಗೆ 11 ಮಂದಿ ಬಲಿ

ನನ್ನ ಆಲೋಚನೆಗಳು ಮತ್ತು ಪ್ರಾರ್ಥನೆಗಳು ಗಾಯಾಳುಗಳೊಂದಿಗೆ ಇವೆ ಮತ್ತು ಅವರು ಶೀಘ್ರವಾಗಿ ಚೇತರಿಸಿಕೊಳ್ಳಲೆಂದು ನಾನು ಪ್ರಾರ್ಥಿಸುತ್ತೇನೆ. ನಮ್ಮ ಜಿಲ್ಲಾಡಳಿತವು ಸಂತ್ರಸ್ತರಿಗೆ ಅಗತ್ಯವಿರುವ ಎಲ್ಲ ಬೆಂಬಲವನ್ನು ಒದಗಿಸಲು ಅವಿರತವಾಗಿ ಶ್ರಮಿಸುತ್ತಿದೆ. ಅಗತ್ಯವಿರುವವರಿಗೆ ನಾವು ಎಲ್ಲವನ್ನೂ ಮಾಡುತ್ತೇವೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ಚಂದನ್ ಸಹಾನಿ (40), ರಾಜ್ ಮೃದ್ಧಾ (16) ಮತ್ತು ಮನಜಿತ್ ಮಂಡಲ್ (21) ಅವರು ಸಹಾಪುರದ ತೋಟದಲ್ಲಿ ಮಾವು ಸಂಗ್ರಹಿಸುತ್ತಿದ್ದಾಗ ಸಾವಿಗೀಡಾಗಿದ್ದಾರೆ. ಅಸಿತ್ ಸಹಾ (19) ಕೂಡ ಮಾವಿನ ಹಣ್ಣುಗಳನ್ನು ಸಂಗ್ರಹಿಸುತ್ತಿದ್ದಾಗ ಸಿಡಿಲು ಬಡಿದು ಗಜೋಲ್‌ನಲ್ಲಿ ಸಾವಿಗೀಡಾಗಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

ಹಾಗೆಯೇ ಅತುಲ್ ಮಂಡಲ್ (65), ಶೇಖ್ ಸಬ್ರುಲ್ (11) ಮತ್ತು ರಾಣಾ ಶೇಖ್ (11) ಅವರು ನಿಹಲುತೋಲಾ ಮಾವಿನ ತೋಟದಲ್ಲಿ ಸಿಡಿಲು ಬಡಿದು ಮೃತಪಟ್ಟಿದ್ದಾರೆ. ಮಾಲ್ದಾವು 'ಫಜ್ಲಿ', 'ಹಿಂಸಾಗರ್' ಮತ್ತು 'ಲಕ್ಷ್ಮಣಭೋಗ್' ನಂತಹ ಹಲವಾರು ವಿಧದ ಮಾವಿನಹಣ್ಣುಗಳಿಗೆ ಹೆಸರುವಾಸಿಯಾಗಿದೆ.

ಮಾಲ್ದಾದ ರಟುವಾ ಮತ್ತು ಇಂಗ್ಲಿಷ್‌ಬಜಾರ್ ಪ್ರದೇಶದಲ್ಲಿ ಗದ್ದೆಯಲ್ಲಿ ಕೆಲಸ ಮಾಡುತ್ತಿದ್ದ ಸುಮಿತ್ರಾ ಮೊಂಡೋಲ್ (45) ಮತ್ತು ಪಂಕಜ್ ಮೊಂಡೋಲ್ (23) ಸಿಡಿಲು ಬಡಿದು ಮೃತಪಟ್ಟಿದ್ದರೆ, ನಯನ್ ರೇ (23) ಮತ್ತು ಪ್ರಿಯಾಂಕಾ ಸಿಂಗ್ (20) ಸೆಣಬಿನ ಗದ್ದೆಯಲ್ಲಿ ಕೆಲಸ ಮಾಡುತ್ತಿದ್ದಾಗ ಸಿಡಿಲು ಬಡಿದು ಸಾವಿಗೀಡಾಗಿದ್ದಾರೆ.

ಸಹಾಪುರ ಮತ್ತು ಇಂಗ್ಲಿಷ್‌ಬಜಾರ್‌ನಲ್ಲಿ ಸಿಡಿಲು ಬಡಿದು ಇಬ್ಬರು ಗಾಯಗೊಂಡಿದ್ದಾರೆ. ಅವರನ್ನು ಮಾಲ್ದಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಗಿದೆ.

## ಅಂಜಲಿ ಹಂತಕ ಅರೆಸ್ಟ್

ಗಂಡನನ್ನು ಕಳೆದು ಕೊಂಡಿರುವ ಆರೋಪಿಯ ತಾಯಿ ಸವಿತಾ, ಆತನ ಅಪರಾಧಗಳನ್ನು ನೋಡಲಾಗದೇ ದೂರದಲ್ಲಿದ್ದು ಹೊಟ್ಟೆಪಾಡಿಗೆ ಹೋಟೆಲ್‌ನಲ್ಲಿ ಕೆಲಸ ಮಾಡಿ ಜೀವನ ನಡೆಸುತ್ತಿದ್ದರು.ಇದೀಗ ಮಗನ ದುಷ್ಕೃತ್ಯಕ್ಕೆ ವಿಶ್ವನ ಮನೆಗೆ ಬೀಗ ಹಾಕಲಾಗಿದೆ.ಮತ್ತೊಂದು ಕಡೆ ಅವರನ್ನು ಮನೆ ಖಾಲಿ ಮಾಡುವಂತೆ ಮನೆಯ ಮಾಲೀಕರು ಒತ್ತಡ ಹಾಕುತ್ತಿದ್ದಾರೆ.

ಆರೋಪಿ ವಿಶ್ವ ಯಾವಾಗಲಾದರೂ ಒಮ್ಮೆ ತಾಯಿಯನ್ನು ನೋಡಲು ಮನೆಗೆ ಬರುತ್ತಿದ್ದ.ಆಗೆಲ್ಲ ಆತನ ಬಗ್ಗೆ ವಿವಿಧ ಆರೋಪಗಳನ್ನು ಮಾಡುತ್ತಿದ್ದ ಜನ, ಆತನ ತಾಯಿಯ ಮುಖ ನೋಡಿ ಸುಮ್ಮನಾಗುತ್ತಿದ್ದರು.ಇದೀಗ ಆರೋಪಿಯ ವಿರುದ್ಧ ಜನರ ಆಕ್ರೋಶ ತೀವ್ರಗೊಂಡಿದ್ದು, ನೇಹಾ ಪ್ರಕರಣದಲ್ಲೇ ಆರೋಪಿಯನ್ನು ಎನ್‌ಕೌಂಟರ್ ಮಾಡಿದ್ರೆ, ಅಂಜಲಿ ಹತ್ಯೆ ನಡೆಯುತ್ತಿರಲಿಲ್ಲ. ಈಗ ವಿಶ್ವನನ್ನು ಎನ್‌ಕೌಂಟರ್ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

## 16 ದಿನದಲ್ಲಿ 12 ಸಾವಿರ ಕೇಸ್

ಮೇ 1 ರಿಂದ ಮೇ 16 ವರೆಗೆ ಒಟ್ಟು 12,192 ಕೇಸ್‌ಗಳು ದಾಖಲಾಗಿದೆ. ಹೆದ್ದಾರಿಯಲ್ಲಿ ಅಳವಡಿಸಿರುವ ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಕ್ಯಾಮೆರಾ ಕಣ್ಣಿನಲ್ಲಿ ಸೆರೆಯಾಗಿರುವ ದೃಶ್ಯಾವಳಿಗಳ ಆಧಾರದ ಮೇಲೆ ಕೇಸ್ ಮಾಡಲಾಗಿದೆ.

ಅತಿಯಾದ ವೇಗ, ಚಾಲಕರು ಚಾಲಕ ಸೀಟ್ ಬೆಲ್ಟ್ ಧರಿಸದೇ ಇರುವುದು ಹಾಗೂ ಪಕ್ಕದಲ್ಲಿ ಕುಳಿತುಕೊಂಡಿರೋ ವ್ಯಕ್ತಿ ಸೀಟ್ ಬೆಲ್ಟ್ ಧರಿಸದೇ ಇರುವುದು ಈ ಎಲ್ಲಾ ಸಂಚಾರಿ ನಿಯಮ ಉಲ್ಲಂಘನೆ ಮೇಲೆ ಪೊಲೀಸರು ಸಂಬಂಧಪಟ್ಟ ಮಾಲೀಕನ ವಿಳಾಸಕ್ಕೆ ನೋಟಿಸ್ ಕಳುಹಿಸಿದ್ದಾರೆ.

ಸಂಚಾರಿ ಪೊಲೀಸರು ಕಳುಹಿಸಿದ ನೋಟಿಸ್ ತಲುಪಿದ 7 ದಿನದಲ್ಲಿ ಸಂಬಂಧಪಟ್ಟ ಸಂಚಾರಿ ಠಾಣೆಗೆ ಹೋಗಿ ದಂಡ ಪಾವತಿಸಬೇಕು.ಇಲ್ಲದಿದ್ದರೆ ಕಾನೂನು ರೀತಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತದೆ.ದಂಡ ಕಟ್ಟದೇ ಮೊಂಡಾಟ ಮಾಡಿದರೆ 6 ತಿಂಗಳು ಜೈಲು ಅಥವಾ 5,000 ರೂ. ದಂಡ ವಿಧಿಸುವ ಎಚ್ಚರಿಕೆಯನ್ನು ನೋಟಿಸ್‌ನಲ್ಲಿ ನೀಡಲಾಗಿದೆ.

ಏನಿದು ತಂತ್ರಜ್ಞಾನ?

ಎಕ್ಸ್‌ಪ್ರೆಸ್‌ವೇಯಲ್ಲಿ ವೇಗ ನಿಯಂತ್ರಣಕ್ಕೆ ಪೊಲೀಸರು ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಮೊರೆ ಹೊಗಿದ್ದು ಎಐ ಕ್ಯಾಮೆರಾ ಅಳವಡಿಕೆ ಮಾಡಿದ್ದಾರೆ. ರಾಜ್ಯ ರಸ್ತೆ ಸುರಕ್ಷತಾ ಎಡಿಜಿಪಿ ಅಲೋಕ್ ಕುಮಾರ್ ಆದೇಶದ ಮೇರೆಗೆ ಸ್ವಯಂಚಾಲಿತ ನಂಬರ್ ಪ್ಲೇಟ್ ಗುರುತಿಸುವ ಕ್ಯಾಮೆರಾವನ್ನು ಅಳವಡಿಕೆಮಾಡಲಾಗಿದೆ. ವಾಹನದನಂಬರ್‌ನಿಂದ ಆರ್‌ಟಿಒ ಸಂಪರ್ಕ ಪಡೆದು ಮೊಬೈಲಿಗೆ ದಂಡ ಪಾವತಿಸುವಂತೆ ನೋಟಿಸ್ ಬರುತ್ತದೆ.

ಅಪಘಾತ ಇಳಿಕೆ:

ಎಕ್ಸ್‌ಪ್ರೆಸ್‌ವೇನಲ್ಲಿ ಗರಿಷ್ಠ ವೇಗದ ಮಿತಿಯನ್ನು ಗಂಟೆಗೆ 100 ಕಿ.ಮೀ ನಿಗದಿ ಪಡಿಸಲಾಗಿದೆ. ಅಷ್ಟೇ ಅಲ್ಲದೇ ರೆಡಾರ್ ಗನ್ ಮೂಲಕ ಕಾರ್ಯಾಚರಣೆ ನಡೆಸಲಾಗುತ್ತಿದೆ.ವೇಗ ಮಿತಿ ದಾಟಿದರೆ 1000 ರೂ.ದಂಡ ಹಾಗೂ ಡಿಎಲ್ ರದ್ದುಪಡಿಸುವ ಕಠಿಣ ಕ್ರಮಕ್ಕೆ ಪೊಲೀಸರು ಮುಂದಾಗಿದ್ದಾರೆ. ನಿಯಮ ಉಲ್ಲಂಘನೆಯ ಫೋಟೋ ಹಾಗೂ ನೋಟಿಸ್ ನೀಡಿ ದಂಡ ವಸೂಲಿ ಮಾಡಲಾಗುತ್ತಿದೆ.

## ಆರೋಪಿಗೆ ಗುಂಡೇಟು

ಈ ವೇಳೆ ಆರೋಪಿ ಶ್ರೀನಿವಾಸ್ ಪೊಲೀಸ್ ಪೇದೆ ಚಂದ್ರು, ಎಂಬವರ ಮೇಲೆ ಕಲ್ಲಿನಿಂದ ಹಾಗೂ ಚಾಕುವಿನಿಂದ ಹಲ್ಲೆ ಮಾಡಲು ಯತ್ನಿದ್ದಾನೆ. ಈ ವೇಳೆ ಗಾಳಿಯಲ್ಲಿ ಗುಂಡು ಹಾರಿಸಿ ಎಚ್ಚರಿಕೆ ನೀಡಿದರೂ ಆರೋಪಿ ಪೊಲೀಸ್ ಪೇದೆ ಮೇಲೆ ಹಲ್ಲೆ ನಡೆಸಿದ್ದಾನೆ. ಈ ವೇಳೆ ಇನ್ಸ್‌ಪೆಕ್ಟರ್ ಸಾಧಿಕ್ ಪಾಶ ಆರೋಪಿ ಕಾಲಿಗೆ ಗುಂಡು ಹಾರಿಸಿದ್ದು, ಬಳಿಕ ಆತನನ್ನು ಬಂಧಿಸಿದ್ದಾರೆ.

ಗಾಯಗೊಂಡಿರುವ ಪೊಲೀಸ್ ಪೇದೆ ಚಂದ್ರು ಹಾಗೂ ಆರೋಪಿ ಶ್ರೀನಿವಾಸ್‌ಗೆ ದೊಡ್ಡಬಳ್ಳಾಪುರ ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

## ರೀಲ್ಸ್ ನಿಷೇಧ

ಮೇ 10 ರಂದು (ಶುಕ್ರವಾರ) ಚಾರ್ ಧಾಮ್ ಯಾತ್ರೆ ಆರಂಭವಾಗಿದೆ. ತೀರ್ಥಯಾತ್ರೆಯ ಮೊದಲ ಆರು ದಿನಗಳಲ್ಲಿ, ಬುಧವಾರದವರೆಗೆ, ಭಾರತ ಮತ್ತು ವಿದೇಶಗಳಿಂದ ಕನಿಷ್ಠ 3,34,732 ಜನರು ಪ್ರಾರ್ಥನೆ ಸಲ್ಲಿಸಲು ದೇಗುಲಗಳಿಗೆ ಭೇಟಿ ನೀಡಿದ್ದಾರೆ. ಯಾತ್ರೆಗೆ ಏಪ್ರಿಲ್ 25 ರಂದು ನೋಂದಣಿ ಆರಂಭವಾಗಿದ್ದು, ಗುರುವಾರ ಸಂಜೆಯವರೆಗೆ 27 ಲಕ್ಷಕ್ಕೂ ಹೆಚ್ಚು ಭಕ್ತರು ನೋಂದಣಿ ಮಾಡಿಕೊಂಡಿದ್ದಾರೆ.

ವೈದ್ಯಕೀಯ ಇತಿಹಾಸ ಹೊಂದಿರುವ ಹಿರಿಯ ನಾಗರಿಕರು ಯಾತ್ರೆಯನ್ನು ಪ್ರಾರಂಭಿಸುವ ಮುನ್ನ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಆರೋಗ್ಯ ಇಲಾಖೆ ಮಾರ್ಗಸೂಚಿ ಹೊರಡಿಸಿದೆ. ಯಾತ್ರೆಯು ಯಮುನೋತ್ರಿಯಿಂದ ಪ್ರಾರಂಭವಾಗುತ್ತದೆ, ಗಂಗೋತ್ರಿಯ ಕಡೆಗೆ, ಕೇದಾರನಾಥದ ಕಡೆಗೆ ಸಾಗುತ್ತದೆ ಮತ್ತು ಅದು ಅಂತಿಮವಾಗಿ ಬದರಿನಾಥದಲ್ಲಿ ಕೊನೆಗೊಳ್ಳುತ್ತದೆ. ಪ್ರಯಾಣವನ್ನು ರಸ್ತೆ ಅಥವಾ ವಿಮಾನದ ಮೂಲಕ ಪೂರ್ಣಗೊಳಿಸಬಹುದು.

## ಶಿಕ್ಷಣ ವ್ಯವಸ್ಥೆ ವ್ಯಾಪಾರೀಕರಣ

**ಮೈಸೂರು:** ಇಂದಿನ ಶಿಕ್ಷಣ ವ್ಯವಸ್ಥೆ ವ್ಯಾಪಾರೀಕರಣವಾಗುತ್ತಿದೆ. ತಳಪಾಯವಿಲ್ಲದ ಶಿಕ್ಷಣ ಪದ್ಧತಿಯಾಗಿದೆ. ನೈತಿಕ ಮೌಲ್ಯ ಶಿಕ್ಷಣ ಪದ್ಧತಿಯು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಸಹಕಾರಿ ಎಂದು ರಾಜಯೋಗಿನಿ ಬ್ರಹ್ಮಾಕುಮಾರಿ ಆಶಾಜೀ ಅಭಿಪ್ರಾಯ ಪಟ್ಟರು. ಅವರುಲಷ್ಕರ್ ಮೊಹಲ್ಲಾದಲ್ಲಿರುವ ಅಂತರಾಷ್ಟ್ರೀಯ ಅಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ಏರ್ಪಡಿಸಿದ್ದ 3 ದಿನಗಳ ಚಿಣ್ಣರ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಬಹುಮಾನ ವಿತರಿಸಿ ಮಾತನಾಡುತ್ತಿದ್ದರು. ಇಂದಿನ ಮಕ್ಕಳಿಗೆ ಗುರುಕುಲ ಶಿಕ್ಷಣ ಪದ್ಧತಿಯೂ ಸಹ ಅವಶ್ಯಕ. ಹಿಂದೆ ರಾಮ ಕೃಷ್ಣಾ ದಿಯಾಗಿ ಗುರುಕುಲದಲ್ಲೇ ಅಭ್ಯಾಸ ಮಾಡಿದರು. ಗುರುಗಳ ಸೇವೆ ಮಾಡಿ ನಂತರ ವಿದ್ಯಾಭ್ಯಾಸ ಮಾಡುತ್ತಿದ್ದರು ಎಂದರು. ಓಂ ಶಾಂತಿ ನ್ಯೂಸ್ ಸರ್ವಿಸ್ನ ಬಿಕೆ ಆರಾಧ್ಯ ಮಾತನಾಡಿ ಮಕ್ಕಳ ಮನೋವಿಕಾಸಕ್ಕೆ ಆಧ್ಯಾತ್ಮಿಕ ಜ್ಞಾನ ಧ್ಯಾನ ಕಲೆ ಸಂಸ್ಕೃತಿ ಅಜ್ಜಿ ಹೇಳುವ ಕತೆಗಳು ಇವೆಲ್ಲವು ಶಿಬಿರದಲ್ಲಿ ಮಕ್ಕಳಿಗೆ ಪ್ರಭಾವ ಬೀರಿದೆ ಎಂದರು,ಮಕ್ಕಳು ತಾವೇ ತಯಾರಿಸಿದ ಕಿರೀಟವನ್ನು ಧರಿಸಿಕೊಂಡು ಸಂಭ್ರಮಿಸಿದರು. ಶಿಬಿರದ ಸಮಾರೋಪ ಸಮಾರಂಭದಲ್ಲಿ ಸುಶೀಲ ,ನೇತ್ರ,ಸಂಗೀತ,ವೇದ,ಸರಳ,ಅನಿತ,ಲೋಕೇಶ್ ,ಹರ್ಷ,ಹಾಜರಿದ್ದರು.



## ಪಿಎಲ್‌ಡಿ ಬ್ಯಾಂಕ್ ಉಪಾಧ್ಯಕ್ಷರಾಗಿ ಪ್ರಕಾಶ್ ಕೊತ್ತಗೆರೆ ಆಯ್ಕೆ

**ಮಂಡ್ಯ:** ಪ್ರಾಥಮಿಕ ಸಹಕಾರ ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನ ಉಪಾಧ್ಯಕ್ಷರಾಗಿ ಪ್ರಕಾಶ್ ಎಂ ದೊಡ್ಡ ಕೊತ್ತಗೆರೆ ಅವರು ಅವಿರೋಧವಾಗಿ ಆಯ್ಕೆಗೊಂಡರು,

ಅರವಿಂದ್ ಚಿಕ್ಕಬಳ್ಳಿ ಅವಧಿ ಮುಗಿದ ಹಿನ್ನೆಲೆ ತಮ್ಮ ಉಪಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದರು ಮುಂದಿನ ಅವಧಿಗೆ ಉಪಾಧ್ಯಕ್ಷ ಸ್ಥಾನಕ್ಕೆ ಪ್ರಕಾಶ್ ಎಂ ದೊಡ್ಡ ಕೊತ್ತಗೆರೆ ಅವರನ್ನು ಬಿಟ್ಟು ಬೇರೆ ಯಾರು ನಾಮಪತ್ರ ಸಲ್ಲಿಸದ ಕಾರಣ ಚುನಾವಣಾ ಅಧಿಕಾರಿ ರವಿಯವರು ಅವಿರೋಧವಾಗಿ ಆಯ್ಕೆ ಮಾಡದರು,

ನಂತರ ಸಂಘದ ವತಿಯಿಂದ ಪ್ರಕಾಶ್ ಎಂ ದೊಡ್ಡ ಕೊತ್ತಗೆರೆ ಅವರನ್ನು ಸನ್ಮಾನಿಸಿ



ಅಭಿನಂದನೆ ಸಲ್ಲಿಸಲಾಯಿತು ನಂತರ ಮಾತನಾಡಿದವರು ಪಿ ಎಲ್ ಡಿ ಬ್ಯಾಂಕ್ ನ ಉಪಾಧ್ಯಕ್ಷ ಸ್ಥಾನ ಖಾಲಿ ಇದ್ದ ಸ್ಥಾನಕ್ಕೆ ನನ್ನನ್ನು ಒಮ್ಮತದಿಂದ ಅವಿರೋಧವಾಗಿ ಆಯ್ಕೆ ಮಾಡಿರುವುದು ಸಂತಸ ತಂದಿದೆ ಎಲ್ಲಾ ಸದಸ್ಯರಿಗೂ ಚಿರಋಣಿಯಾಗಿದ್ದು ಎಲ್ಲಾ ಸದಸ್ಯರೊಂದಿಗೆ ಒಗ್ಗೂಡಿ ಅಭಿವೃದ್ಧಿ ಕೆಲಸದಲ್ಲಿ ಕೈಜೋಡಿಸುತ್ತೇನೆ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು, ಕಾರ್ಯಕ್ರಮದಲ್ಲಿ ಪಿ ಎಲ್ ಡಿ ಬ್ಯಾಂಕ್ ನ ಅಧ್ಯಕ್ಷರಾದ ಸುನಂದ ಸಿದ್ದರಾಮು ನಿರ್ದೇಶಕರಾದ ಬೇಲೂರು ಸೋಮಶೇಖರ್ ಅರವಿಂದ್ ಚಿಕ್ಕ ಬಳ್ಳಿ, ಎಚ್ ಸಿ ಶಿವಲಿಂಗೇಗೌಡ ಹೊಸಳ್ಳಿ, ಬಿ ಎಲ್ ಬೋರೇಗೌಡ ,ಟಿ ಬಿ ಶಿವಲಿಂಗೇಗೌಡ, ಮರಿಗೌಡ, ಎಂ ಯೋಗೇಶ್, ಬಿ ಕೆ ರಾಮೇಗೌಡ ,ಚಿಕ್ಕ ಬೆಟ್ಟಯ್ಯ, ಬಿ ಸವಿತಾ, ಸರಸ್ವತಿ, ಶಿವಾರ ನಂಜುಂಡ, ಎಂ ಕೃಷ್ಣೇಗೌಡ, ಹಾಜರಿದ್ದರು.

## ರಸ್ತೆಗೆ ಅಡ್ಡಲಾಗಿ ನಿರ್ಮಿಸಿದ್ದ ಮನೆ ತೆರವು

**ಚಾಮರಾಜನಗರ:** ನಗರಸಭೆಯ ನಗರದ 15ನೇ ವಾರ್ಡ್‌ನ ಸೋಮಣ್ಣ ಲೇ ಔಟ್‌ನಲ್ಲಿ ಸಾರ್ವಜನಿಕ ರಸ್ತೆಗೆ ಅಡ್ಡಲಾಗಿ ನಿರ್ಮಿಸಿದ್ದ ಮನೆಯನ್ನು ನಗರಸಭೆ ಅಧಿಕಾರಿಗಳು ಗುರುವಾರ ತೆರವುಗೊಳಿಸಿದರು.

ಚಾಮರಾಜನಗರದ ಸೋಮಣ್ಣ ಲೇ ಔಟ್ ಬಡಾವಣೆಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಅಕ್ರಮವಾಗಿ ಮನೆ ನಿರ್ಮಾಣ ಮಾಡಿಕೊಂಡಿದ್ದಾರೆ ಎಂದು ಬಡಾವಣೆಯ ನಿವಾಸಿಗಳು ನ್ಯಾಯಾಲಯದ ಮೊರೆ ಹೋಗಿದ್ದರು. ಇತ್ತೀಚೆಗೆ ಮನೆ ತೆರವು ಮಾಡುವಂತೆ ಕೋರ್ಟ್ ಆದೇಶಿಸಿತ್ತು.

ನ್ಯಾಯಾಲಯದ ಆದೇಶದಂತೆ ಗುರುವಾರ ಪೊಲೀಸರ ಭದ್ರತೆ, ಜೆಸಿಬಿಯೊಂದಿಗೆ ಮನೆ ಬಳಿ ತೆರಳಿದ ಅಧಿಕಾರಿಗಳು ಮನೆ ಖಾಲಿ ಮಾಡುವಂತೆ ಕುಟುಂಬದವರನ್ನು ಮನವೊಲಿಸಲು ಯತ್ನಿಸಿದರು. ಈ ವೇಳೆ ಮನೆಯ ಮಾಲೀಕ ಸಿದ್ದರಾಜು ನಗರಸಭೆ ವತಿಯಿಂದ ನಿವೇಶನ ನೀಡಿ ಮನೆ ನಿರ್ಮಿಸಿಕೊಡುವ ತನಕ ಮನೆಯನ್ನು ತೆರವು ಮಾಡಲ್ಲ ಎಂದು ಪಟ್ಟುಹಿಡಿದರು.

ನಗರಸಭೆ ಕಂದಾಯ ಅಧಿಕಾರಿ ಶರವಣ ಮಾತನಾಡಿ, ನಗರಸಭೆಗೆ ಸೇರಿದ ನಿವೇಶನ ನೀಡಲಾಗುವುದು. ಮನೆ ತೆರವು ಮಾಡಿದ ನಂತರ ಕುಟುಂಬಕ್ಕೆ ಬಾಡಿಗೆ ಮನೆ ವ್ಯವಸ್ಥೆ




ಮಾಡಲಾಗುವುದು. ಆ ನಂತರ ನಗರಸಭೆ ವತಿಯಿಂದ ಬೇರೆ ಕಡೆ ನಿವೇಶನ ನೀಡಿ ಮನೆ ನಿರ್ಮಿಸಿಕೊಡಲಾಗುವುದು ಎಂದು ಭರವಸೆ ನೀಡಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಕುಟುಂಬ ಮನೆ ನಿರ್ಮಿಸಿ ಕೊಟ್ಟ ಮೇಲೆ ತೆರವುಗೊಳಿಸಿ ಎಂದು ಪಟ್ಟುಹಿಡಿದರು.

ಮನೆ ತೆರವುಗೊಳಿಸುವಂತೆ ನೋಟಿಸ್ ನೀಡದೆ ಪೊಲೀಸರನ್ನು ಕರೆ ತಂದು ಏಕಾಏಕಿ ತೆರವುಗೊಳಿಸಲು ಮುಂದಾಗಿರುವುದು ಖಂಡನೀಯ. ಮೇಲ್ವರ್ಗದವರು ಸೇರಿ ತಳಸಮುದಾಯದ ಕುಟುಂಬವನ್ನು ತೆರವು ಗೊಳಿಸಲು ಮುಂದಾಗಿದ್ದಾರೆ ಎಂದು ಕುಟುಂಬದವರು ದೂರಿದರು.

ಈ ವೇಳೆ ಕುಟುಂಬದವರು ನಗರಸಭೆಯ ಅಧಿಕಾರಿಗಳ ನಡುವೆ ಕೆಲಕಾಲ ವಾಗ್ವಾದ ನಡೆಯಿತು. ಬಳಿಕ ಕುಟುಂಬದವರು ಮನೆ ಒಳಗೆ ಹೋಗಿ ಬೀಗ ಹಾಕಿಕೊಂಡರು. ಮನೆಗೆ ತೆರಳಿದ ಪೊಲೀಸರು ಕುಟುಂಬವನ್ನು ವಶಕ್ಕೆ ಪಡೆದು ಜೆಸಿಬಿಗಳ ಮೂಲಕ ಮನೆಯನ್ನು ಕೆಡವಲಾಯಿತು.

ಘಿಮನೆ ಕಳೆದುಕೊಂಡ ಕುಟುಂಬವನ್ನು ಬಾಡಿಗೆ ಮನೆಗೆ ಸ್ಥಳಾಂತರಿಸಿದ್ದು, ನಗರಸಭೆ ವತಿಯಿಂದಲೇ ಬಾಡಿಗೆ ಪಾವತಿಸಲಾಗುತ್ತದೆ. ನಗರಸಭೆಯಿಂದ ಉಚಿತ ನಿವೇಶನ ಹಾಗೂ ಮನೆ ನಿರ್ಮಾಣ ಮಾಡಿಕೊಡುವಂತೆ ತಹಸೀಲ್ದಾರ್ ಬಸವರಾಜ್ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು. ನಗರಸಭಾ ಪೌರಾಯುಕ್ತ ರಾಮದಾಸ್, ಆರೋಗ್ಯಾಧಿಕಾರಿಗಳಾದ ಮಂಜುನಾಥ್, ಪುಷ್ಪ, ಡಿವೈಎಸ್ಪಿ ಲಕ್ಷ್ಮಯ್ಯ, ಇನ್ಸ್‌ಪೆಕ್ಟರ್ ರಾಜೇಶ್ ಸೇರಿದಂತೆ ನಗರಸಭೆಯ ಅಧಿಕಾರಿಗಳು ಹಾಜರಿದ್ದರು.

# ಸುತ್ತಮುತ್ತಲಿನ ಪ್ರದೇಶ ಸ್ವಚ್ಛವಾಗಿಟ್ಟು ಡೆಂಗ್ಯೂ ಹರಡುವಿಕೆ ತಡೆಗಟ್ಟಿ



**ಮಂಡ್ಯ:** ಡೆಂಗ್ಯೂ ಜ್ವರ ಸೊಳ್ಳೆಗಳ ಮೂಲಕ ಒಬ್ಬರಿಂದ ಇನ್ನೊಬ್ಬರಿಗೆ ಹರಡುತ್ತದೆ. ಮುಂಗಾರು ಮಳೆ ಪ್ರಾರಂಭವಾಗಿದ್ದು, ಹೆಚ್ಚಾಗಿ ಸೊಳ್ಳೆಗಳು ನಿಂತ ನೀರಿನಲ್ಲಿ ಉತ್ಪತ್ತಿಯಾಗುತ್ತವೆ. ಪ್ರತಿಯೊಬ್ಬರು ತಮ್ಮ ಮನೆ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಿ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.

ಅವರು ಇಂದು ಮಂಡ್ಯ ನಗರದ ಸಂಜಯ್ ವೃತ್ತದಲ್ಲಿ ಡೆಂಗ್ಯೂ ಜಾಗೃತಿ ಜಾಥಾ ಮತ್ತು ಮಾನವ ಸರಪಳಿ ಉದ್ಘಾಟನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ನಗರದ ಸಂಜಯ್ ವೃತ್ತದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಏರ್ಪಡಿಸಿದ್ದ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳು ಡೆಂಗ್ಯೂ ನಿಯಂತ್ರಣದ ಘೋಷವಾಕ್ಯ ಕೂಗುತ್ತಾ ಸಂಜಯ್ ವೃತ್ತದಲ್ಲಿ ಮಾನವ ಸರಪಳಿ ಮಾಡಿ ಡೆಂಗ್ಯೂ ನಿಯಂತ್ರಣದ ಬಗ್ಗೆ ಅರಿವು ಮೂಡಿಸಿದರು.

ಮೇ 16 ರಂದು ಆರೋಗ್ಯ ಇಲಾಖೆಯಿಂದ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಯನ್ನು ಆಚರಣೆ ಮಾಡಲಾಗುತ್ತದೆ. ಡೆಂಗ್ಯೂ ನಿಯಂತ್ರಣದ ಜಾಗೃತಿ ಜಾಥಾ ಕಾರ್ಯಕ್ರಮ ಮಾಡುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತಹ ಕೆಲಸ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಸಾರ್ವಜನಿಕರು ಡೆಂಗ್ಯೂ ಜ್ವರದ ಲಕ್ಷಣಗಳು ಕಂಡು ಬಂದರೆ ತಕ್ಷಣ ಹತ್ತಿರದ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆದುಕೊಳ್ಳಬೇಕು. ಮುನ್ನಚ್ಚರಿಕಾ ಕ್ರಮಗಳನ್ನು ಅನುಸರಿಸಿ ರೋಗ ಹರಡದಂತೆ ನೋಡಿಕೊಳ್ಳಬೇಕು ಎಂದರು.

ರೋಗ ಬರುವುದಕ್ಕೂ ಮುಂಚಿತವಾಗಿ ನಾವುಗಳು ನಮ್ಮ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛ ವಾಗಿಟ್ಟುಕೊಂಡರೆ ರೋಗ ಹರಡುವುದಿಲ್ಲ ಎಂದರು.

ಜಿಲ್ಲಾ ಆರೋಗ್ಯಧಿಕಾರಿ ಡಾ.ಕೆ. ಮೋಹನ್ ರವರು ಮಾತನಾಡಿ, ರಾಷ್ಟ್ರೀಯ ಡೆಂಗ್ಯೂ ದಿನಾಚರಣೆಯನ್ನು ಈ ಬಾರಿ ಸಮುದಾಯದೊಂದಿಗೆ ಸೇರಿ ಡೆಂಗ್ಯೂ ನಿಯಂತ್ರಿಸೋಣ ಎಂಬ ಘೋಷ ವಾಕ್ಯದೊಂದಿಗೆ ಆಚರಿಸಲಾಗುತ್ತಿದೆ. ಡೆಂಗ್ಯೂ ಜ್ವರವು ಸೊಳ್ಳೆಯಿಂದ ಹರಡುವಂತಹದ್ದು ಒಬ್ಬರಿಂದ ಮತ್ತೊಬ್ಬರಿಗೆ ಬರುವಂತಹ ಖಾಯಿಲೆ ಇದು ಆದ್ದರಿಂದ ಪ್ರತಿಯೊಬ್ಬರು ತಮ್ಮ ತಮ್ಮ ಮನೆಯ ಸುತ್ತ-ಮುತ್ತ ಸ್ವಚ್ಛತಾ ಕಾಪಾಡಿಕೊಳ್ಳಿಬೇಕು ಎಂದರು. ತೀವ್ರ ಜ್ವರ, ಕಣ್ಣು ಹಿಂಭಾಗ ನೋವು, ತೀರ ಮೈ-ಕೈ ನೋವು ಡೆಂಗ್ಯೂ ರೋಗದ ಲಕ್ಷಣಗಳು. ಈ ರೋಗ ಬರದಂತೆ ತಡೆದುಕೊಳ್ಳುವುದೇ ಮೂಲ ಉದ್ದೇಶವಾಗಿರುತ್ತದೆ, ಸೊಳ್ಳೆಗಳು ಉತ್ಪತ್ತಿ ಆಗದಂತೆ ನೋಡಿಕೊಳ್ಳುವುದು, ಮನೆ ಆವರಣದಲ್ಲಿ ನೀರು ನಿಲ್ಲದಂತೆ ಸ್ವಚ್ಛತಾ ಕಾಪಾಡಿಕೊಳ್ಳಬೇಕು ಹಾಗೂ ಈ ರೋಗದ ಲಕ್ಷಣಗಳು ಕಂಡು ಬಂದಲ್ಲಿ ತಕ್ಷಣ ವೈದ್ಯರನ್ನು ಸಂಪರ್ಕಿಸಿ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಲೇರಿಯಾ ನಿಯಂತ್ರಣಾಧಿಕಾರಿ ಡಾ ಕಾಂತರಾಜ, ಕುಷ್ಠರೋಗ ನಿರ್ಮೂಲನ ಅಧಿಕಾರಿ ಡಾ ಕೆ ಸೋಮಶೇಖರ್, ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಎಮ್.ಎನ್ ಆಶಾಲತಾ ಸೇರಿದಂತೆ ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜೂ. 21ಕ್ಕೆ ಸರ್ಕಾರಿ ನೌಕರರ ಕ್ರೀಡಾಕೂಟ



**ಬೆಂಗಳೂರು ಗ್ರಾಮಾಂತರ:** 2023-24 ನೇ ಸಾಲಿನ ತಾಲೂಕು ಮತ್ತು ಜಿಲ್ಲಾ ಮಟ್ಟದ ಸರಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಯನ್ನು ಜೂನ್. 21 ರಂದು ಹೊಸಕೋಟೆಯ ಚನ್ನಭೈರೇಗೌಡ ಕ್ರೀಡಾಂಗಣದಲ್ಲಿ ಆಯೋಜಿಸಲು ನಿಗದಿಪಡಿಸಲಾಗಿದ್ದು, ಅಗತ್ಯ ಸಿದ್ಧತೆ ಕೈಗೊಳ್ಳಲು ಜಿಲ್ಲಾಧಿಕಾರಿ ಡಾ. ಎನ್.ಶಿವಶಂಕರ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ದೇವನಹಳ್ಳಿ ತಾಲೂಕಿನ ಬೀರಸಂದ್ರ ಗ್ರಾಮದ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ಗುರುವಾರ ನಡೆದ 2023-24ನೇ ಸಾಲಿನ ತಾಲೂಕು ಮತ್ತು ಜಿಲ್ಲಾ ಮಟ್ಟದ ಸರಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ಆಯೋಜನೆ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ, ದೊಡ್ಡಬಳ್ಳಾಪುರ, ನೆಲಮಂಗಲ ಮತ್ತು ಹೊಸಕೋಟೆ ತಾಲ್ಲೂಕುಗಳ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಜೂನ್. 21 ರಂದು ಹೊಸಕೋಟೆ ಟೌನ್ ನಲ್ಲಿರುವ ಚನ್ನಭೈರೇಗೌಡ ಕ್ರೀಡಾಂಗಣದಲ್ಲಿ ಆಯೋಜನೆ ಮಾಡಲು ನಿರ್ಧರಿಸಲಾಗಿದೆ, ಕ್ರೀಡಾಕೂಟದಲ್ಲಿ ಕ್ರೀಡಾ ಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕ್ರಮವಹಿಸಿ ಎಂದರು.

ಕ್ರೀಡಾಕೂಟ ನಡೆಯುವ ಸಂದರ್ಭದಲ್ಲಿ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಿ, ಆರೋಗ್ಯ ಇಲಾಖೆಯಿಂದ ಆಂಬುಲೆನ್ಸ್ ಸೇವೆ, ಕ್ರೀಡಾಪಟುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ತಾಲ್ಲೂಕು ಮಟ್ಟದಲ್ಲಿ ಎಸಿ, ತಹಶೀಲ್ದಾರ್, ಕಾರ್ಯ ನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ಹಾಗೂ ಶಿಷ್ಟಾಚಾರದಂತೆ ಜನಪ್ರತಿನಿಧಿಗಳ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ಆಯೋಜಸಿ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೆ ರಮೇಶ್, ಹೊಸಕೋಟೆ ತಹಶೀಲ್ದಾರ್ ವಿಜಯ್ ಕುಮಾರ್, ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಬಾಲಕೃಷ್ಣ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಜಯಲಕ್ಷ್ಮೀ ಟಿ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು, ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷರು, ದೈಹಿಕ ಶಿಕ್ಷಣ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ತೆರಿಗೆ ವಸುಲಾತಿ ಆಂದೋಲನ



**ವಿಜಯಪುರ:** ಪಟ್ಟಣದಲ್ಲಿ ಪುರಸಭೆ ವತಿಯಿಂದ ಆಸ್ತಿ ತೆರಿಗೆ ವಸೂಲಾತಿ ಆಂದೋಲನ ಅಭಿಯಾನವನ್ನು ಏರ್ಪಡಿಸಲಾಗಿದ್ದು, ಪಟ್ಟಣದ 23 ವಾರ್ಡ್ಗಳಲ್ಲಿ ಪ್ರತಿದಿನ ಒಂದೊಂದು ವಾರ್ಡ್ಗಳಲ್ಲಿ ಪುರಸಭೆಯ ಸಿಬ್ಬಂದಿ ವರ್ಗ ಆಸ್ತಿ ತೆರಿಗೆ ವಸೂಲಾತಿಗಾಗಿ ಅಭಿಯಾನವನ್ನು ರೂಪಿಸಿಕೊಂಡಿದ್ದು, ಅದರ ಮೇರೆಗೆ ಗುರುವಾರದಂದು ಜೆಸಿ ಬಡಾವಣೆಯಲ್ಲಿ ಆಸ್ತಿ ತೆರಿಗೆ ವಸೂಲಾತಿ ಆಂದೋಲನ ಏರ್ಪಡಿಸಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಕಂದಾಯ ಅಧಿಕಾರಿ ಚಂದ್ರುರವರು ಮಾತನಾಡಿ, ಜುಲೈ 2024ರವರೆಗೂ ಕಂದಾಯ ಪಾವತಿಗೆ ಅವಕಾಶ ಇದ್ದು, ಜುಲೈ ನಂತರ ಪ್ರತಿ ತಿಂಗಳಿಗೆ ಶೇಕಡ ಎರಡರಷ್ಟು ದಂಡದೊಂದಿಗೆ ತೆರಿಗೆ ಪಾವತಿಸಬೇಕಾಗುತ್ತದೆ ಎಂದು ತಿಳಿಸಿದರು.

ಕಂದಾಯ ನಿರೀಕ್ಷಕರಾದ ತ್ಯಾಗರಾಜರವರು ಮಾತನಾಡಿ, 2024-25 ನೇ ಸಾಲಿನ ಹಾಗೂ ಹಿಂದಿನ ವರ್ಷಗಳ ಸ್ವಯಂಘೋಷಿತ ಆಸ್ತಿ ತೆರಿಗೆ ಪಾವತಿಸದೆ ಇರುವ ಆಸ್ತಿ ಮಾಲೀಕರುಗಳಿಗೆ ಆಸ್ತಿ ತೆರಿಗೆ ಪಾವತಿಸಲು ಅನುಕೂಲವಾಗುವಂತೆ ಈ ತೆರಿಗೆ ವಸೂಲಾತಿ ಆಂದೋಲನವನ್ನು ಎಲ್ಲಾ ವಾರ್ಡ್ಗಳಲ್ಲಿಯೂ ನಿಗದಿಪಡಿಸಿದ ಸ್ಥಳಗಳಲ್ಲಿ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಇದರ ಅನುಕೂಲ ಪಡೆದುಕೊಂಡು ಆಸ್ತಿ ತೆರಿಗೆಯೊಂದಿಗೆ ನೀರಿನ ಶುಲ್ಕ, ವಾಣಿಜ್ಯ ಮಾಳಿಗೆಗಳ ಬಾಡಿಗೆ,ಉದ್ದಿಮೆ ಪರವಾನಗಿ ಶುಲ್ಕ, ಜಾಹೀರಾತು ಶುಲ್ಕ ಹಾಗೂ ಯುಜಿಡಿ ಶುಲ್ಕಗಳನ್ನು ಸ್ಥಳದಲ್ಲಿಯೇ ಪಾವತಿಸಿ ರಸೀದಿ ಪಡೆಯಬಹುದೆಂದು ತಿಳಿಸಿದರು.

ಶುಲ್ಕ ಪಾವತಿಗಾಗಿ ಆನ್ಲೈನ್ ಗಳಾದ ಫೋನ್ ಪೇ, ಗೂಗಲ್ ಪೇ ಮತ್ತಿತರ ಯುಪಿಐ ಆಪ್ ಗಳ ಮೂಲಕ ತೆರಿಗೆ ಪಾವತಿಸಿ ರಸೀದಿ ನೀಡಲಾಗುವುದೆಂದು ತಿಳಿಸಿರುವರು. ಮೇ 17ರ ಶುಕ್ರವಾರದಂದು ಭರತ್ ನಗರದ ಅಂಗನವಾಡಿ ಕೇಂದ್ರದ ಬಳಿ, ಮೇ 18ರ ಶನಿವಾರದಂದು ರಹಮತ್ ನಗರದ ಮಸೀದಿ ಬಳಿ, ಮೇ 20ರ ಸೋಮವಾರದಂದು ಶಿಡ್ಲಘಟ್ಟ ಡಿವಿಷನ್ ರಸ್ತೆಯ ಬಳಿ, ಮೇ 21ರ ಮಂಗಳವಾರದಂದು ಸುಣ್ಣಕಲ್ಲು ಬೀದಿಯ ಎಲ್ಲಮ್ಮ ತಾಯಿ ದೇವಸ್ಥಾನದ ಬಳಿ, ಮೇ 22ರ ಬುಧವಾರದಂದು ಕೇಶವ ಸ್ವಾಮಿ ದೇವಾಲಯ ರಸ್ತೆಯ ಬ್ರಾಹ್ಮಣ ಕಲ್ಯಾಣ ಮಂಟಪದ ಬಳಿ, ಇದೇ ರೀತಿ ಮಹಬೂಬ್ ನಗರದ ನೂರಾನಿ ಮಸೀದಿ ಬಳಿ, ಕೋಟೆ ಬೀದಿಯ ಆನೇಕಲ್ ಛತ್ರದ ಬಳಿ, ಇಂದಿರಾನಗರ ಅಂಗನವಾಡಿ ಕೇಂದ್ರದ ಬಳಿ, ಮಂಡಿ ಬೆಲೆ ರಸ್ತೆಯ ಅಂಗನವಾಡಿ ಕೇಂದ್ರ, ಮಾರ್ಕೆಟ್ ರಸ್ತೆ ರಾಜೀವ್ ನಗರ, ಪ್ರಶಾಂತನಗರ, ಸೂಲಾಲದಿನ್ನೆ, ಬಲಿಜಬೀದಿ, ದುರ್ಗಾ ತಾಯಿ ಕಾಲೋನಿ, ಶಾಂತಿನಗರ ದರ್ಗಾ ಮೊಹಲ್ಲ, ರೆಡ್ಡಿ ಬೀದಿಗಳಲ್ಲಿ ಕಂದಾಯ ವಸೂಲಾತಿ ಆಂದೋಲನದ ಪ್ರಯುಕ್ತ ನಿಗದಿತ ದಿನಗಳಂದು ಪುರಸಭೆ ಸಿಬ್ಬಂದಿ ಸ್ಥಳದಲ್ಲಿಯೇ ಕಂದಾಯ ವಸೂಲಾತಿ ಮಾಡಿ ರಶೀದಿಗಳನ್ನು ನೀಡಲಿರುವರೆಂದು, ಸೌಲಭ್ಯವನ್ನು ಸಾರ್ವಜನಿಕರು ಬಳಸಿಕೊಳ್ಳಬೇಕೆಂದು ತಿಳಿಸಿರುವರು

ಪುರಸಭೆಯ ತೆರಿಗೆ ವಸೂಲಿದಾರರುಗಳಾದ ಪ್ರಥಮ ದರ್ಜೆ ಗುಮಾಸ್ತರಾದ ಅನಿಲ್, ಜೋಶಿ, ಸಹಾಯಕರುಗಳಾದ ಜನಾರ್ದನ್, ಮಂಜು ನಾಥ್, ಮಮತಾ, ಪೂರ್ಣಿಮಾ, ಆಶಾ ರವರುಗಳಿದ್ದು, ಸಂಜೆ ವೇಳೆಗೆ 25ಕ್ಕೂ ಹೆಚ್ಚು ಮಂದಿ ಸ್ಥಳದಲ್ಲಿಯೇ ಕಂದಾಯ ಪಾವತಿ ಮಾಡಿದ್ದರು.

# ಜಿಲ್ಲಾಡಳಿತದಿಂದ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ




**ಚಿಕ್ಕಬಳ್ಳಾಪುರ:** ಪ್ರತಿಯೊಬ್ಬರೂ ತಮ್ಮ ಮನೆಗಳಲ್ಲಿ ಹಾಗೂ ಸುತ್ತ ಮುತ್ತಲ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ಕಾಪಾಡುವುದರಿಂದ ಚಿಕ್ಕಬಳ್ಳಾಪುರವನ್ನು ಡೆಂಗ್ಯೂ ಮುಕ್ತ ಜಿಲ್ಲೆಯನ್ನಾಗಿ ಮಾಡಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್ ಮಹೇಶ್ ಕುಮಾರ್ ಅವರು ತಿಳಿಸಿದರು.

ಜಿಲ್ಲಾಡಳಿತ ಮತ್ತು ಜಿಲ್ಲಾ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ವಿಶ್ವ ಡೆಂಗ್ಯೂ ನಿಯಂತ್ರಣ ದಿನಾಚರಣೆ ಅಂಗವಾಗಿ ಇಂದು ಹಮ್ಮಿ ಕೊಂಡಿದ್ದ ಜಾಗೃತಿ ಜಾಥಾಗೆ ಅವರು ಚಾಲನೆ ನೀಡಿ ಮಾತನಾಡಿದರು.

ರಾಷ್ಟ್ರೀಯ ಡೆಂಗ್ಯೂ ದಿನಾಚರಣೆಯನ್ನು ಸಮುದಾಯದೊಂದಿಗೆ ಸೇರಿ ಡೆಂಗ್ಯೂ ಜ್ವರವನ್ನು ನಿಯಂತ್ರಿಸೋಣ ಎಂಬ ಈ ವರ್ಷದ ಘೋಷ ವಾಕ್ಯದೊಂದಿಗೆ ಆಚರಣೆ ಮಾಡಲಾಗುತ್ತಿದೆ. ಅದರ ಪ್ರಯುಕ್ತ ಇಂದು ಚಿಕ್ಕಬಳ್ಳಾಪುರ ನಗರದ ತಾಯಿ ಮತ್ತು ಮಕ್ಕಳು ಆಸ್ಪತ್ರೆಯಿಂದ ಅಂಬೇಡ್ಕರ್ ವೃತ್ತದ ವರೆಗೂ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಡೆಂಗಿ, ಚಿಕುಂಗುನ್ಯ ಜ್ವರವು ವೈರಸ್ ನಿಂದ ಉಂಟಾಗುತ್ತದೆ. ಹಗಲು ಹೊತ್ತಿನಲ್ಲಿ ಕಚ್ಚುವ ಈಡಿಸ್ ಸೊಳ್ಳೆಗಳಿಂದ ಡೆಂಗಿ, ಚಿಕುಂಗುನ್ಯ ಒಬ್ಬರಿಂದ ಮತ್ತೊಬ್ಬರಿಗೆ ಹರಡುತ್ತದೆ. ಈ ಜ್ವರವು ರಕ್ತ ಪರೀಕ್ಷೆಯಿಂದ ಪತ್ತೆ ಹಚ್ಚಬಹುದು. ಈಡಿಸ್ ಸೊಳ್ಳೆಗಳು ಮನೆಯಲ್ಲಿನ ಸ್ವಚ್ಛ ನೀರಿನ ಸಂಗ್ರಹಗಳಲ್ಲಿ ಉತ್ಪತ್ತಿಯಾಗುತ್ತವೆ.ಅಂತಹ ನೀರಿನ ತಾಣಗಳನ್ನು ವಾರಕ್ಕೆ ಒಮ್ಮೆ ನೀರನ್ನು ಖಾಲಿ ಮಾಡಿ ಸ್ವಚ್ಛ ಮಾಡಬೇಕು ಎಂದರು.



ಬಾವಿಗೆ ಬಿದ್ದ ನಾಯಿ ಮರಿಯನ್ನು ಯಾವುದೇ ಹಾನಿಯಾಗದಂತೆ ಸುರಕ್ಷಿತವಾಗಿ ಅಗ್ನಿಶಾಮಕ ದಳ ಹಾಗೂ ಗ್ರಾಮಸ್ಥರ ಸಹಕಾರದೊಂದಿಗೆ ಮೇಲೆತ್ತಿ ರಕ್ಷಣೆ ಮಾಡಿದ ಘಟನೆ ತಿಪಟೂರಿನ ಬಿದರೆಗುಡಿಯ ಬಿದರೆಮ್ಮ ದೇವಾಲಾಯದ ಆವರಣದಲ್ಲಿ ನೆಡೆಯಿತು.

## ಡಿಶ್ ಟಿವಿಸ್ಮಾರ್ಟ್+ ಸೌಲಭ್ಯದಿಂದ ಟಿವಿ, ಒಟಿಟಿ ಉಚಿತವಾಗಿ ನೋಡುವ ಅವಕಾಶ

**ಬೆಂಗಳೂರು:** ಕ್ರಾಂತಿಕಾರಿ ಯೋಜನೆಯೊಂದಿಗೆ ಡಿಶ್ ಟಿವಿ ಭಾರತದಲ್ಲಿ ಮನೋರಂಜನಾ ಕ್ಷೇತ್ರವನ್ನು ಮರುವ್ಯಾಖ್ಯಾನಿಸುತ್ತಿದೆ. ಇದಕ್ಕಾಗಿ ಅತಿದೊಡ್ಡ ಒಟಿಟಿ ಪೂರೈಕೆದಾರರಾದ ಡಿಶ್ ಟಿವಿ ಸ್ಮಾರ್ಟ್+ ಅನ್ನುಅನಾವರಣಗೊಳಿಸಲಾಗಿದೆ. ಇದು ಕ್ರಾಂತಿಕಾರಿ ಕೊಡುಗೆಯಾಗಿದೆ. ಈ ನೂತನ ಸೇವೆಯಲ್ಲಿ ಯಾವುದೇ ಪರದೆಯಲ್ಲಿ, ಎಲ್ಲಿಯಾದರೂ ಟಿವಿ ಮತ್ತು ಒಟಿಟಿ ವಿಷಯಕ್ಕೆ ಗ್ರಾಹಕರಿಗೆ ಉಚಿತ ಪ್ರವೇಶ ನೀಡುವ ಮೂಲಕ ಉದ್ಯಮ ಒಂದು ಅದ್ಭುತ ಮೈಲಿಗಲ್ಲನ್ನು ಸಾಧಿಸಿದೆ. ಸೇವೆಗಳನ್ನುಅನಾವರಣಗೊಳಿಸಿದ ನಟಿ ಶ್ರದ್ಧಾದಾಸ್ ಮಾತನಾಡಿ, ಇದು ಸೌಕರ್ಯ, ಹೊಂದಿಕೊಳ್ಳುವಿಕೆ ಮತ್ತು ಸುಧಾರಿತ ಮನೋರಂಜನಾ ಆಯ್ಕೆಗಳನ್ನು ನೀಡುವುದರೊಂದಿಗೆ, ಬಳಕೆದಾರರು ತಮ್ಮ ವೀಕ್ಷಣೆಯ ಅನುಭವವನ್ನು ಆನಂದಿಸಲು ಅವಕಾಶ ಒದಗಿದೆ. ಹೊಸ ಮತ್ತು ಈಗಾಗಲೇ ಅಸ್ತಿತ್ವದಲ್ಲಿರುವ ಎಲ್ಲಾ ಡಿಶ್ ಟಿವಿ ಮತ್ತು ಡಿ2ಎಚ್ ಮತ್ತು ಡಿಶ್ ಟಿವಿ ಸ್ಮಾರ್ಟ್ ಆಗಿ ಕಾರ್ಯನಿರ್ವಹಿಸಲಿದೆ ಎಂದರು. ಡಿಟಿಎಚ್ ಆಪರೇಟರ್ ನಿಂದ ಪೂರ್ಣ-ಸೇವೆಯ ಮನೋರಂಜನಾ ಪೂರೈಕೆದಾರರಾಗಿ ರೂಪಾಂತರಗೊಳ್ಳುವ ಮೂಲಕ, ಬದಲಾಗುತ್ತಿರುವ ಗ್ರಾಹಕರ ಆದ್ಯತೆಗಳು, ನಾವೀನ್ಯತೆ ಮತ್ತು ದೇಶದಾದ್ಯಂತ ಲಕ್ಷಾಂತರ ಕುಟುಂಬಗಳಿಗೆ ಮನೋರಂಜನೆ ಅನುಭವವನ್ನು ಹೆಚ್ಚಿಸುವ ಗುರಿ ಹೊಂದಿದೆ ಎಂದರು.




## ಉದ್ಯೋಗಕ್ಕಾಗಿ ಸಂದರ್ಶನ

**ಚಾಮರಾಜನಗರ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ರಾಜ್ ಬಯೋ ಆರ್ಗ್ಯಾನಿಕ್ಸ್ ಇವರ ಸಹಯೋಗದೊಂದಿಗೆ ನಿರುದ್ಯೋಗಿಗಳಿಗೆ ಉದ್ಯೋಗಕ್ಕಾಗಿ ನೇರ ಸಂದರ್ಶನವನ್ನು ಮೇ 20ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ 2ನೇ ಮಹಡಿಯ ಕೊಠಡಿ ಸಂಖ್ಯೆ 210ರ ಉದ್ಯೋಗ ವಿನಿಮಯ ಕಚೇರಿಯಲ್ಲಿ ಏರ್ಪಡಿಸಲಾಗಿದೆ. ಸಂದರ್ಶನದಲ್ಲಿ ಪಿ.ಯು.ಸಿ ಮತ್ತು ಯಾವುದೇ ಪದವಿ ಹೊಂದಿರುವ 23 ರಿಂದ 40ರ ವಯೋಮಿತಿಯ ಪುರುಷ ಅರ್ಹ ಅಭ್ಯರ್ಥಿಗಳು ಭಾಗವಹಿಸಬಹುದು. ಅಭ್ಯರ್ಥಿಯ ವಿದ್ಯಾರ್ಹತೆಗೆ ಅನುಗುಣವಾಗಿ ತಿಂಗಳಿಗೆ 23 ರಿಂದ 27 ಸಾವಿರ ರೂ.ಗಳವರೆಗೆ ವೇತನ ದೊರೆಯಲಿದೆ. ಅಭ್ಯರ್ಥಿಗಳು ತಮ್ಮ ಸ್ವ ವಿವರ, ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗಾಧಿಕಾರಿಗಳು ದೂ.ಸಂ 08226-224430, ಮೊ.ಸಂ 9611665329 ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಎ. ಮಹಮ್ಮದ್ ಅಕ್ಬರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಡಿಯುವ ನೀರಿಗಾಗಿ ಪ್ರತಿಭಟನೆ

**ಚಾಮರಾಜನಗರ :** ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲ್ಲೂಕಿನ ಟಗರಪುರ ಗ್ರಾಮ ಪಂಚಾಯ್ತಿ ಮುಂದೆ ಗ್ರಾಮಸ್ಥರು ಕುಡಿಯುವ ನೀರಿಗಾಗಿ ಪ್ರತಿಭಟನೆ ನಡೆಸಿದ ಘಟನೆ ನಡೆದಿದೆ. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲ್ಲೂಕಿನ ಟಗರಪುರ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಕಳೆದ ಒಂದೂವರೆ ತಿಂಗಳಿಂದ ಕುಡಿಯುವ ನೀರಿಗೆ ಹಾಹಾಕಾರವಿದ್ದರೂ ಸಹ ಗ್ರಾಮ ಪಂಚಾಯ್ತಿ ಅಧಿಕಾರಿಗಳು , ಜನಪ್ರತಿನಿಧಿಗಳು ಸಮಸ್ಯೆ ಬಗೆಹರಿಸಿಲ್ಲ ಎಂದು ಪ್ರತಿಭಟನೆ ನಡೆಸುತ್ತಿರುವ ಗ್ರಾಮಸ್ಥರು ದೂರಿದ್ದಾರೆ. ಟಗರಪುರ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು ನೀರಿನ ಸಮಸ್ಯೆ ಬಗೆಹರಿಸದೆ, ಬರಿ ಬರವಸೆ ನೀಡುತ್ತಿದ್ದಾರೆ. ಜನರಿಗೆ ಸ್ಪಂಧಿಸದ ಗ್ರಾಮ ಪಂಚಾಯ್ತಿ ಬೇಡವೇ ಬೇಡ ಎಂದು ಪ್ರತಿಭಟನಾನಿರತರು ಆಗ್ರಹಿಸಿದರು.

## ಚಿಣ್ಣರ ಬೇಸಿಗೆ ಶಿಬಿರ

**ಮೈಸೂರು:** ಲಷ್ಕರ್ ಮೊಹಲ್ಲಾದಲ್ಲಿರುವ ಅಂತರಾಷ್ಟ್ರೀಯ ಅಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ಏರ್ಪಡಿಸಿದ್ದ 3 ದಿನಗಳ ಚಿಣ್ಣರ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ತಾವೇ ತಯಾರಿಸಿದ ಕಿರೀಟವನ್ನು ಧರಿಸಿಕೊಂಡು ಸಂಭ್ರಮಿಸಿದರು. ಶಿಬಿರದ ಆಯೋಜಕಿ, ಹಾಗೂ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಕುಮಾರಿ ಆಶಾಜೀ, ಸುಶೀಲ,ನೇತ್ರ,ಸಂಗೀತ,ವೇದ,ಸರಳ,ಅನಿತ,ಲೋಕೇಶ್,ಹರ್ಷ, ಓಂ ಶಾಂತಿ ನ್ಯೂಸ್ ಸರ್ವೀಸ್ ನ ಬ್ರಹ್ಮಕುಮಾರ ಆರಾಧ್ಯ ಹಾಜರಿದ್ದರು.

## 6ನೇ ತರಗತಿ ಪ್ರವೇಶಕ್ಕೆ ಆಹ್ವಾನ

**ಕೋಲಾರ:** ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಡಾ|| ಬಿ.ಆರ್ ಅಂಬೇಡ್ಕರ್, ಅಟಲ್ ಬಿಹಾರಿ ವಾಜಪೇಯ, ಇಂಧಿರಾಗಾಂಧಿ, ಏಕಲವ್ಯ ಮಾದರಿ ವಸತಿ ಶಾಲೆ-ಕಾಲೇಜುಗಳಲ್ಲಿ ಶೇ10% ಮೀಸಲಾತಿಯನ್ನು ನಿಗಧಿಪಡಿಸಿ 6ನೇ ತರಗತಿ ಪ್ರವೇಶ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ದೂ.ಸಂ. 08152-200010 ಹಾಗೂ ತಮ್ಮ ತಾಲ್ಲೂಕಿನ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ಕೋಲಾರ ತಾಲ್ಲೂಕಿನ ರಾಜೇಶ್ 9986579688, ಬಂಗಾರಪೇಟೆ ಮತ್ತು ಕೆ.ಜಿ.ಎಫ್ ತಾಲ್ಲೂಕಿನ ಸುನೀಲ್ ಕುಮಾರ್ 8711924638, ಮಾಲೂರು ತಾಲ್ಲೂಕಿನ ಚೌಡಪ್ಪ 8904317589, ಮುಳಬಾಗಲು ತಾಲ್ಲೂಕಿನ ಬಾಬು ಎಂ.ಎನ್ 9739424583, ಶ್ರೀನಿವಾಸಪುರ ತಾಲ್ಲೂಕಿನ ಶ್ರೀನಿವಾಸಗೌಡ 7829126938 ಸಂಖ್ಯೆಗೆ ಸಂಪರ್ಕಿಸಬಹುದೆಂದು ಜಿಲ್ಲಾ ಕಛೇರಿಯ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

## ಬಿಸಿಯೂಟ ವಿತರಣೆ

**ಮಂಡ್ಯ:** ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರಿಗೆ ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಸ್ಥಾನ ಸಿಗಲಿ ಎಂದು ಡಿಕೆ ಶಿವಕುಮಾರ್ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ಟಿ ಎಂ ಸಿದ್ದೇಗೌಡ ಹೇಳಿದರು, ನಗರದ ಮಿಮ್ಸ್ ಆವರಣದಲ್ಲಿ ಮಮತೆಯ ಮಡಿಲು ನಿತ್ಯ ಅನ್ನದಾಸೋಹ ಕೇಂದ್ರದಲ್ಲಿ ಡಿ ಕೆ ಶಿವಕುಮಾರ್ ಹುಟ್ಟುಹಬ್ಬದ ಅಂಗವಾಗಿ ಅಭಿಮಾನಿಗಳಿಂದ ಹೆರಿಗೆ ವಾರ್ಡ್ ನ ಗರ್ಭಿಣಿ ಮತ್ತು ಬಾಣಂತಿಯರಿಗೆ ಹಾಗೂ ಸಂಬಂಧಿಕರಿಗೆ ಮಧ್ಯಾಹ್ನದ ಬಿಸಿಯೂಟ ವಿತರಿಸಿ ಮಾತನಾಡಿದರು, ದೇವರು ಡಿ ಕೆ ಶಿವಕುಮಾರ್ ಅವರಿಗೆ ಆಯಸ್ಸು, ಆರೋಗ್ಯ ಕೊಟ್ಟು ರಾಜಕೀಯದಲ್ಲಿ ಮತ್ತಷ್ಟು ಉನ್ನತ ಸ್ಥಾನ ಲಭಿಸಿ ಯಶಸ್ಸು ಗಳಿಸಲಿ ಎಂದು ಶುಭ ಹಾರೈಸಿದರು, ಕಾರ್ಯಕ್ರಮದಲ್ಲಿ ಡಿ ಕೆ ಶಿವಕುಮಾರ್ ಅಭಿಮಾನಿಗಳ ಸಂಘದ ತಾಲೂಕು ಅಧ್ಯಕ್ಷರುಗಳಾದ ಗಂಗಾಧರ್, ಶ್ರೀನಿವಾಸ್, ಮುಖಂಡರಾದ ಮಂಜುನಾಥ್ ,ಗೋವಿಂದು, ಬಸವಣ್ಣ ನಾಗೇಶ್ ಸುರೇಶ್ ನಾಗೇಂದ್ರ ಬಸವರಾಜ್ ಅನುರಾಧ ಮಾತಿತರರಿದ್ದರು.



ಹುಳಿಯಾರು ಸಮೀಪದ ಹಂದನಕೆರೆ ರೈತ ಸಂಪರ್ಕ ಕೇಂದ್ರದಲ್ಲಿ ರೈತರಿಗೆ ಬಿತ್ತನೆ ಬೀಜವನ್ನು ತಹಸೀಲ್ದಾರ್ ಪಿ.ವಿನಾಯಕ ಸಾಗರ ವಿತರಿಸಿದರು. ತಾಲೂಕು ಸಹಾಯಕ ಕೃಷಿ ನಿರ್ದೇಶಕ ಎಚ್.ಎಸ್.ಶಿವಕುಮಾರ್, ಕೃಷಿ ಅಧಿಕಾರಿ ರಂಗನಾಥ್ ಮತ್ತಿತರರು ಇದ್ದರು.

# ಮರಿತಿಬ್ಬೇಗೌಡ ಗೆಲುವಿಗೆ ಸಹಕಾರಿ



**ಕೆ.ಆರ್.ನಗರ:** ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಮಾಡುತ್ತಿರುವ ಜನ ಮತ್ತು ಬಡವರ ಪರವಾದ ಕೆಲಸಗಳು ದಕ್ಷಿಣ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮರಿತಿಬ್ಬೇಗೌಡ ಅವರ ಗೆಲುವಿಗೆ ಸಹಕಾರಿಯಾಗಲಿದೆ ಎಂದು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಹಿರಿಯ ಪ್ರಧಾನ ಕಾರ್ಯದರ್ಶಿ ಸಿ.ಜೆ.ಪಾಲಾಕ್ಷಗೌಡ ಹೇಳಿದರು.

ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ಮರಿತಿಬ್ಬೇಗೌಡ ಅವರ ಪರವಾಗಿ ಕೆ.ಆರ್.ನಗರ ವಿಧಾನಸಭಾ ಕ್ಷೇತ್ರದ ವಿವಿಧೆಡೆ ತೆರಳಿ ಮತಯಾಚನೆ ಮಾಡಿದ ನಂತರ ಮಾತನಾಡಿದ ಅವರು ಕಳೆದ 20 ವರ್ಷಗಳಿಂದ ನಿರಂತರವಾಗಿ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತಿರುವ ನಮ್ಮ ಪಕ್ಷದ ಅಭ್ಯರ್ಥಿ ಆಯ್ಕೆಯಾಗುವುದು ನಿಶ್ಚಿತವಾಗಿದೆ ಎಂದರು. ಕ್ಷೇತ್ರದ ವ್ಯಾಪ್ತಿಯಲ್ಲಿ ಈಗಾಗಲೇ ಕಾಂಗ್ರೆಸ್ ಪರವಾದ ಅಲೆ ಎದ್ದಿದ್ದು, ಇದರ ಜತೆಗೆ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ರಾಜ್ಯ ಸರ್ಕಾರದ ಸಾಧನೆ ಮತ್ತು ಶಿಕ್ಷಕರು ಹಾಗೂ ಶೈಕ್ಷಣಿಕ ಪರವಾದ ಯೋಜನೆಗಳನ್ನು ಪ್ರಚಾರ ಮಾಡುತ್ತಿದ್ದು, ಇವು ನಮ್ಮ ಗೆಲುವಿಗೆ ಪೂರಕವಾಗಲಿದ್ದು, ಮರಿತಿಬ್ಬೇಗೌಡರು ದಾಖಲೆಯ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆಂದು ವಿಶ್ವಾಸ ವ್ಯಕ್ತಪಡಿಸಿದರು.

ಆನಂತರ ಅವರು ಕ್ಷೇತ್ರದ ವ್ಯಾಪ್ತಿಯ ವಿವಿಧ ಶಿಕ್ಷಣ ಸಂಸ್ಥೆಗಳು ಮತ್ತು ಪದವೀಧರ ಶಿಕ್ಷಕರ ಮನೆಗಳಿಗೆ ತೆರಳಿ ಕಾಂಗ್ರೆಸ್ ಅಭ್ಯರ್ಥಿಯ ಪರವಾಗಿ ಮತಯಾಚನೆ ನಡೆಸಿದರಲ್ಲದೆ ತಮ್ಮ ಬೆಂಬಲಿಗರೊಂದಿಗೆ ಮಂಗಳವಾರ ನಾಮಪತ್ರ ಸಲ್ಲಿಸಿದ ಮರಿತಿಬ್ಬೇಗೌಡರನ್ನು ಭೇಟಿ ಮಾಡಿ ಶುಭಾಷಯ ಕೋರಿದರು.

# ರೈತರು ಮನೆಬಾಗಿಲಿಗೆ ಸೌಲಭ್ಯ ಪಡೆಯಿರಿ



**ಕೆ.ಆರ್.ನಗರ:** ಕಂದಾಯ ಇಲಾಖೆಯ ವ್ಯಾಪ್ತಿಯಲ್ಲಿ ಸಾರ್ವಜನಿಕರು ಮತ್ತು ರೈತರಿಗೆ ದೊರಕಬೇಕಿರುವ ಸೌಲಭ್ಯಗಳನ್ನು ಮನೆ ಬಾಗಿಲಿಗೆ ತಲುಪಿಸುವ ಉದ್ದೇಶದಿಂದ ಕಂದಾಯ ಸೇವೆಗಳ ವಿಶೇಷ ಆಂದೊಲನ ನಡೆಸುತ್ತಿದ್ದು, ಸರ್ವರೂ ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ತಹಶೀಲ್ದಾರ್ ಸಿ.ಎಸ್.ಪೂರ್ಣಿಮಾ ಹೇಳಿದರು.

ತಾಲೂಕಿನ ಹೊಸೂರುಕಲ್ಲಹಳ್ಳಿ ಗ್ರಾಮದಲ್ಲಿ ನಡೆದ ಕಂದಾಯ ಸೇವೆಗಳ ವಿಶೇಷ ಆಂದೋಲನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಈ ಆಂದೋಲನದಲ್ಲಿ ಗ್ರಾಮ ಆಡಳಿತಾಧಿಕಾರಿಗಳು ಇಲಾಖೆ ನಿಗದಿಪಡಿಸಿದ ಗ್ರಾಮಗಳಿಗೆ ಭೇಟಿ ನೀಡಿ ಸೇವೆ ನೀಡಲಿದ್ದಾರೆ ಎಂದರು.

ರೈತರು ಮತ್ತು ಸಾರ್ವಜನಿಕರಿಗೆ ಆಧಾರ್ ಸೀಡಿಂಗ್, ಎನ್‌ಪಿಸಿಐ, ಫ್ರೂಟ್ಸ್ ಪರಿಹಾರ, ಬಾಕಿ ಇರುವ ಪೌತಿ ಖಾತೆಗಳ ಅರ್ಜಿ ಸೇರಿದಂತೆ ಇತರ ಸಮಸ್ಯೆಗಳ

ಪರಿಹಾರ ಕುರಿತು ಸಲಹೆ ಮತ್ತು ಮಾರ್ಗದರ್ಶನ ನೀಡುವುದರ ಜತೆಗೆ ಸ್ಥಳದಲ್ಲಿಯೇ ಬೇಡಿಕೆಯಂತೆ ಕೆಲಸ ಮಾಡಿಕೊಡಲಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳುವುದರ ಜತೆಗೆ ಇತರರಿಗೂ ಮನವರಿಕೆ ಮಾಡಬೇಕು ಎಂದು ಕೋರಿದರು.

ಬರ ಪರಿಹಾರ ಬಾರದಿರುವ ರೈತರನ್ನು ಗುರುತಿಸಿ ಅವರಿಗೆ ಸವಲತ್ತು ತಲುಪಿಸಿ ಇದರೊಂದಿಗೆ ಸಮಸ್ಯೆಗಳು ಇದ್ದಲ್ಲಿ ಸ್ಥಳ ಭೇಟಿ ಮಾಡಿ ತ್ವರಿತಗತಿಯಲ್ಲಿ ಪರಿಹಾರ ಸೂಚಿಸಿ ಇತರ ಯೋಜನೆಗಳ ಸದ್ಬಳಕೆ ಬಗ್ಗೆ ಅರಿವು ಮೂಡಿಸಲಿದ್ದು, ಇಂತಹ ಜನಪರ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ತಿಳಿಸಿದರು.

ಪ್ರತೀದಿನ ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 2ರವರೆಗೆ ನಿಗದಿಪಡಿಸಿದ ಗ್ರಾಮಗಳಲ್ಲಿ ಗ್ರಾಮ ಆಡಳಿತಾಧಿಕಾರಿಗಳು ಸೇವೆ ನೀಡಲಿದ್ದು, ಗ್ರಾಮಸ್ಥರು ಯಾವುದೇ ಅರ್ಜಿ ನೀಡಿದರೂ ಅವುಗಳನ್ನು ಪರಿಶೀಲಿಸಿ ಆದ್ಯತೆಯ ಮೇರೆಗೆ ಸಕಾಲದಲ್ಲಿ ಪರಿಹಾರ ಸೂಚಿಸಲಾಗುತ್ತದೆ ಎಂದು ಮಾಹಿತಿ ನೀಡಿದರು. ಆನಂತರ ಅವರು ಕಸಬಾ ಹೋಬಳಿಯ ಡೆಗ್ಗನಹಳ್ಳಿ, ತಿಪ್ಪೂರು ಮತ್ತು ದೊಡ್ಡೇಕೊಪ್ಪಲು ಗ್ರಾಮಗಳಿಗೆ ತೆರಳಿ ಕಂದಾಯ ಸೇವೆಗಳ ವಿಶೇಷ ಆಂದೋಲನದ ಬಗ್ಗೆ ಜನರಿಗೆ ಅರಿವು ಮೂಡಿಸಿದರು. ಶಿರಸ್ತೇದಾರ್ ಅಸ್ಲಾಂಭಾಷ, ಗ್ರಾಮ ಆಡಳಿತಾಧಿಕಾರಿ ರಶ್ಮಿ,ಗ್ರಾಮ ಸಹಾಯಕ ನಂಜಯ್ಯ ಮತ್ತು ಕಂದಾಯ ಇಲಾಖೆಯ ಇತರ ಸಿಬ್ಬಂದಿ ಹಾಜರಿದ್ದರು.

# ಭವಾನಿ ರೇವಣ್ಣ ವಿರುದ್ಧ ಎಚ್ಚರಿಕೆಯ ಹೆಜ್ಜೆ ಇಡಿ

**ಬೆಂಗಳೂರು:** ಮಾಜಿ ಸಚಿವ ಹೆಚ್.ಡಿ ರೇವಣ್ಣ ವಿರುದ್ಧ ದಾಖಲಾಗಿರುವ ಸಂತ್ರಸ್ತೆ ಕಿಡ್ನ್ಯಾಪ್ ಪ್ರಕರಣದಲ್ಲಿ ಭವಾನಿ ರೇವಣ್ಣ ವಿರುದ್ಧ ಎಸ್‌ಐಟಿ ಎಚ್ಚರಿಕೆಯ ಹೆಜ್ಜೆ ಇಡುವಂತೆ ಸರ್ಕಾರ ಸೂಚಿಸಿದೆ ಎಂಬ ವಿಚಾರ ಮೂಲಗಳಿಂದ ತಿಳಿದುಬಂದಿದೆ. ಈಗಾಗಲೇ ಎಸ್‌ಐಟಿ ಮೂರು ಬಾರಿ ನೋಟಿಸ್ ನೀಡಿದರೂ ಭವಾನಿ ರೇವಣ್ಣ ಆರೋಗ್ಯದ ನೆಪ ಹೇಳಿ ವಿಚಾರಣೆಗೆ ಹಾಜರಾಗದೇ ಗೈರಾಗಿದ್ದಾರೆ. ರೇವಣ್ಣ ಬಂಧನ ರಾಜಕೀಯ ತಿರುವು ಪಡೆದುಕೊಂಡ ಹಿನ್ನಲೆ ಈ ವಿಚಾರದಲ್ಲೂ ಅದೇ ರೀತಿ ನಡೆದರೆ ಸಮಸ್ಯೆ ಎದುರಿಸಬೇಕಾಗುತ್ತದೆ ಎಂಬುದು ಸರ್ಕಾರದ ಲೆಕ್ಕಾಚಾರ. ಇದೇ ಕಾರಣಕ್ಕೆ ಭವಾನಿ ರೇವಣ್ಣ ವಿಚಾರದಲ್ಲಿ ಎಸ್‌ಐಟಿ ಅಧಿಕಾರಿಗಳಿಗೆ ಎಚ್ಚರಿಕೆಯ ಸಂದೇಶ ನೀಡಲಾಗಿದೆ. ರೇವಣ್ಣ ವಿರುದ್ಧ ದಾಖಲಾಗಿದ್ದ ಲೈಂಗಿಕ ದೌರ್ಜನ್ಯ ಪ್ರಕರಣದ ವಿಚಾರವಾಗಿ, ಸಂತ್ರಸ್ತೆಯನ್ನು ಅಪಹರಿಸಿದ ಆರೋಪ ಕೇಳಿಬಂದಿತ್ತು. ಇದಾದ ಬೆನ್ನಲ್ಲೇ ಸಂತ್ರಸ್ತೆಯ ಮಗ ನೀಡಿದ ದೂರಿನ ಅಡಿ ಅವರನ್ನು ಬಂಧಿಸಲಾಗಿತ್ತು. ಬಂಧನದ ಬಳಿಕ ಅವರ ಬೆಂಬಲಿಗರು ಬಂಧನ ವಿರೋಧಿಸಿ ರಾಜಕೀಯ ಷಡ್ಯಂತ್ರ ಎಂದು ಆರೋಪಿಸಿದ್ದರು. ಇದಾದ ಒಂದು ವಾರದ ಬಳಿಕ ರೇವಣ್ಣ ಜಾಮೀನಿನ ಮೇಲೆ ಹೊಬಂದಿದ್ದರು. ಈ ವೇಳೆ ರೇವಣ್ಣ ಈ ಬಗ್ಗೆ ಪ್ರತಿಕ್ರಿಯಿಸಿ, 40 ವರ್ಷ ರಾಜಕೀಯದಲ್ಲಿ ಮೊದಲ ಬಾರಿ ಕೇಸ್ ದಾಖಲಾಗಿದೆ. ಉದ್ದೇಶ ಪೂರ್ವಕವಾಗಿ ಕೇಸ್ ದಾಖಲಿಸಿದ್ದಾರೆ. ನ್ಯಾಯಾಂಗದ ಮೇಲೆ ನಂಬಿಕೆ ಇದೆ ಎಂದು ಹೇಳಿದ್ದರು.

## ಮಳೆ ಬಿದ್ದು: ಸಂಚಾರಕ್ಕೆ ತೊಂದರೆ

**ಚಾಮರಾಜನಗರ:** ಕರ್ನಾಟಕ ತಮಿಳುನಾಡು ಗಡಿ ಚಾಮರಾಜನಗರ ಜಿಲ್ಲೆಗೆ ಹೊಂದಿರುವ ತಮಿಳುನಾಡಿನ ತಾಳವಾಡಿ ಬಳಿ ಹಾಸನೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಸುರಿದ ಮಳೆಯಿಂದ ಮಳೆಯ ಮಳೆಯಿಂದಾಗಿ ಮುಂಗಾರು ಮರಗಳು ಮುರಿದು ಬಿದ್ದಿದ್ದರಿಂದ ಕರ್ನಾಟಕ ರಾಜ್ಯಗಳ ನಡುವೆ ಸಾರಿಗೆ ಸಂಚಾರಕ್ಕೆ ತೊಂದರೆಯಾಗಿದೆ. ಚಾಮರಾಜನಗರ ಜಿಲ್ಲೆಗೆ ಹೊಂದಿಕೊಂಡಿರುವ ಈರೋಡು ಜಿಲ್ಲೆ ತಾಳವಾಡಿ ಬಳಿ ಹಾಸನೂರು,ಅರೇಪಪಾಳ್ಯ,ದಿಂಬಂ ಸೇರಿದಂತೆ ಹಲವು ದಿನಗಳಿಂದ ಮಳೆ ಸುರಿದಿದೆ. ಅದರಂತೆ ಬುಧವಾರ ಹಾಸನೂರು ಪ್ರದೇಶದಲ್ಲಿ ಗಾಳಿ ಮಳೆ ಸುರಿದಿದೆ. ಈ ಸ್ಥಿತಿಯಲ್ಲಿ ಆಸನೂರಿನಿಂದ ದಿಂಬಂ ಸಾಗುವ ರಸ್ತೆಯಲ್ಲಿ ಮೂರು ಕಡೆ ರಸ್ತೆಯಲ್ಲಿದ್ದ ಮೂಂಗಿನ ಮರಗಳು ರಸ್ತೆಯಲ್ಲಿ ಮುರಿದು ಬಿದ್ದವು. ಹೀಗಾಗಿ ತಮಿಳುನಾಡು ಕರ್ನಾಟಕ ರಾಜ್ಯಗಳ ನಡುವೆ ಸಾರಿಗೆ ಸಂಚಾರಕ್ಕೆ ತೀವ್ರ ತೊಂದರೆಯಾಗಿದೆ. ಘಟನೆಯ ಸ್ಥಳಕ್ಕೆ ಬಂದ ತಮಿಳುನಾಡಿನ ಅಗ್ನಿಶಾಮಕ ಮತ್ತು ರಕ್ಷಣಾ ದಳದವರು ರಸ್ತೆಯಲ್ಲಿ ಬಿದ್ದ ಬಿದಿರಿನ ಮರಗಳನ್ನು ತೆಗೆದುಹಾಕಿದರು.

## ಕುಸಿದು ಬಿದ್ದು ಸಾವು

**ಚಾಮರಾಜನಗರ:** ನರೇಗಾ ಕೆಲಸ ಮಾಡುತ್ತಿದ್ದಾಗಲೆ ಕೂಲಿಯಾಳು ಕುಸಿದು ಬಿದ್ದು ಸಾವನಪ್ಪಿದ ಘಟನೆ ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲ್ಲೂಕಿನ ಮುಳ್ಳೂರು ಗ್ರಾಮದಲ್ಲಿ ನಡೆದಿದ್ದು,ಪರಿಹಾರಕ್ಕೆ ಗ್ರಾಮಸ್ಥರು ಶವವಿಟ್ಟು ಪ್ರತಿಭಟಿಸಿದ್ದಾರೆ. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲದ ಮುಳ್ಳೂರು ಗ್ರಾಮದಲ್ಲಿ ನರೇಗಾ ಯೋಜನೆಯಡಿ ಕೆರೆ ಕೆಲಸ ಮಾಡುತ್ತಿದ್ದಾಗ ಮುಳ್ಳೂರು ಗ್ರಾಮದ ಚಿಕ್ಕ ವೆಂಕಟನಾಯಕ ಕುಸಿದು ಸಾವನ್ನಪ್ಪಿದರು. ಕೂಲಿಯಾಳು ಸಾವನ್ನಪ್ಪಿದ ಘಟನೆಯಿಂದ ಕೆರಳಿದ ಗ್ರಾಮಸ್ಥರು, ಶವವಿಟ್ಟು ಮೃತ ಕುಟುಂಬಕ್ಕೆ ಪರಿಹಾರ ನೀಡುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು. ಸ್ಥಳಕ್ಕೆ ತಾಲೂಕು ಪಂಚಾಯ್ತಿ ಶ್ರೀನಿವಾಸ್, ಹಾಗೂ ಪೋಲಿಸರ ಭೇಟಿ ಮೃತ ದೇಹ ಅಂತ್ಯ ಸಂಸ್ಕಾರ ಕ್ಕೆ ಮನವೊಲಿಸುವಾಗ, ಮೃತ ಕುಟುಂಬಕ್ಕೆ ಪರಿಹಾರ ಘೋಷಣೆಗೆ ಗ್ರಾಮಸ್ಥರ ಪಟ್ಟು ಹಿಡಿದರು. ಕೊನೆಗೂ ಪರಿಹಾರದ ಭರವಸೆಯ ಬಳಿಕ ಪ್ರತಿಭಟನೆ ಕೈ ಬಿಡಲಾಯಿತು.

## ಕೃತಿ ಬಿಡುಗಡೆ

**ಮಂಡ್ಯ:** ನಗರದ ಕರ್ನಾಟಕ ಸಂಘದ ಆವರಣದಲ್ಲಿ ಆಡಳಿತ ತಜ್ಞ ಡಿ ಜೆ ದಾಸೇಗೌಡ ಕೃತಿ ಬಿಡುಗಡೆಯನ್ನು ಕೃಷಿಕ್ ಫೌಂಡೇಶನ್ ಅಧ್ಯಕ್ಷ ಟಿ ತಿಮ್ಮೇಗೌಡ ಬಿಡುಗಡೆಗೊಳಿಸಿದರು ದಿವ್ಯ ಸಾನಿಧ್ಯವನ್ನು ಡಾ. ನಿರ್ಮಲಾನಂದನಾಥ ಸ್ವಾಮೀಜಿ ವಹಿಸಿದ್ದರು, ಕಾರ್ಯಕ್ರಮದಲ್ಲಿ ಪುರುಷೋತ್ತಮಾನಂದನಾಥ ಸ್ವಾಮೀಜಿ ಮುಖಂಡರಾದ ಕೆ ಬೋರಯ್ಯ ಕೃತಿ ಕರ್ತೃ ಪ್ರೋ ಜಯಪ್ರಕಾಶ ಗೌಡ ಚಂದಗಾಲು ಲೋಕೇಶ್ ತಗ್ಗಳಿ ವೆಂಕಟೇಶ್ ಇದ್ದರು.

## ರಕ್ತದಾನ ಶಿಬಿರ

**ಗುಂಡ್ಲುಪೇಟೆ:** ಪಟ್ಟಣದ ಗುರುಭವನದಲ್ಲಿ ಸಿಮ್ಸ್ ಆಸ್ಪತ್ರೆ ಸಹಯೋಗದಿಂದ ರಕ್ತಧಾರೆ ಬಳಗ ತಂಡದ ವತಿಯಿಂದ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ನಡೆಯಿತು. ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧನ ಆಸ್ಪತ್ರೆ ರಕ್ತನಿಧಿ ಕೇಂದ್ರ, ಆಯೋಜನೆ ಮಾಡಿದ್ದ ರಕ್ತದಾನ ಶಿಬಿರದಲ್ಲಿ ತಾಲ್ಲೂಕಿನ ವಿವಿಧ ಗ್ರಾಮದ ಯುವಕರು, ಪೊಲೀಸ್ ಸಿಬ್ಬಂದಿ ಸೇರಿದಂತೆ ಹಲವು ಮಂದಿ ರಕ್ತದಾನ ಮಾಡಿದರು. ಈ ಸಂದರ್ಭದಲ್ಲಿ ಶಿಬಿರದ ಆಯೋಜಕ ಮಡಹಳ್ಳಿ ಮಣಿ ಮಾತನಾಡಿ, ಪ್ರಸ್ತುತ ತಾಲೂಕಿನಲ್ಲಿ ತುರ್ತು ಸಮಯದಲ್ಲಿ ಅಪಘಾತ ಹಾಗೂ ಗರ್ಭಿಣಿಯರಿಗೆ .ರಕ್ತದ ಅವಶ್ಯಕತೆ ತುಂಬಾ ಇದೆ. ಆದ್ದರಿಂದ ರಕ್ತಧಾರೆ ಬಳಗದ ವತಿಯಿಂದ ರಕ್ತವನ್ನು ಆಯಾ ಸಮಯದಲ್ಲಿ ಒದಗಿಸುವುದರ ಜೊತೆಗೆ ತಾಲೂಕಿನಲ್ಲಿ ಆರೋಗ್ಯದ ವಿಚಾರದಲ್ಲಿ ಸ್ವಯಂ ಪ್ರೇರಿತವಾಗಿ ನಮ್ಮ ತಂಡ ಸಾಮಾಜಿಕ ಸೇವೆಯಲ್ಲಿ ತೊಡಗಿಸಿ ಒಂದು ಅಮೂಲ್ಯವಾದ ಜೀವ ಉಳಿಸುವ ಉದ್ದೇಶವೇ ನಮ್ಮ ಗುರಿ ಎಂದು ತಿಳಿಸಿದರು. ಈ ವೇಳೆ ರಕ್ತಧಾರೆ ಬಳಗದ ತಂಡ ಮತ್ತು ನಮ್ಮ ಗುಂಡ್ಲುಪೇಟೆ ತಂಡದವರು ಹಾಜರಿದ್ದರು.



## ಹರಿಪ್ರಿಯ ಕೆ.ಎಸ್‌ಗೆ 606 ಅಂಕ

**ಕೋಲಾರ:** ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ನಗರದ ಚಿನ್ಮಯ ವಿದ್ಯಾಲಯದ ವಿದ್ಯಾರ್ಥಿ ಹರಿಪ್ರಿಯ ಕೆ.ಎಸ್ 625 ಕ್ಕೆ 606 ಅಂಕಗಳನ್ನು ಗಳಿಸಿ ಶೇ.97 ರಷ್ಟು ಅಂಕ ಪಡೆದು ಅತ್ಯುತ್ತಮ ಶ್ರೇಣಿಯಲ್ಲಿ ಉತ್ತೀರ್ಣರಾಗಿರುತ್ತಾರೆ. ನಗರದ ಖಾದ್ರಿಪುರ ನಿವಾಸಿ ಕೆ.ಎಸ್.ಆರ್.ಟಿ.ಸಿ ಶಿವಕುಮಾರ್ ಮತ್ತು ಎನ್.ಮಂಜುಳಾ ಪಂದತಿಗಳ ಸುಪುತ್ರಿಯಾಗಿರುವ ಹರಿಪ್ರಿಯ ಕೆ.ಎಸ್ ಉತ್ತಮ ಅಂಕಗಳನ್ನು ಪಡೆದು ಶಾಲೆಗೆ ಮತ್ತು ಜಿಲ್ಲೆಗೆ ಹಾಗೂ ಪೋಷಕರಿಗೆ ಕೀರ್ತಿ ತಂದಿರುತ್ತಾರೆ. ವಿದ್ಯಾರ್ಥಿ ಹರಿಪ್ರಿಯ ಕೆ.ಎಸ್ ಅವರನ್ನು ಶಾಲಾ ಆಡಳಿತ ಮಂಡಳಿ ಹಾಗೂ ಬೋಧಕ ಬೋಧಕೇತ್ತರ ಸಿಬ್ಬಂದಿ ಅಭಿನಂದಿಸಿದ್ದಾರೆ.



## ಗ್ರಾಹಕರ ಸಂವಾದ ಸಭೆ

**ಕೋಲಾರ:** ಬೇತಮಂಗಲ ಬೆವಿಕಂ ಉಪವಿಭಾಗದ ಕಛೇರಿಯಲ್ಲಿ ಮೇ 18 ಮೂರನೇ ಶನಿವಾರದಂದು ಮಧ್ಯಾಹ್ನ 3:00 ರಿಂದ 5:30 ಗಂಟೆಯವರೆಗೆ ಬೆ.ವಿ.ಕಂ. ಗ್ರಾಹಕ ಸಂವಾದ ಸಭೆಯನ್ನು ಹಮ್ಮಿಕೊಂಡಿದ್ದು, ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬೇಕೆಂದು ಬೆ.ವಿ.ಕಂ. ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹರ್ಷಿ ಭಗೀರಥರ ಸಾಧನೆ ಅನುಕರಣೀಯ

**ಕೆ.ಆರ್.ನಗರ:** ತನ್ನ ಘೋರ ತಪ್ಪಸ್ಸಿನ ಮೂಲಕ ದೇವಗಂಗೆಯನ್ನು ಧರೆಗಿಳಿಸಿದ ಮಹರ್ಷಿ ಭಗೀರಥರು ಸರ್ವ ಕಾಲಕ್ಕೂ ಪೂಜಿತರು ಎಂದು ತಹಶೀಲ್ದಾರ್ ಸಿ.ಎಸ್ .ಪೂರ್ಣಿಮಾ ಹೇಳಿದರು.

ಪಟ್ಟಣದ ಆಡಳಿತ ಸೌಧದ ಕೃಷ್ಣರಾಜೇಂದ್ರ ಸಭಾಂಗಣದಲ್ಲಿ ಮಂಗಳವಾರ ನಡೆದ ಶ್ರೀ ಭಗೀರಥ ಮಹರ್ಷಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ವಸಂತ ಋತುವಿನ ವೈಶಾಖ ಮಾಸದ ಸಪ್ತಮಿಯಂದು ದೇವಗಂತೆ ಧರೆಗೆ ಬಂದ ಗಂಗಾ ಸಪ್ತಮಿ ದಿನವಾಗಿದ್ದು, ಆ ಪವಿತ್ರ ದಿವಸವನ್ನು ಭಗೀರಥ ಜಯಂತಿಯನ್ನಾಗಿ ಆಚರಣೆ ಮಾಡಲಾಗುತ್ತಿದೆ ಎಂದರು.

ಮಹನೀಯರು ಮತ್ತು ಮಹರ್ಷಿಗಳ ಜಯಂತಿಯನ್ನು ಒಂದೇ ದಿನಕ್ಕೆ ಸೀಮಿತ ಮಾಡದೆ ಎಲ್ಲರೂ ಸದಾಕಾಲ ಅವರ ಜೀವಿತಾವಧಿಯ ಸಾಧನೆ ಮತ್ತು ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಇತರರಿಗೂ ಆ ಬಗ್ಗೆ ಮನವರಿಕೆ ಮಾಡಬೇಕೆಂದು ಸಲಹೆ ನೀಡಿದರು.

ಮನುಷ್ಯ ತನ್ನ ಜೀವನದಲ್ಲಿ ನಡೆಯುವ ಅಪಜಯಗಳಿಗೆ ಅಂಜದೆ ನಿರಂತರವಾಗಿ ಗೆಲುವು ಮತ್ತು ಯಶಸ್ಸಿಗೆ ಪ್ರಯತ್ನ ಮಾಡಿ ಜಯಗಳಿಸಲು ಮಹರ್ಷಿ ಭಗೀರಥ ದೇವರನ್ನು ಆದರ್ಶವಾಗಿಟ್ಟುಕೊಂಡು ಸತತ ಪ್ರಯತ್ನ ಮಾಡಿದರೆ ಗೆಲುವು ಹಾಗೂ ಸಂತೃಪ್ತಿ ಸಿಗಲಿದ್ದು, ಎಲ್ಲರೂ ಈ ವಿಚಾರವನ್ನು ಗಮನದಲ್ಲಿಟ್ಟುಕೊಂಡು ಮುನ್ನಡೆಯಬೇಕು ಎಂದು ತಿಳಿಸಿದರು.



ಸಮಾಜದಲ್ಲಿ ಸರ್ವರನ್ನೂ ಸಮಾನತೆಯಿಂದ ಕಂಡು ಅವರ ಬದುಕಿಗೆ ಭದ್ರ ಬುನಾದಿ ಹಾಕುವ ಕೆಲಸವನ್ನು ಉಳ್ಳವರು ಮತ್ತು ಶಿಕ್ಷಿತರು ಮಾಡಿದಾಗ ಇಂತಹ ಮಹಾನ್ ಪುರುಷರ ಪ್ರಯತ್ನ ಮತ್ತು ಪ್ರಾರ್ಥನೆಗೆ ಬೆಲೆ ನೀಡಿದಂತಾಗಲಿದ್ದು, ಸಾಧನೆ ಮಾಡುವ ಪ್ರತಿಯೊಬ್ಬರೂ ಭಗೀರಥರನ್ನು ಮನದ ದೈವವನ್ನಾಗಿ ಮಾಡಿಕೊಳ್ಳಬೇಕು ಎಂದು ಅವರು ನುಡಿದರು. ಇಂದಿನ ಜಯಂತಿ ಕಾರ್ಯಕ್ರಮವನ್ನು ಲೋಕಸಭಾ ಚುನಾವಣೆ ನೀತಿ ಸಂಹಿತೆ ಸಲುವಾಗಿ ಸರಳವಾಗಿ ಆಚರಣೆ ಮಾಡಿದ್ದು, ಮುಂದಿನ ವರ್ಷ ಸಮಾಜದವರ ಬೇಡಿಕೆ ಮತ್ತು ಸಹಕಾರದೊಂದಿಗೆ ಅತ್ಯಂತ ವಿಜೃಂಭಣೆಯಿಂದ ಶಾಸಕರ ನೇತೃತ್ವದಲ್ಲಿ ಆಚರಣೆ ಮಾಡಬೇಕೆಂದು ಉಪ್ಪಾರ ಸಮಾಜದ ಮುಖಂಡರು ಮನವಿ ಸಲ್ಲಿಸಿದಾಗ ಇದಕ್ಕೆ ತಹಸೀಲ್ದಾರರು ಸಹಮತ ವ್ಯಕ್ತಪಡಿಸಿದರು.

ಶಿಕ್ಷಕ ಮಂಜುನಾಥ್‌ಕೋಗಿಲೂರು ಪ್ರಧಾನ ಭಾಷಣ ಮಾಡಿ ಭಗೀರಥ ಮಹರ್ಷಿಗಳ ಜೀವನ, ಸಾಧನೆ ಮತ್ತು ಸಂದೇಶಗಳ ಬಗ್ಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು. ಉಪ್ಪಾರ ಸಂಘದ ತಾಲೂಕು ಅಧ್ಯಕ್ಷ ಕಾಟ್ನಾಳುಮಹದೇವ್, ಗ್ರೇಡ್-2 ತಹಶೀಲ್ದಾರ್ ಕೆ.ಎಸ್.ಬಾಲಸುಬ್ರಹ್ಮಣ್ಯ ಮಾತನಾಡಿದರು.

ನಿವೃತ್ತ ಸಹಾಯಕ ಕಾರ್ಯಪಾಲಕ ಅಭಿಯಂತರ ಶ್ರೀಧರ್, ಉಪ್ಪಾರ ಸಮಾಜದ ಮುಖಂಡರಾದ ಕೆ.ಎಲ್ .ಜಯರಾಮ್, ಕೃಷ್ಣೇಗೌಡ, ಟಿ.ಎಸ್.ಯೋಗೇಶ್‌ಕುಮಾರ್, ಸಂತೋಷ್, ಗೋವಿಂದೇಗೌಡ, ರಾಮಕೃಷ್ಣ, ರಾಕೇಶ್, ರಂಗನಾಥ್, ಮಲ್ಲೇಶ್, ಎಂ.ಕುಮಾರ್, ತಿಪ್ಪೂರುರವಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಎಸ್.ರಾಜಾರಾಮ್‌ವೈಲಾಯ, ಸಿಡಿಪಿಒ ಅಣ್ಣಯ್ಯ, ಉಪನೋಂದಣಿ ಇಲಾಖೆಯ ರಾಜಕುಮಾರ್ ಮತ್ತಿತರರು ಹಾಜರಿದ್ದರು.

### ಜಿಲ್ಲಾಧಿಕಾರಿ ವೆಂಕಟ್‌ರಾಜಾ ತಾಕೀತು

# ನಾಮಫಲಕದಲ್ಲಿ ಕನ್ನಡ ಕಡ್ಡಾಯ

**ಮಡಿಕೇರಿ :** ಜಿಲ್ಲೆಯ ಎಲ್ಲಾ ಕೈಗಾರಿಕೆಗಳು, ವಾಣಿಜ್ಯ ಸಂಸ್ಥೆಗಳು, ವಹಿವಾಟು ಕೇಂದ್ರಗಳು, ಉದ್ಯಮಗಳ ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಭಾಷೆ ಇರಲೇಬೇಕು. ಆ ನಿಟ್ಟಿನಲ್ಲಿ ಸ್ಥಳೀಯ ಸಂಸ್ಥೆಗಳು ಹಾಗೂ ಸಂಬಂಧಪಟ್ಟ ಇಲಾಖೆಗಳು ಅಗತ್ಯ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ವೆಂಕಟ್‌ರಾಜಾ ತಾಕೀತು ಮಾಡಿದ್ದಾರೆ.

ಜಿಲ್ಲೆಯ ಎಲ್ಲಾ ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಭಾಷೆ ಕಡ್ಡಾಯ ಅನುಷ್ಠಾನ ಸಂಬಂಧ ಅಧಿಕಾರಿಗಳ ಜೊತೆ ನಡೆದ ವಿಡಿಯೋ ಸಂವಾದದಲ್ಲಿ ಅವರು ಮಾತನಾಡಿದರು.

ಕನ್ನಡ ಭಾಷೆ ಸಮಗ್ರ ಅಭಿವೃದ್ಧಿ ತಿದ್ದುಪಡಿ ವಿಧೇಯಕಕ್ಕೆ ಈಗಾಗಲೇ ಒಪ್ಪಿಗೆ ದೊರೆತಿದ್ದು, ಕನ್ನಡ ಭಾಷೆ ಸಮಗ್ರ ಅಭಿವೃದ್ಧಿ ಸಂಬಂಧ ಈಗಾಗಲೇ ಅಧಿನಿಯಮ ಜಾರಿಯಾಗಿದ್ದು, ಇದನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು. ಜಿಲ್ಲೆಯ ಗಡಿಭಾಗ ಸೇರಿದಂತೆ ನಗರ, ಪಟ್ಟಣ ಹಾಗೂ ಎಲ್ಲೆಡೆ ಅಳವಡಿಸಿರುವ/ ಅಳವಡಿಸುವ ನಾಮಫಲಕದಲ್ಲಿ ಕಡ್ಡಾಯವಾಗಿ ಶೇ.60 ರಷ್ಟು ಕನ್ನಡ ಭಾಷೆಗೆ ಪ್ರಥಮ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಅವರು ಸೂಚಿಸಿದರು.

ಜಿಲ್ಲೆಯ ಸಾರ್ವಜನಿಕ ಸ್ಥಳಗಳಲ್ಲಿನ ನಾಮಫಲಕದಲ್ಲಿ ಕನ್ನಡ ಭಾಷೆ ಬಳಕೆ ಕಡ್ಡಾಯ ಅನುಷ್ಠಾನದ ಬಗ್ಗೆ ಕರೆಗಳು ಬರುತ್ತಿದ್ದು, ಈ ಬಗ್ಗೆ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಮತ್ತೊಮ್ಮೆ ಏಳು ದಿನಗಳ ಕಾಲಾವಕಾಶ ನೀಡಿ, ಕನ್ನಡ ಭಾಷೆ ಸಮಗ್ರ ಅಭಿವೃದ್ಧಿ ತಿದ್ದುಪಡಿ ವಿಧೇಯಕ ಅನುಷ್ಠಾನಕ್ಕೆ ಮುಂದಾಗಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್‌ರಾಜಾ ಅವರು ಸ್ಪಷ್ಟ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿರುವ ಎಲ್ಲಾ ಅಂಗಡಿ, ಹೋಟೆಲ್, ವಾಣಿಜ್ಯ ಸಂಕೀರ್ಣ, ಕೈಗಾರಿಕೋದ್ಯಮ, ಶಾಲಾ ಕಾಲೇಜು, ಸರ್ಕಾರಿ ಕಚೇರಿಗಳು ಹಾಗೂ ಪ್ರವಾಸೋದ್ಯಮ ಕೇಂದ್ರಗಳ ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಭಾಷಾ ಬಳಕೆ ಕಡ್ಡಾಯವಾಗಿದ್ದು, ಈ ಸಂಬಂಧ ತಮ್ಮ ತಮ್ಮ ಇಲಾಖೆ ವ್ಯಾಪ್ತಿಯಲ್ಲಿ ತ್ವರಿತವಾಗಿ ಅನುಷ್ಠಾನಗೊಳಿಸುವಂತೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರು ಸೂಚಿಸಿದರು.




ನಾಮಫಲಕಗಳಲ್ಲಿ ಕನ್ನಡ ಭಾಷೆ ಅನುಷ್ಠಾನ ಸಂಬಂಧ ಕನ್ನಡ ಭಾಷೆ ಸಮಗ್ರ ಅಭಿವೃದ್ಧಿ ತಿದ್ದುಪಡಿ ವಿಧೇಯಕ ಕಾಯ್ದೆಯಂತೆ ಕ್ರಮವಹಿಸಬೇಕು ಎಂದರು.

ಸ್ಥಳೀಯ ಪ್ರಾಧಿಕಾರಗಳಿಂದ ಅನುಮತಿ, ಮಂಜೂರಾತಿ ಪಡೆದ ಎಲ್ಲಾ ಸಂಸ್ಥೆಗಳಿಗೂ ಈ ಕಾಯ್ದೆ ಅನ್ವಯವಾಗಲಿದೆ. ಖಾಸಗಿ ಶಾಲಾ ಕಾಲೇಜುಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು, ಮನರಂಜನಾ ಕೇಂದ್ರಗಳು, ಹೋಟೆಲ್ ಸೇರಿದಂತೆ ಎಲ್ಲಾ ಸಾರ್ವಜನಿಕ ಸ್ಥಳಗಳಲ್ಲಿ ನಾಮಫಲಕಗಳ ಮೇಲ್ಭಾಗದಲ್ಲಿ ಕನ್ನಡ ಭಾಷೆಯನ್ನು ಶೇ.60 ರಷ್ಟು ಪ್ರದರ್ಶಿಸಬೇಕು/ ಬರೆಸಿರಬೇಕು ಎಂದು ಜಿಲ್ಲಾಧಿಕಾರಿ ಅವರು ಸ್ಪಷ್ಟ ನಿರ್ದೇಶನ ನೀಡಿದ್ದಾರೆ.

> “ ಕನ್ನಡ ಭಾಷೆ ಸಮಗ್ರ ಅಭಿವೃದ್ಧಿ ತಿದ್ದುಪಡಿ ವಿಧೇಯಕಕ್ಕೆ ಈಗಾಗಲೇ ಒಪ್ಪಿಗೆ ದೊರೆತಿದ್ದು, ಕನ್ನಡ ಭಾಷೆ ಸಮಗ್ರ ಅಭಿವೃದ್ಧಿ ಸಂಬಂಧ ಈಗಾಗಲೇ ಅಧಿನಿಯಮ ಜಾರಿಯಾಗಿದ್ದು, ಇದನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು.
> **ವೆಂಕಟ್‌ರಾಜಾ** ಜಿಲ್ಲಾಧಿಕಾರಿ

ಜಿ.ಪಂ.ಸಿಇಒ ವರ್ಣಿತ್ ನೇಗಿ ಅವರು ಮಾತನಾಡಿ ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಭಾಷೆ ಬಳಕೆ ಸಂಬಂಧಿಸಿದಂತೆ ತಾ.ಪಂ.ಮತ್ತು ಗ್ರಾ.ಪಂ.ಮೂಲಕ ತ್ವರಿತ ಕ್ರಮ ಕೈಗೊಳ್ಳಲಾಗುವುದು ಎಂದರು.

ಪೌರಾಯುಕ್ತರಾದ ವಿಜಯ್ ಅವರು ಮಾತನಾಡಿ ಈಗಾಗಲೇ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗಿದ್ದು, ನಾಮಫಲಕದಲ್ಲಿ ಶೇ.60 ರಷ್ಟು ಕನ್ನಡ ಭಾಷೆ ಬಳಕೆ ಸಂಬಂಧಿಸಿದಂತೆ ನಗರದ 150 ಅಂಗಡಿಗಳಿಗೆ ನೋಟೀಸ್ ಜಾರಿ ಮಾಡಲಾಗಿದೆ. ಅನುಷ್ಠಾನ ಸಂಬಂಧ ತಂಡ ರಚಿಸಲಾಗಿದೆ. ಈ ಬಗ್ಗೆ ವರದಿ ನೀಡಲಾಗುವುದು ಎಂದರು.

ಕೈಗಾರಿಕಾ ಇಲಾಖೆಯ ಜಂಟಿ ನಿರ್ದೇಶಕರಾದ ದಿನೇಶ್, ನಗರಾಭಿವೃದ್ಧಿ ಯೋಜನಾ ಶಾಖೆಯ ಯೋಜನಾ ನಿರ್ದೇಶಕರಾದ ಬಿ.ಬಸಪ್ಪ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಾದ ಎಂ.ಚಂದ್ರಕಾಂತ್, ತಾ.ಪಂ.ಇಒ ಎಂ.ನಾಗಮಣಿ, ಪುರಸಭೆ ಮುಖ್ಯಾಧಿಕಾರಿಗಳಾದ ಕೃಷ್ಣಪ್ರಸಾದ್ (ಕುಶಾಲನಗರ), ಚಂದ್ರಕುಮಾರ್ (ವಿರಾಜಪೇಟೆ), ಸೋಮವಾರಪೇಟೆ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಲೋಕ್ಯನಾಯಕ್, ತಹಶೀಲ್ದಾರರು ಇತರರು ನಾಮಫಲಕಗಳಲ್ಲಿ ಕನ್ನಡ ಅನುಷ್ಠಾನ ಸಂಬಂಧ ಹಲವು ಮಾಹಿತಿ ನೀಡಿದರು.

## ವೃತ್ತಿಧರ್ಮ ಕರ್ತವ್ಯಕ್ಕೆ ಸಹಕಾರಿಯಾಯಿತು: ನ್ಯಾ.ಸಮೀವುಲ್ಲಾ

**ಪಿರಿಯಾಪಟ್ಟಣ:** ವಕೀಲ ವೃತ್ತಿಯಲ್ಲಿ ಕಕ್ಷಿದಾರರು ಹಾಗೂ ವಕೀಲರ ಕಷ್ಟ-ಸುಖಗಳನ್ನು ಅರಿತಿದ್ದರಿಂದ ನ್ಯಾಯಾಧೀಶರಾಗಿ ಉತ್ತಮ ಕರ್ತವ್ಯ ನಿರ್ವಹಿಸಲು ಸಹಕಾರಿಯಾಯಿತು ಎಂದು ಸಿವಿಲ್ ಹಿರಿಯ ಶ್ರೇಣಿ ನ್ಯಾಯಾಧೀಶ ಸಮೀವುಲ್ಲಾ ತಿಳಿಸಿದರು.

ಜಿಲ್ಲಾ ನ್ಯಾಯಾಧೀಶರರಾಗಿ ಪದೋನ್ನತಿ ಹೊಂದಿದ ಹಿನ್ನಲೆ ಪಟ್ಟಣದ ವಕೀಲರ ಸಂಘದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ನಾನು ನ್ಯಾಯಾಧೀಶನಾಗುವ ಮೊದಲು ಹತ್ತು ವರ್ಷಗಳ ಕಾಲ ಉತ್ತಮವಾಗಿ ವಕೀಲ ವೃತ್ತಿಯಲ್ಲಿ ತೊಡಗಿದ್ದೆ. ನ್ಯಾಯಾಧೀಶರಾಗಿ ಕಾರ್ಯ ನಿರ್ವಹಿಸುವಾಗ ಎಲ್ಲರನ್ನೂ ಮೆಚ್ಚಿಸಲು ಸಾಧ್ಯವಿಲ್ಲ ಆದರೆ ದೇವರು ಮೆಚ್ಚುವಂತೆ ಕೆಲಸ ಮಾಡುವ ಅಗತ್ಯವಿದೆ. 6 ಸ್ಥಳಗಳಲ್ಲಿ ನಾನು ಕಾರ್ಯನಿರ್ವಹಿಸಿರುವ ಸಂದರ್ಭದಲ್ಲಿ ಎಲ್ಲರೂ ನನಗೆ ಉತ್ತಮವಾಗಿ ಸ್ಪಂದಿಸಿ ಗುಣಮಟ್ಟದ ನ್ಯಾಯದಾನ ಮಾಡಲು ಸಹಕರಿಸಿದ್ದಾರೆ ಇದು ದೇವರ ಕೃಪೆಯಿಂದ ಸಾಧ್ಯವಾಗಿದೆ ಎಂದು ಭಾವಿಸಿದ್ದೇನೆ ಎಂದರು.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಶ್ವೇತ ಮಾತನಾಡಿ ನಾನು ನ್ಯಾಯಾಧೀಶರಾಗಿ ನೇಮಕಗೊಂಡು ಮೊದಲ ಸ್ಥಳದಲ್ಲಿ ಕೆಲಸ ನಿರ್ವಹಿಸುತ್ತಿದ್ದೇನೆ. ಈ ವೇಳೆ ನ್ಯಾಯಾಧೀಶರಾದ ಸಮಿವುಲ್ಲಾ ಅವರು ಹಿರಿಯಣ್ಣನಂತೆ ನಮ್ಮೆಲ್ಲರಿಗೂ ಮಾರ್ಗದರ್ಶನ ನೀಡಿದ್ದಾರೆ ಎಂದರು.

ವಕೀಲರ ಸಂಘದ ಅಧ್ಯಕ್ಷ ಧನಪಾಲ್, ಸರ್ಕಾರಿ ಸಹಾಯಕ ಅಭಿಯೋಜಕ ಶ್ರೀನಾಥ್, ವಕೀಲರ ಸಂಘದ ಕಾರ್ಯದರ್ಶಿ ಶಂಕರ್, ಖಜಾಂಚಿ ಹರೀಶ್, ಪದಾಧಿಕಾರಿಗಳಾದ ಬೇಬಿ ಮಂಜುಳಾ, ರಘುರಾಮ್ ಸೇರಿದಂತೆ ಹಿರಿಯ ಮತ್ತು ಕಿರಿಯ ವಕೀಲರು ಹಾಜರಿದ್ದರು.



# ಸ್ವಾವಲಂಬಿ ಬದುಕಿಗೆ ಸಹಕಾರವಾಗಿದೆ ಸಂಜೀವಿನಿ

### ಕ್ರಿಯಾತ್ಮಕವಾಗಿ ವಸ್ತುಗಳಿಗೆ ಬೇಡಿಕೆ ಹೆಚ್ಚಿಸಿಕೊಂಡು ಬದುಕು ಕಟ್ಟಿಕೊಳ್ಳಿ: ಸಿಇಒ ಕೆ.ಎಂ.ಗಾಯಿತ್ರಿ

**ಮೈಸೂರು:** ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷಿನ್ ಅಡಿಯಲ್ಲಿ(ಎನ್. ಆರ್.ಎಲ್.ಎಂ) ಗ್ರಾಮೀಣ ಭಾಗದ ಸಾಕಷ್ಟು ಮಹಿಳೆಯರು ಆರ್ಥಿಕವಾಗಿ ಸದೃಢಗೊಳುತ್ತಿದ್ದು, ಇನ್ನಷ್ಟು ವಿನೂತನ ರೀತಿಯಲ್ಲಿ ಉಪಯುಕ್ತವಾಗುವಂತಹ ವಿವಿಧ ಉತ್ಪನ್ನಗಳನ್ನು ತಯಾರಿಸಿ ತಮ್ಮದೇ ಬ್ರ್ಯಾಂಡ್ ಸೃಷ್ಠಿಸಿಕೊಂಡು ಮುಖ್ಯವಾಹಿನಿಗೆ ಬರುವಂತೆ ಸಂಜೀವಿನಿ ಸಂಘದ ಸ್ಥಳೀಯ ಸಮುದಾಯ ಸಂಪನ್ಮೂಲ ವ್ಯಕ್ತಿ ಹಾಗೂ ಮುಖ್ಯ ಪುಸ್ತಕ ಬರಹಗಾರರುಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯಿತ್ರಿ ತಿಳಿಸಿದರು.

ನಂಜನಗೂಡು ತಾಲೂಕಿನ ಹದಿನಾರು ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ವಿವಿಧ ಇಲಾಖೆಗಳೊಂದಿಗೆ ಹಲವು ಯೋಜನೆಗಳ ಕುರಿತು ಪ್ರಗತಿ ಪರಿಶೀಲನೆ ಸಭೆ ನಡೆಸಿ ಮಾತನಾಡಿದ ಅವರು, ಸಂಜೀವಿನಿ ಸಂಘಗಳಿಂದ ನೀಡಲಾಗುವ ಪ್ರೋತ್ಸಾಹಧನನ್ನು ಮಹಿಳೆಯರು ವಿನೂತನ ರೀತಿಯಲ್ಲಿ ಇಂಬ್ರಾಯಿಡ್ರಿ ಮಾಡುವುದು, ವಿವಿಧ ತಿನಿಸುಗಳ ತಯಾರಿಕೆ, ಗೊಬ್ಬರ ತಯಾರಿಕೆ, ಅಣಬೆ ಬೆಳೆಯುವುದು ಸೇರಿದಂತೆ ಸ್ಥಳೀಯವಾಗಿ ಬೆಳೆಯುವ ಬಾಳೆಯಿಂದ ಬಾಳೆಕಾಯಿ ಚಿಪ್ಸ್, ಬಾಳೆ ದಿಂಡಿನಿಂದ ಜ್ಯೂಸ್, ಅದರ ತ್ಯಾಜ್ಯಗಳಿಂದ ಗೊಬ್ಬರ ತಯಾರಿಕೆ ಹೀಗೆ ವಿನೂತನ ರೀತಿಯಲ್ಲಿ ಉತ್ಪಾದನೆ ಮಾಡಿ ಅವುಗಳಿಗೆ ಕ್ರಿಯಾತ್ಮಕವಾಗಿ ಬೇಡಿಕೆ ಹೆಚ್ಚಿಸಿಕೊಂಡು ಸ್ವಾವಲಂಭಿ ಬದುಕು ಕಟ್ಟಿಕೊಳ್ಳುವಂತೆ ಜೀವನ ಪಾಠ ಮಾಡಿದರು.

ಜಲ ಜೀವನ್ ಯೋಜನೆ ಪ್ರಗತಿ ಪರಿಶೀಲಿಸಿದ ಅವರು, ಪಂಚಾಯಿತಿ ವ್ಯಾಪ್ತಿಯಲ್ಲಿ ನೀರಿನ ಸಂಪರ್ಕ ಕೆಲಸವನ್ನು ಶೀಘ್ರವೇ ಪೂರ್ಣಗೊಳಿಸಬೇಕು ಎಂದರು. ಈ ವೇಳೆ ಅನುಮೋದಿತ ವರದಿಗಿಂತ ನೀರಿನ ಸಂಪರ್ಕ ಹೆಚ್ಚಾಗಿರುವ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದು, ಉಳಿತಾಯ ಹಣದಿಂದ ಭರಿಸುವಂತೆ ಸಿಇಓ ತಿಳಿಸಿದರು. ಮಹಾತ್ಮ ಗಾಂಧಿ ನರೇಗಾ ಯೋಜನೆ ಕುರಿತು ಪರಿಶೀಲಿಸಿದ ಅವರು, ನಿಷ್ಕ್ರಿಯವಾಗಿರುವ ಜಾಬ್ ಕಾರ್ಡ್ ಗಳನ್ನು ಕ್ರಿಯಾಶೀಲವಾಗಿಸಲು ಕ್ರಮತೆಗೆದುಕೊಳ್ಳಬೇಕು. ಮಹಿಳಾ ಸಂಘಧ ಮಹಿಳೆಯರನ್ನು ಒಗ್ಗೂಡಿಸಿಕೊಂಡು



ಅಭಿಯಾನಗಳ ಮೂಲಕ ಬೇಡಿಕೆ ಸಂಗ್ರಹಿಸಿ ಕೆಲಸ ನೀಡುವಂತೆ ಸೂಚಿಸಿದ ಅವರು, ಕೈಗೊಂಡಿರುವ ಕಾಮಗಾರಿಗಳನ್ನು ಶೀಘ್ರವೇ ಪೂರ್ಣಗೊಳಿಸುಂತೆ ಇದೇ ವೇಳೆ ತಿಳಿಸಿದರು. ಗ್ರಾಮ ಪಂಚಾಯಿತಿಯಲ್ಲಿ ಆಸ್ತಿ ಸಮೀಕ್ಷೆ ಕುಂಠಿತಗೊಂಡಿದ್ದು, ಇದರಿಂದ ತೆರಿಗೆ ಸಂಗ್ರಹಿಸುದು ಕಷ್ಟವಾಗುತ್ತದೆ. ಆದ್ದರಿಂದ ಶೀಘ್ರವೇ ಆಸ್ತಿ ಸಮೀಕ್ಷೆ ಪೂರ್ಣಗೊಳಿಸುವಂತೆ ತಿಳಿಸಿದ ಅವರು ಸಕಾಲದಲ್ಲಿ ಯಾವುದೇ ಅರ್ಜಿಗಳನ್ನು ಬಾಕಿ ಉಳಿಸಿಕೊಳ್ಳದಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಸೂಚಿಸಿದರು.

ಅಲ್ಲದೆ, ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸದಂತೆ ಕ್ರಮವಹಿಸಬೇಕು, ಎಲ್ಲಾ ಚರಂಡಿ, ನೀರಿನ ಟ್ಯಾಂಕ್ ಗಳು, ದನಗಳು ಕುಡಿಯುವ ನೀರಿನ ತೊಟ್ಟಿಯಲ್ಲಿ ಕಾಲ ಕಾಲಕ್ಕೆ ಸ್ವಚ್ಛಗೊಳಿಸುತ್ತಿರುವ ಬಗ್ಗೆ ಖಾತರಿ ಪಡಿಸಿಕೊಂಡರು.

ಕೂಸಿನ ಮನೆಗೆ ಮೆಚ್ಚುಗೆ: ಸಭೆ ಬಳಿಕ ಪಂಚಾಯಿತಿ ಎದುಗಿರಿನ ಕೂಸಿನ ಮನೆಗೆ ಭೇಟಿ ನೀಡಿದ ಅವರು, ಕೂಸಿನ ಮನೆಯ ಅತ್ಯಾಕರ್ಷಕ ಪೇಯಿಟಿಂಗ್, ಚಾರ್ಟ್‌ಗಳ ಪ್ರದರ್ಶನ ಹಾಗೂ ಕಟ್ಟಡ ವಿಶಾಲ ಹಾಗೂ ಸುಸಜ್ಜಿತವಾಗಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಬಳಿಕ ದಾಖಲಾತಿ ಪುಸ್ತಕಗಳನ್ನು ಪರಿಶೀಲಿಸಿ, ಜಿಲ್ಲಾ ಪಂಚಾಯಿತಿ ಸಮಿತಿಯಿಂದ ಸಿದ್ದಪಡಿಸಿರುವ ಆಹಾರದ ಮೆನುವಿನಲ್ಲಿ ಬದಲಾವಣೆ ಬೇಕಿದಲ್ಲಿ ತಿಳಿಸುವಂತೆ ಕೇರ್ ಟೇಕರ್ಸ್ ಗಳಿಗೆ ತಿಳಿಸಿದರು.

ಬಳಿಕ ನರೇಗಾ ಯೋಜನೆಯಡಿ ಬಾಳೆ ಬೆಳೆದಿದ್ದ ಫಲಾನುಭವಿ ಮಹೇಶ್ ಎಂಬುವವರು ಬಾಳೆ ತೋಟಕ್ಕೆ ಭೇಟಿ ನೀಡಿ ಪರಿಶೀಲಿಸಿದ ಅವರು, ಉದ್ಯೋಗ ಖಾತರಿ ಯೋಜನೆ ಅಡಿ ವೈಯಕ್ತಿಕ ಕಾಮಗಾರಿಗಳಿಗೆ ಇದ್ದ 2.5 ಲಕ್ಷ ಮಿತಿಯನ್ನು 5 ಲಕ್ಷ ರೂ.ಗೆ ಹೆಚ್ಚಿಸಲಾಗಿದೆ, ಹಾಗಾಗಿ ಇನ್ನಷ್ಟು ವೈಯಕ್ತಿಕ ಕಾಮಗಾರಿಗಳನ್ನು ಕೈಗೊಂಡು ಆರ್ಥಿಕವಾಗಿ ಸದೃಢಗೊಳ್ಳುವಂತೆ ಫಲಾನುಭವಿಗೆ ಸೂಚಿಸಿದರು.

ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ, ಪರಿಶೀಲನೆ ಹದಿನಾರು ಗ್ರಾಮದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಎಲ್ಲಾ ಕೊಠಡಿ, ಕಾರ್ಯವೈಖರಿ ಹಾಗೂ ದಾಖಲಾತಿ ನಿರ್ವಹಣೆ ಪುಸ್ತಕಗಳನ್ನು ಕುಲಂಕಷವಾಗಿ ಪರಿಶೀಲಿಸಿದರು. ಅಲ್ಲದೆ ಆಸ್ಪತ್ರೆಯಲ್ಲಿದ್ದ ರೋಗಿಗಳೊಂದಿಗೆ ಖುದ್ದು ಮಾತನಾಡಿ, ಆಸ್ಪತ್ರೆಯ ವಾತವಾರಣ, ಸಿಬ್ಬಂದಿಯ ಕಾರ್ಯವೈಖರಿ, ಇಲ್ಲಿನ ಸೇವೆ ಕುರಿತು ಮಾಹಿತಿ ಸಂಗ್ರಹಿಸಿದರು.

ನರೇಗಾ ಸಹಾಯಕ ನಿರ್ದೇಶಕ ಶಿವಕುಮಾರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ವಿವೇಕ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರದೀಪ್ ಕುಮಾರ್, ಕಾರ್ಯದರ್ಶಿ ಸೇರಿದಂತೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

### ಜಿಲ್ಲಾಧಿಕಾರಿ ಶಿಲ್ಪನಾಗ್ ಅವರಿಗೆ ರೈತರ ಮನವಿ

# ಬಂಡಿಕೆರೆಗೆ ಶೀಘ್ರ ನೀರು ತುಂಬಿಸಿ

**ಚಾಮರಾಜನಗರ:** ಬಂಡಿಗೆರೆ ಕೆರೆಗೆ ಆದಷ್ಟು ಬೇಗ ನೀರು ತುಂಬಿಸಬೇಕೆಂದು ತಾಲೂಕಿನ ಬಂಡಿಗೆರೆ ಕೆರೆ ವ್ಯಾಪ್ತಿಯ ರೈತರು ಜಿಲ್ಲಾಧಿಕಾರಿ ಶಿಲ್ಪನಾಗ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ತಾಲೂಕಿನ ಕೋಡಿಮೋಳೆ ಕೆರೆಯಿಂದ ಬಂಡಿಗೆರೆ ಕೆರೆ, ಚಿಕ್ಕಕೆರೆ, ದೊಡ್ಡಕೆರೆ ಸೇರಿದಂತೆ ಹಲವು ಕೆರೆಗಳಿಗೆ ನೀರು ತುಂಬಿಸುವ ಸಲುವಾಗಿ ಪೈಪ್‌ಲೈನ್ ಕೆಲಸ ಮುಗಿದಿದ್ದರೂ ಸಹ ಕಾಮಗಾರಿ ಪೂರ್ಣಗೊಳ್ಳದೆ ಕೆರೆಗಳಿಗೆ ನೀರು ಇಲ್ಲದಂತಾಗಿದೆ. ಈ ಯೋಜನೆಯ ಕಾಮಗಾರಿ ಕಳೆದ 5 ವರ್ಷಗಳಿಂದಲೂ ಆಮೆಗತಿಯಲ್ಲಿ ನಡೆಯುತ್ತಿದೆ. ಮಳೆ ಸಕಾಲಕ್ಕೆ ಆಗದೆ ಅಂತರ್ಜಲ ಮಟ್ಟ ತುಂಬಾ ಕಡಿಮೆಯಾಗಿದ್ದು ಕೊಳವೆ ಬಾವಿಗಳಲ್ಲೂ ಸಹ ನೀರು ಕಡಿಮೆಯಾಗಿದೆ. ಇದರಿಂದ ಕೆರೆಯ ಅಚ್ಚುಕಟ್ಟುದಾರರಿಗೆ ಬೆಳೆಗಳಿಗೆ ಹಾಗು ದನಕರುಗಳಿಗೆ ನೀರಿನ ಅಭಾವ ಉಂಟಾಗಿದ್ದು ತುಂಬಾ ಅನಾನುಕೂಲವಾಗಿದೆ.

ಜಿಲ್ಲಾಧಿಕಾರಿಗಳು ಸಂಭಂದಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡುವ ಮೂಲಕ ಕಾಮಗಾರಿಯನ್ನು ಆದಷ್ಟು ಬೇಗ ಮುಗಿಸಿ ಎಲ್ಲಾ ಕೆರೆಗಳಿಗೂ ನೀರು ತುಂಬಿಸಿ ರೈತರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರೈತರಾದ ಜಯಸಿಂಹ, ಹೊಸೂರು ಜಗದೀಶ್, ಮಹದೇವಸ್ವಾಮಿ(ಸೋಮೇಶ್), ನಾಗೇಂದ್ರಸ್ವಾಮಿ, ಚಂದ್ರಶೇಖರ್, ಮಹದೇವಶೆಟ್ಟಿ, ಕಾವೇರಿಶಿವಕುಮಾರ್, ಸಿದ್ದೇಶ್ ಇತರರು ಹಾಜರಿದ್ದರು.



## ವರುಣನ ಆರ್ಭಟಕ್ಕೆ ಮುಳುಗಿದ ಮಾದಪ್ಪನ ಬಾವಿ

**ಚಾಮರಾಜನಗರ :** ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಪ್ರತಿವರ್ಷದಂತೆ ಈ ವರ್ಷವೂ, ಭಾರಿ ಮಳೆಗೆ ನಂದನವನ ನೀರಿನಿಂದ ಆವೃತ್ತಗೊಂಡಿದೆ.

ಮಹದೇಶ್ವರ ಬೆಟ್ಟದಲ್ಲಿ ಮಳೆ ಬಂದರೆ ಮಳೆಯ ನೀರಿನ ರಭಸಕ್ಕೆ ಮಹದೇಶ್ವರನಿಗೆ ಪ್ರತಿದಿನ ತ್ರಿಕಾಲ ಪೂಜೆ ನೆರವೇರಿಸಲು ಅಗ್ರೋದಕವನ್ನು ತರುವ ನಂದನವನದ ಮಜ್ಜನ ಬಾವಿ ಸಂಪೂರ್ಣ ನೀರಿನಿಂದ ಅವೃತವಾದಾಗಲೆಲ್ಲ ಅರ್ಚಕರು ಮತ್ತೊಂದು ಬಾವಿಯಿಂದ ಜಲವನ್ನು ತಂದು ಪೂಜೆ ನೆರವೇರಿಸುವ ಸನ್ನಿವೇಶ ಎದುರಾಗಿದೆ.

ಮಹದೇಶ್ವರ ಬೆಟ್ಟದ ಮಜ್ಜನ ಬಾವಿಯ ಪ್ರದೇಶಕ್ಕೆ ಕೊಳಚೆ ನೀರು ಸೇರುವುದರಿಂದ ಈ ಸನ್ನಿವೇಶದಲ್ಲಿ ಅರ್ಚಕರು ಎರಡೆರಡು ಬಾರಿ ಸ್ನಾನ ಮಾಡಿ ಪೂಜೆಗೆ ತೆರಳುವ ಸನ್ನಿವೇಶ ಉಂಟಾಗುತ್ತದೆ.

ಈ ಬಗ್ಗೆ ಅಗತ್ಯ ಕ್ರಮವಹಿಸುವಂತೆ ಶ್ರೀ ಮಲೆ ಮಹದೇಶ್ವರ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಆಡಳಿತಕ್ಕೆ ಈ ಹಿಂದೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎನ್ನಲಾಗುತ್ತಿದೆ. ಇದೂವರೆಗೂ ಅಧಿಕಾರಿಗಳು ಒಳಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸಿ ಕೊಳಚೆ ನೀರು ದೇಗುಲದ ಆವರಣದಲ್ಲಿ ನಿಲ್ಲದಂತೆ ಕ್ರಮವಹಿಸಿಲ್ಲ ಎನ್ನುವ ದೂರು ಕೇಳಿ ಬರುತ್ತಿದೆ.



ನೂತನವಾಗಿ ಅಧಿಕಾರ ಸ್ವೀಕರಿಸಿರುವ ಪ್ರಾಧಿಕಾರದ ಕಾರ್ಯದರ್ಶಿ ರಘು ಪ್ರತಿ ಬಾರಿಯೂ ಮಳೆ ಬಂದಾಗ ಮಜ್ಜನಬಾವಿ ಮುಳುಗಡೆಯಾಗುವುದನ್ನು ತಪ್ಪಿಸಿ, ಮಳೆಯ ನೀರನ್ನು ಬೇರಡೆ ಹೋಗುವುದಕ್ಕೆ ಅನುಕೂಲ ಮಾಡಿಕೊಡಬೇಕಾಗಿದೆ.

ಈ ಹಿಂದೆ ಹಲವು ಬಾರಿ ಸಾಮಾಜಿಕ ಜಾಲತಾಣ ಹಾಗೂ ಮಾಧ್ಯಮಗಳಲ್ಲಿ ಮಜ್ಜನ ಬಾವಿಯ ನೀರು ಕಲುಷಿತ ಕೊಳ್ಳುವುದರ ಬಗ್ಗೆ ಸುದ್ದಿ ಬಿತ್ತರಗೊಂಡಿತು. ಪ್ರತಿ ಬಾರಿಯೂ ಮಳೆ ಬಂದಾಗ ನಂದನವನ ಪ್ರದೇಶ ಮಳೆಯ ನೀರಿನ ಆವೃತ ಗೊಳ್ಳುತ್ತದೆ ಇದನ್ನು ತಪ್ಪಿಸಲು ಒಂದು ಬೃಹತ್ ಇಂಗುಗುಂಡಿಯನ್ನು ಸ್ಥಾಪಿಸಬಹುದು. ಇದರಿಂದಲೂ ಕೂಡ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಸಹಾಯವಾಗುತ್ತದೆ ಇಲ್ಲವೇ ಪಕ್ಕದಲ್ಲಿರುವ ಎರಡು ಬೃಹತ್ ಕಲ್ಯಾಣಿ ಕೊಳಕ್ಕೆ ಮಳೆ ನೀರು ಸರಾಗವಾಗಿ ಹೋಗಿ ಸೇರುವುದಕ್ಕೆ ಅನುಕೂಲ ಮಾಡಬಹುದಾಗಿದೆ ಎಂಬುದು ಇಲ್ಲಿನ ನಿವಾಸಿಗಳ ಮನವಿ.

# ಶೋಷಿತ ಜನರ ಸಂಕಷ್ಟಗಳಿಗೆ ಸ್ಪಂದಿಸಿದ ಶ್ರೀನಿವಾಸಪ್ರಸಾದ್




**ಚಾಮರಾಜನಗರ:** ಹೋರಾಟದ ಹಿನ್ನೆಲೆಯಿಂದ ಬಂದ ಸಂಸದ ವಿ. ಶ್ರೀನಿವಾಸಪ್ರಸಾದ್ ಅವರು ಬುದ್ಧ, ಬಸವ, ಅಂಬೇಡ್ಕರ್ ಅವರ ಹಾದಿಯಲ್ಲಿ ಸಾಗುವ ಮೂಲಕ ಜನರ ಶ್ರೇಯೋಭಿವೃದ್ಧಿಗೆ ದುಡಿದವರು ಎಂದು ಹಿರಿಯ ಸಾಹಿತಿ ಡಾ. ಮೂಡ್ನಾಕೂಡು ಚಿನ್ನಸ್ವಾಮಿ ತಿಳಿಸಿದರು. ನಗರದ ಡಾ. ರಾಜ್‌ಕುಮಾರ್ ಕಲಾಮಂದಿರದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸಂಘಗಳ ಒಕ್ಕೂಟ ಹಾಗೂ ವಿ. ಶ್ರೀನಿವಾಸಪ್ರಸಾದ್ ಅಭಿಮಾನಿಗಳ ಬಳಗದ ವತಿಯಿಂದ ನಡೆದ ಸ್ವಾಭಿಮಾನಿ ಚಕ್ರವರ್ತಿ ವಿ. ಶ್ರೀನಿವಾಸಪ್ರಸಾದ್ ನಿಮಗಿದೋ ನಮ್ಮ ನಮನ ಕಾರ್ಯಕ್ರಮವನ್ನು ಉದ್ಘಾಟಿಸಿ, ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು. 50 ವರ್ಷಗಳ ಸುದೀರ್ಘ ರಾಜಕಾರಣದಲ್ಲಿ ಒಂದು ಕಪ್ಪು ಚುಕ್ಕಿ ಇಲ್ಲದೇ ಸ್ವಾಭಿಮಾನದಿಂದ ರಾಜಕಾರಣ ಮಾಡಿದ ಧೀಮಂತ ನಾಯಕ. ಸದಾ ಜನರ ಹಿತಕ್ಕಾಗಿ ತಮ್ಮ ಜೀವನವನ್ನು ಮುಡಾಗಿಟ್ಟು ಹೋರಾಟ ಮಾಡಿದರು. ವಿದ್ಯಾರ್ಥಿ ಚಳವಳಿಯ ಮೂಲಕ ರಾಜಕಾರಣಕ್ಕೆ ಬಂದ ಪ್ರಸಾದ್ ಅವರು ಎಂದು ಸಹ ವ್ಯವಸ್ಥೆಗೆ ರಾಜಿಯಾಗಲಿಲ್ಲ ಎಂದರು. ನೇರ ಹಾಗೂ ನಿಷ್ಠುರವಾದಿಯಾಗಿದ್ದ ಪ್ರಸಾದ್ ಅವರು, ಬುದ್ಧ, ಬಸವ ಹಾಗೂ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ಮೈಗೂಡಿಸಿಕೊಂಡು ಅವರ ಹಾದಿಯಲ್ಲಿ ಸಾಗುವ ಮೂಲಕ ಜನನಾಯಕರಾಗಿ ಬೆಳೆದರು. ಎಲ್ಲಾ ವರ್ಗಗಳ ಸಮುದಾಯದ ವಿಶ್ವಾಸದೊಂದಿಗೆ ಸಮಾನತೆಗಾಗಿ ಶ್ರಮಿಸಿದ್ದರು. ಅವರು ಬಿಜೆಪಿಗೆ ಸೇರಿದರು ಸಹ ಬಲ ಪಂಥೀಯ ವಾದವನ್ನು ಬಿಡಲಿಲ್ಲ. ತಮ್ಮ ಸ್ವಾಭಿಮಾನವನ್ನು ಬಿಟ್ಟು ಕೊಡಲಿಲ್ಲ. ಇದಕ್ಕೆ ಅನೇಕ ನಿರ್ದಶನಗಳು ನಮ್ಮ ಮುಂದಿವೆ. ಅನ್ಯಾಯ ಹಾಗೂ ಶೋಷಣೆಗಳು ಕಂಡಾಗ ನೇರವಾಗಿ ಮಾತನಾಡುತ್ತಿದ್ದರು ಎಂದರು. 2001ರದಲ್ಲಿ ದಕ್ಷಿಣ ಅಫ್ರಿಕಾದಲ್ಲಿ ಜನಾಂಗೀಯ ತಾರತಮ್ಯ ಕುರಿತು ಒಂದು ಅಂತರಾಷ್ಟ್ರೀಯ ವಿಚಾರ ಸಂಕಿರಣ ನಡೆಯುತ್ತಿತ್ತು. ಈ ಸಂದರ್ಭದಲ್ಲಿ ಭಾರತದಲ್ಲಿ ಜನಾಂಗೀಯ ದ್ವೇಷ ಇಲ್ಲ ಎಂಬ ಹೇಳಿಕೆಯನ್ನು ನೀಡಿದ್ದರು. ಇದರ ವಿರುದ್ದ ಅಂದೇ ಆ ಪಕ್ಷದ ಮೈತ್ರಿ ಸರ್ಕಾರದಲ್ಲಿ ಸಚಿವರಾಗಿದ್ದ ವಿ. ಶ್ರೀನಿವಾಪ್ರಸಾದ್ ಅವರು ನಮ್ಮ ದೇಶದಲ್ಲಿ ಜನಾಂಗೀಯ ದ್ವೇಷ ವಿಲ್ಲ ನಿಜ. ಆದರೆ ಅದಕ್ಕಿಂತ ಕ್ರೂರವಾಗಿರುವ ಜಾತಿ ಪದ್ದತಿ ಜೀವಂತವಾಗಿದೆ ಎಂದಿದ್ದರು. ಪ್ರಧಾನಿ ವಾಜಪೇಯಿ ಅವರಿಗೆ ಪತ್ರ ಬರೆದಿದ್ದರು. ಈ ಬಗ್ಗೆ ಚರ್ಚೆ ಮಾಡುವಂತೆ ಅನೇಕ ಬಾರಿ ಪ್ರಯತ್ನಗಳು ನಡೆದವು. ಕೇಂದ್ರ ಸಚಿವರಾಗಿದ್ದ ಜಾರ್ಜ್ ಫರ್ನಾಂಡೀಸ್ ಅವರಿಗೆ ಹೇಳಿದ್ದರು. ಆದರೆ, ಇದು ಮುಂದುವರಿಯಲ್ಲ ಎಂದರು. ನಿವೃತ್ತ ಅರಣ್ಯ ಸಂರಕ್ಷಣಾಧಿಕಾರಿ ಡಾ. ಆರ್. ರಾಜು ಮಾತನಾಡಿ, ಸಂಸದ ವಿ. ಶ್ರೀನಿವಾಸಪ್ರಸಾದ್ ಅವರು 50 ವರ್ಷಗಳ ರಾಜಕಾರಣದಲ್ಲಿ ಅಭಿವೃದ್ಧಿ ಪರ ಹಾಗೂ ಜನರ ಪರವಾಗಿ ಚಿಂತನೆ ಮಾಡುತ್ತಿದ್ದರು. ಅವರೊಂದಿಗಿನ ನನ್ನ ಒಡನಾಟ 30 ವರ್ಷಗಳಿಗೂ ಹೆಚ್ಚು ಆಗಿತ್ತು. ನಾನು ಅಧಿಕಾರಿಯಾಗಿ ಅವರೊಂದಿಗೆ ಬೆರೆತ ಕ್ಷಣಗಳು ಅವಿಸ್ಮರಣೀಯ ಎಂದರು.

ಸಂಸದರಾಗಿ ಅವರು ಹಾಡಿಗಳಿಗೆ ಒಮ್ಮೆ ಭೇಟಿ ನೀಡಿ ಅಲ್ಲಿನ ಜನರ ಸ್ಥಿತಿಗತಿಗಳನ್ನು ಅರಿತು ಆ ತಕ್ಷಣವೇ ನನ್ನೊಂದಿಗೆ ಮಾತನಾಡಿ, ಹಾಡಿ ಮತ್ತು ಪೋಡಿಗಳಲ್ಲಿರುವ ಹಾಡಿ ಜನರಿಗೆ ತಕ್ಷಣದಿಂದಲೇ ಪಡಿತರ ಕೊಡಿಸುವಲ್ಲಿ ಯಶಸ್ವಿಯಾಗಿದ್ದರು. ಆದೇ ರೀತಿ ಕೇರಳ ಮಾರ್ಗದ ಬಂಡೀಪುರ ರಸ್ತೆಯನ್ನು ರಾತ್ರಿ ಸಂಚಾರ ಬಂದ್ ಮಾಡಿದ್ದಾಗ ನನ್ನ ಮೇಲೆ ಬಹಳಷ್ಟು ಒತ್ತಡ ಬಂದವು. ಸ್ವತಃ ಮುಖ್ಯಮಂತ್ರಿಗಳೇ ಇದರ ಬಗ್ಗೆ ವಿರೋಧ ವ್ಯಕ್ತಪಡಿಸಿದ್ದರು. ನನ್ನ ವಿರುದ್ದ ಕಿಡಿಕಾರಿದ್ದರು. ಈ ವಿಚಾರವನ್ನು ಪ್ರಸಾದ್ ಅವರ ಗಮನಕ್ಕೆ ತಂದಿದ್ದೆ. ನಾನು ಅವರೊಂದಿಗೆ ಮಾತು ಮುಗಿಸಿ ಹೊರ ಹೋಗುವರಷ್ಟಲ್ಲಿಯೇ ಸಂಬಂಧ ಪಟ್ಟರವರಿಗೆ ಫೋನ್ ನಲ್ಲಿ ಮಾತನಾಡಿ, ರಾಜು ನಮ್ಮವ. ಆತನ ವಿರುದ್ದ ಕ್ರಮವಾದರೆ, ಕೆಟ್ಟ ಪರಿಣಾಮವನ್ನು ನೀವು ಎದುರಿಸಬೇಕಾಗುತ್ತದೆ ಎಂಬ ಎಚ್ಚರಿಕೆಯನ್ನು ನೀಡಿದ್ದರು. ಸಮಾಜದ ಅಧಿಕಾರಿಗಳ ಪರವಾಗಿ ಬಹಳ ಕಾಳಜಿ ವಹಿಸಿದ್ದರು ಎಂದು ಸ್ಮರಿಸಿದರು. ಅವರಂತೆ ಎರಡು ಜಿಲ್ಲೆಗಳಲ್ಲಿ ಪ್ರಬುದ್ದ ನಾಯಕರನ್ನು ನಾವು ಬೆಳೆಸುವ ಅವಶ್ಯಕತೆ ಇದೆ. ಇಂಥ ಎಲ್ಲಾ ಗುಣವನ್ನು ಹೊಂದಿರುವ ನಾಯಕರನ್ನು ಗುರುತಿಸಿ ಅವರಿಗೆ ಶಕ್ತಿ ತುಂಬುವ ಕೆಲಸವನ್ನು ಈ ವೇದಿಕೆಯಿಂದಲೇ ಮಾಡಬೇಕು ಎಂದು ರಾಜು ಕಿವಿಮಾತು ಹೇಳಿದರು. ವಿ. ಶ್ರೀನಿವಾಪ್ರಸಾದ್ ಅವರ ಜೇಷ್ಠ ಪುತ್ರಿ ಪ್ರತಿಮಾ ಪ್ರಸಾದ್ ಮಾತನಾಡಿ, ಚಾಮರಾಜನಗರ ಜಿಲ್ಲೆ ನನ್ನ ತಂದೆಗೆ ರಾಜಕೀಯ ವಾಗಿ ಶಕ್ತಿ ನೀಡಿದ ಜಿಲ್ಲೆ. ಅವರಿಗೆ ಚಾಮರಾಜನಗರ ಜಿಲ್ಲೆಯ ಜನರ ಬಗ್ಗೆ ಅಪಾರವಾದ ಪ್ರೀತಿ ಇತ್ತು. ಅವರ ಪಾರ್ಥಿವ ಶರೀರವನ್ನು ಚಾ.ನಗರಕ್ಕೆ ತರಬೇಕಾಗಿತ್ತು. ವೈದ್ಯಕೀಯ ಕಾರಣ ದಿಂದಾಗಿ ಇದು ಸಾಧ್ಯವಾಗಲಿಲ್ಲ. ನಮ್ಮ ಕುಟುಂಬದ ಪರವಾಗಿ ನಿಮ್ಮೆಲ್ಲರ ಕ್ಷಮೆ ಕೋರುತ್ತೇನೆ. ಮುಂದೆಯು ಸಹ ನಿಮ್ಮೆಲ್ಲರ ಪ್ರೀತಿ ವಿಶ್ವಾಸ ನಮ್ಮ ಮನೆತನದ ಮೇಲಿರಲಿ. ನಮ್ಮ ತಂದೆಯವರ ಹಾದಿಯಲ್ಲಿ ನಾನು ಸಾಗಬೇಕೆಂದುಕೊಂಡಿದ್ದೇನೆ. ನಿಮ್ಮೆಲ್ಲರ ಆರ್ಶೀವಾದ ನಮ್ಮ ಮೇಲಿರಲಿ ಎಂದು ಭಾವುಕರಾದರು.

## ವಿಜ್ಞಾನ ಕಾರ್ಯಾಗಾರಕ್ಕೆ ಜಿಲ್ಲೆಯಿಂದ ನಾಲ್ವರು ಆಯ್ಕೆ

**ಕೋಲಾರ:** ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯನ್ನು ಮತ್ತಷ್ಟು ವಿಸ್ತರಿಸಿ ಗಟ್ಟಿಗೊಳಿಸುವ ಉದ್ದೇಶದಿಂದ ಕೆಜೆವಿಎಸ್ ರಾಜ್ಯ ಪದಾಧಿಕಾರಿಗಳು ಹಾಗೂ ಜಿಲ್ಲಾಧ್ಯಕ್ಷರು ಮತ್ತು ಕಾರ್ಯದರ್ಶಿಗಳಿಗಾಗಿ ಮೇ 18 ಮತ್ತು 19 ರಂದು (ಶನಿವಾರ ಮತ್ತು ಭಾನುವಾರ) ಎರಡು ದಿನಗಳ ಕಾರ್ಯಾಗಾರವನ್ನು ದಾವಣಗೆರೆ ಜಿಲ್ಲೆ, ಹರಿಹರದಲ್ಲಿರುವ ಪ್ರೊ. ಬಿ.ಕೃ?ಣಪ್ಪ ಟ್ರಸ್ಟ್‌ನ ಭವನದಲ್ಲಿ ಏರ್ಪಡಿಸಿದ್ದು, ಈ ಕಾರ್ಯಗಾರಕ್ಕೆ ಕೋಲಾರದಿಂದ ಕೆ.ವಿ.ಜಗನ್ನಾಥ್, ಎನ್.ಮಯೂನ್, ಆದರ್ಶ್, ಅಭಿಶ್ರೀ ಆಯ್ಕೆಯಾಗಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಸಮಿತಿಯ ಜಿಲ್ಲಾಧ್ಯಕ್ಷ ಜಿ.ಶ್ರೀನಿವಾಸ್, ಸಂಘಟನೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಈ ಕಾರ್ಯಗಾರ ಮಹತ್ವ ನಿರ್ಧಾರವನ್ನು ಕೈಗೊಳ್ಳಲಿದ್ದು, ವೈಜ್ಞಾನಿಕ ಚಿಂತನೆಯತ್ತ ಮಹತ್ವದ ದಾಪುಗಾಲು ಇಡಲಿದೆ ಎಂದಿದ್ದಾರೆ. ಈ ಕಾರ್ಯಾಗಾರದಲ್ಲಿ ಭಾಗವಹಿಸುವ ವಿಜ್ಞಾನ ಚಿಂತಕರಿಗೆ ಅಚ್ಚುಕಟ್ಟಾದ ಊಟ ಹಾಗೂ ವಸತಿ ವ್ಯವಸ್ಥೆಯನ್ನು ಮಾಡಲಾಗಿದೆ. ಕಾರ್ಯಾಗಾರದ ನಂತರದಲ್ಲಿ ಕೋಲಾರ ತಾಲೂಕು ಸರಸ್ವತ್ವ ಆಂದೋಲನ ಸೇರಿದಂತೆ ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಎಲ್ಲಾ ತಾಲೂಕುಗಳ ಸಮಿತಿಗಳ ಪುನರ್ ರಚನೆ ಮಾಡುವ ಮೂಲಕ ಬಲಿ?ಗೊಳಿಸುವುದೇ ಅಲ್ಲದೆ, ವೈಜ್ಞಾನಿಕ ಮನೋಭಾವದತ್ತ ಸಮಾಜದ ಎಲ್ಲ ವರ್ಗದ ಜನರನ್ನು ಕುಂಡೊಯ್ಯಲು ಚಿಂತನೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ.

## ಪ್ರಿಂಟರ್ ಕಳ್ಳತನ

**ತಿಪಟೂರು:** ತಾಲ್ಲೂಕು ಆಡಳಿತ ಸೌಧದ ಸರ್ವೆ ವಿಭಾಗದಲ್ಲಿ ಮುಖಕ್ಕೆ ಮಾಸ್ಕ ಧರಿಸಿ ಬೆಳಗ್ಗೆ ಜನರು ಓಡಾಟ ಮಾಡುವ ಸಂಧರ್ಭದಲ್ಲಿ ಕಂಪ್ಯೂಟರ್‌ನ ಎರಡು ಪ್ರಿಂಟರ್‌ಗಳನ್ನು ಕಳ್ಳತನ ಮಾಡಲಾಗಿದೆ. ಈ ಪ್ರಕರಣವು ನಗರ ಪೋಲೀಸ್ ಠಾಣೆಯಲ್ಲಿ ದಾಖಲಾಗಿದೆ.

## ಕಂಪ್ಯೂಟರ್ ಸೈನ್ ಉಪನ್ಯಾಸಕರ ಹುದ್ದೆಗೆ ಅರ್ಜಿ

**ಹುಳಿಯಾರು:** ಸರ್ಕಾರಿ ಪದವಿಪೂರ್ವ ಕಾಲೇಜು, ಹುಳಿಯಾರು- ಕೆಂಕೆರೆ, ಈ ಕಾಲೇಜಿನಲ್ಲಿ ಕಂಪ್ಯೂಟರ್ ಸೈನ್ಸ್ ವಿಭಾಗ ಆರಂಭವಾಗಿದ್ದು ಕಂಪ್ಯೂಟರ್ ಸೈನ್ಸ್ ವಿಷಯದ ಅತಿಥಿ ಉಪನ್ಯಾಸಕರ ಅವಶ್ಯಕತೆ ಇದೆ. ಪ್ರಯುಕ್ತ ಅರ್ಹ ಅಭ್ಯರ್ಥಿಗಳು ಪ್ರಾಂಶುಪಾಲರನ್ನು ಸಂಪರ್ಕಿಸಲು ಕೋರಿದೆ. ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9513311889 ಕರೆ ಮಾಡಿ ಪಡೆಯಬಹುದಾಗಿದೆ.

## ಕೃಷಿ ಹೊಂಡಗಳಿಗೆ ಸುರಕ್ಷಿತ ಬೇಲಿ ನಿರ್ಮಿಸಿ: ಹಾನಿ ತಪ್ಪಿಸಿ

**ಬೆಂಗಳೂರು ಗ್ರಾಮಾಂತರ:** ಕೃಷಿ ಇಲಾಖೆಯಡಿ 2014-15 ರಿಂದ ರೈತರು ತಮ್ಮ ಜಮೀನುಗಳಲ್ಲಿ ವೈಯಕ್ತಿಕವಾಗಿ ಕೃಷಿ ಹೊಂಡಗಳನ್ನು ನಿರ್ಮಿಸಲು ಅನುಮತಿಸಲಾಗಿದೆ. ಪ್ರಮುಖವಾಗಿ ಮಳೆಯಾಶ್ರಿತ ಪ್ರದೇಶಗಳಲ್ಲಿ ಬಿದ್ದಂತಹ ಮಳೆನೀರನ್ನು ಸಂಗ್ರಹಿಸಿಟ್ಟುಕೊಂಡು, ಮಳೆಬಾರದ ವೇಳೆಯಲ್ಲಿ ಸಂಗ್ರಹಿಸಿದ ನೀರನ್ನು ಬಳಸಿ ಬೆಳೆದಂತಹ ಬೆಳೆಯನ್ನು ಸಂರಕ್ಷಿಸುವುದೇ ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಆದ್ದರಿಂದ ಹಿಡಿದಿಟ್ಟುಕೊಂಡಿರುವ ನೀರನ್ನು ಉಳಿಸಿಕೊಳ್ಳುವ ಸಲುವಾಗಿ ಕಪ್ಪು ಬಣ್ಣದ ಟಾರ್ಪಾಲಿನ್ ಹೊದಿಕೆ ಬಳಸಲು ಸೂಚಿಸಲಾಗಿರುತ್ತದೆ. ರೈತರು ಸಹ ಹೆಚ್ಚಿನ ಆಸಕ್ತಿಯಿಂದ ಈ ಯೋಜನೆ ಅನುಷ್ಠಾನ ಮಾಡಲು ಸಹಕರಿಸಿದ್ದು ಇದರ ಪ್ರಯೋಜನೆ ಪಡೆದಿರುತ್ತೀರಿ. ಆದರೆ ದುರದೃಷ್ಟವಶಾತ್ ಟಾರ್ಪಾಲಿನ್ ಮೇಲೆ ನುಣುಪಾಗಿರುವುದರಿಂದ, ಕೃಷಿ ಹೊಂಡದಲ್ಲಿರುವ ನೀರಿನಲ್ಲಿ ಇಳಿಯುವಾಗ ಆಯತಪ್ಪಿ ಜಾರಿ ಬಿದ್ದು ಹಲವು ಜೀವಗಳು ಹಾನಿಯಾಗಿರುವುದು ವರದಿಯಾಗಿರುತ್ತದೆ. ರೈತರಿಗೆ ಮಳೆ ನೀರಿನ ಕೊಯ್ಲಿನ ತಂತ್ರಜ್ಞಾನವಾಗಿ ಕೃಷಿ ಹೊಂಡಕ್ಕೆ ಅನುಮತಿಸಲಾಗಿದೆ. ಆದುದರಿಂದ ರೈತಭಾಂದವರಲ್ಲಿ ಕೃಷಿ ಇಲಾಖೆವತಿಯಿಂದ ಮಾಡುವ ವಿನಂತಿಯೆಂದರೆ ಈಗಾಗಲೇ ನಿರ್ಮಿಸಿಕೊಂಡಿರುವ ಕೃಷಿ ಹೊಂಡಗಳಿಗೆ ತಪ್ಪದೇ ಕಡ್ಡಾಯವಾಗಿ ತಂತಿಬೇಲಿ/ ಸುರಕ್ಷಿತಬೇಲಿಯನ್ನು ನಿರ್ಮಿಸುವುದು, ಇದರಿಂದ ಏನೂ ಅರಿಯದ ಮೂಕ/ಮುಗ್ಧ ಜೀವಿಗಳನ್ನು ಅಪಾಯದಿಂದ ಪಾರುಮಾಡಬಹುದು. ದಯವಿಟ್ಟು ಎಲ್ಲಾ ರೈತರೂ ಸಹಕರಿಸಬೇಕೆಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕೃಷಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

## ಮೇ 22 ರಂದು ಸಾರ್ವಜನಿಕರ ಕುಂದು ಕೊರತೆ ಸಭೆ

**ಮಂಡ್ಯ:** ಮಂಡ್ಯ ಲೋಕಾಯುಕ್ತ ವಿಭಾಗದ ಅಧಿಕಾರಿಯವರುಗಳು ಮೇ 22 ರಂದು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ತಾಲ್ಲೂಕು ಕಚೇರಿ ಆವರಣದಲ್ಲಿ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಸಾರ್ವಜನಿಕರ ಕುಂದು ಕೊರತೆ ಸಭೆಯನ್ನು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕಾರ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಮಂಡ್ಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಇನ್ಸ್‌ಪೆಕ್ಟರ್‌ಗಳಾದ ಬಿ.ಪಿ.ಬ್ಯಾಟರಾಯನಗೌಡ, ಆರ್. ಎಂ. ಮೋಹನ್ ರೆಡ್ಡಿ, ಡಿವೈಎಸ್‌ಪಿ ಹೆಚ್.ಟಿ.ಸುನಿಲ್ ಕುಮಾರ್ ಅವರು ಪಾಲ್ಗೊಳ್ಳಲಿದ್ದಾರೆ. ಸರ್ಕಾರಿ ಮತ್ತು ಅರೆ ಸರ್ಕಾರಿ ಕಚೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳು ಸರ್ಕಾರಿ ಕೆಲಸ ಮಾಡಿಕೊಡಲು ಅನಗತ್ಯ ವಿಳಂಬ ಮಾಡಿದ ಬಗ್ಗೆ ಹಾಗೂ ಭ್ರಷ್ಟಾಚಾರದ ಬಗ್ಗೆ ನಾಗಮಂಗಲ ತಾಲ್ಲೂಕಿನ ಸಾರ್ವಜನಿಕರು ಲೋಕಾಯುಕ್ತ ಅಧಿಕಾರಿಗಳನ್ನು ಖುದ್ದಾಗಿ ಭೇಟಿ ಮಾಡಿ ತಮ್ಮ ದೂರು/ಅಹವಾಲುಗಳನ್ನು ಸಲ್ಲಿಸಬಹುದು ಎಂದು ಮಂಡ್ಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬರ ನಿರ್ವಹಣೆಯಲ್ಲಿ ರಾಜ್ಯ ಸರ್ಕಾರ ವಿಫಲ



**ಚಾಮರಾಜಗನಗರ:** ಬರ ನಿರ್ವಹಣೆಯಲ್ಲಿ ರಾಜ್ಯ ಸರ್ಕಾರ ವಿಫಲವಾಗಿದ್ದು, 20 ದಿನಗಳೊಳಗೆ ಎಲ್ಲ ರೈತರಿಗೆ ಬರ ಪರಿಹಾರ ವಿತರಿಸದಿದ್ದರೆ ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರುಶಾಂತಕುಮಾರ್ ಎಚ್ಚರಿಸಿದರು.

ನಗರದ ಮಹಾಮನೆ ಸಭಾಂಗಣದಲ್ಲಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ನಡೆದ ಜಿಲ್ಲೆಯ ರೈತರ ಸಭೆಯಲ್ಲಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯ ಸರ್ಕಾರವೇ ಕಳೆದ 9 ತಿಂಗಳ ಹಿಂದೆ 223 ತಾಲೂಕುಗಳಲ್ಲಿ ಬರಗಾಲ ಘೋಷಿಸಿತು. ಬರಗಾಲದ ನಿಯಮದ ಪ್ರಕಾರ ಘೋಷಣೆಯಾದ ಒಂದೇ ತಿಂಗಳಲ್ಲೇ ಬರಪರಿಹಾರ ವಿತರಣೆಗೆ ಕಾನೂನಿನಲ್ಲಿ ಅವಕಾಶ ಇದೆ. ಸರ್ಕಾರ 9 ತಿಂಗಳ ನಂತರ ರೈತ ಖಾತೆಗೆ ಬರ ಪರಿಹಾರ ಜಮಾ ಮಾಡುವ ಸರ್ಕಾರವೇ ಇಬ್ಬಾಗಯ ನೀತಿ ಅನುಸರಿಸುತ್ತಿದೆ ಎಂದು ದೂರಿದರು.

ಒಂದು ಹೆಕ್ಟೇರ್ ನೀರಾವರಿ ಜಮೀನಿಗೆ 13.500 ರೂ. ಒಣಭೂಮಿ ಆದರೆ ಒಂದು ಹೆಕ್ಟೇರ್‌ಗೆ 23.500 ಬರಪರಿಹಾರ ನೀಡಬೇಕು. ಅದನ್ನು ಬಿಟ್ಟು ರೈತರ ಖಾತೆಗೆ ಭೀಕ್ಷೆಯ ರೂಪದಲ್ಲಿ 1000, 500, 300, ರೂ.ಗಳನ್ನು ಜಮಾ ಮಾಡಿ ಸರ್ಕಾರ ದೊಡ್ಡದೊಡ್ಡ ಕಂಪನಿ ಲೂಟಿ ಮಾಡ ವಾಮಮಾರ್ಗ ಅನುಸರಿಸುತ್ತಿದೆ. ರಾಜ್ಯದಲ್ಲಿ ಒಟ್ಟು 70ಲಕ್ಷಕ್ಕೂ ಹೆಚ್ಚು ರೈತರಿದ್ದು, ಕೇವಲ 27 ಲಕ್ಷ ರೈತರ ಖಾತೆಗೆ ಮಾತ್ರ ಭೀಕ್ಷೆ ರೂಪದಲ್ಲಿ ಬರಪರಿಹಾರ ವಿತರಣೆ ಮಾಡಿದೆ, ಸರ್ಕಾರಕ್ಕೆ ಜಾನುವಾರು ಗಳಿಗೆ ಮೇವು, ನೀರು ಕೊಡುಕೆ ಆಗುತ್ತಿಲ್ಲ ಎಂದರು.

ಬೆಳೆಹಾನಿ, ರೈತರ ಸಂಪೂರ್ಣ ಸಾಲ ಮನ್ನಾ ಮಾಡಿ : ಚಾಮರಾಜನಗರ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಕಳೆದ 10 ಅಲ್ಲಲ್ಲಿ ಬಿರುಗಾಳಿ ಮಳೆಗೆ ರೈತರು ಸಾಲ ಮಾಡಿ ಬೆಳೆದ ಫಸಲು ಹಾನಿಯಾಗಿರುವುದರಿಂದ ಅಂತಹ ರೈತರ ಸಂಪೂರ್ಣ ಸಾಲ ಮಾಡಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಕಳ್ಳಿ ಮಹದೇವಸ್ವಾಮಿ ಮಾತನಾಡಿ, 2023 ರಲ್ಲಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದ ಕಬ್ಬಿನ ಹೆಚ್ಚುವರಿ ದರ ಪ್ರತಿ ಟನ್ ಗೆ 150 ರೂ ಮಾದೇಶ್ವರ ಸಕ್ಕರೆ ಕಾರ್ಖಾನೆಯಿಂದ ರೈತರಿಗೆ ಪಾವತಿ ಆಗಿಲ್ಲ .ಕಬ್ಬಿನ ಉಪ ಉತ್ಪನ್ನಗಳ ಲಾಭ ಹಂಚಿಕೆಯಾಗಿಲ್ಲ. ಕೂಡಲೇ ಹಣ ಕೊಡಿಸಲು ಸೂಕ್ತ ಹೋರಾಟ ಹಮ್ಮಿಕೊಳ್ಳಬೇಕು ಎಂದರು.

# ವರ್ಷದಲ್ಲಿ ₹700 ಕೋಟಿ ಬಳಕೆ

## ಹಣವೆಲ್ಲಾ ಬಿಜೆಪಿ ಸರ್ಕಾರದಲ್ಲಿ ಮಂಜೂರಾಗಿರುವುದು, ಕಾಂಗ್ರೆಸ್ ಸರ್ಕಾರ 1.5 ಕೋಟಿ ನೀಡಿದೆ: ಶಾಸಕ ಶ್ರೀವತ್ಸ

**ಮೈಸೂರು:** ಕಳೆದ ಒಂದು ವರ್ಷದ ಅವಧಿಯಲ್ಲಿ ಕೆ.ಆರ್ ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸಗಳಿಗಾಗಿ 700 ಕೋಟಿರೂಗೂ ಹೆಚ್ಚು ಅನುದಾನ ಖರ್ಚು ಮಾಡಲಾಗಿದೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ತಿಳಿಸಿದರು.

ಶಾಸಕರಾಗಿ ಒಂದು ವರ್ಷ ಪೂರೈಸಿದ ಹಿನ್ನಲೆಯಲ್ಲಿ ಮಂಗಳವಾರ ನಗರದ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಳೆದು ಒಂದು ವರ್ಷದಲ್ಲಿ ಕ್ಷೇತ್ರದ ಅಭಿವೃದ್ಧಿ ಕೆಲಸಗಳಿಗೆ ಖರ್ಚು ಮಾಡಿರುವ ಹಣವೆಲ್ಲಾ ಈ ಹಿಂದಿನ ಬಿಜೆಪಿ ಸರ್ಕಾರದಲ್ಲಿ ಮಂಜೂರಾಗಿರುವುದು. ಈಗಿನ ಸರ್ಕಾರ ಕೇವಲ ಒಂದೂವರೆ ಕೋಟಿ ರೂ ಮಾತ್ರ ನೀಡಿದೆ. ಇನ್ನೂ ಶಾಸಕರ ನಿಧಿಯನ್ನೇ ಬಿಡುಗಡೆ ಮಾಡಿಲ್ಲ ಎಂದು ಹೇಳಿದರು.

ಕ್ಷೇತ್ರದ ಸಾರ್ವಜನಿಕರೊಂದಿಗೆ ಸತತ ಸಂಪರ್ಕದಲ್ಲಿ ಇರಬೇಕೆಂಬ ಹಿನ್ನೆಲೆಯಲ್ಲಿ ಮನೆಮನೆಗಳಿಗೆ ಪಾದಯಾತ್ರೆ ಮೂಲಕ ತೆರಳಿ ನನ್ನ ದೂರವಾಣಿ ಸಂಖ್ಯೆ ಹಾಗೂ ಆಪ್ತ ಸಹಾಯಕರ ದೂರವಾಣಿ ಸಂಖ್ಯೆ ಮತ್ತು ಕಚೇರಿ ವಿಳಾಸವುಳ್ಳ ಸುಮಾರು 60 ಸಾವಿರಕ್ಕೂ ಹೆಚ್ಚು ಕಾರ್ಡುಗಳನ್ನು ವಿತರಿಸಿ, ಆ ಮೂಲಕ ಹಲವಾರು ಸಮಸ್ಯೆಗಳನ್ನು ಆಲಿಸಿ ಅಧಿಕಾರಿಗಳೊಂದಿಗೆ ಸೇರಿ ಪರಿಹರಿಸಲಾಗಿದೆ ಎಂದು ಹೇಳಿದರು.

ಕೃಷ್ಣರಾಜ ಕ್ಷೇತ್ರದ ವ್ಯಾಪ್ತಿಯ ಲಲಿತಾದ್ರಿಪುರದಲ್ಲಿ 940 ಆಶ್ರಯ ಗುಂಪು ಯೋಜನೆಯಡಿ ಕ್ಷೇತ್ರದ 940 ಮಂದಿಗೆ ಹಾಗೂ ವರುಣ ಕ್ಷೇತ್ರದ 500 ಮಂದಿ ಫಲಾನುಭವಿಗಳಿಗೆ ಈ ಯೋಜನೆ ಅಡಿ ಮನೆಗಳನ್ನು ನೀಡಲು ಕ್ರಮ ಕೈಗೊಳ್ಳಲಾಗಿದೆ. ಲಲಿತಾದ್ರಿಪುರ ಕೆಆರ್ ಕ್ಷೇತ್ರದಲ್ಲಿದ್ದರೂ ವರುಣ ಕ್ಷೇತ್ರದ ವ್ಯಾಪ್ತಿಯಲ್ಲಿಯೂ ಬರುತ್ತದೆ. ಹಾಗಾಗಿ ಇಲ್ಲಿ ಎರಡು ಕ್ಷೇತ್ರದ ಫಲಾನುಭವಿಗಳಿಗೆ ಮನೆಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗಿದೆ. ಅದಕ್ಕಾಗಿ 13 ಎಕರೆ ಜಾಗವನ್ನು ಪಡೆದು 202 ಕೋಟಿ ರೂ. ವೆಚ್ಚದಲ್ಲಿ ಆಶ್ರಯ ಗುಂಪು ಮನೆ ಯೋಜನೆಯನ್ನು ರೂಪಿಸಲಾಗಿದೆ. ಈಗಾಗಲೇ ಗುದ್ದಲಿ ಪೂಜೆ ನೆರವೇರಿಸಲಾಗಿದೆ. ಕೆ.ಆರ್. ಕ್ಷೇತ್ರದಲ್ಲಿ ಈಗಾಗಲೇ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದ್ದು, ಅವರೆಲ್ಲಾ ತಲಾ 75 ಸಾವಿರರೂಗಳನ್ನು ತಮ್ಮ ವಂತಿಗೆಯಾಗಿ ಸಂಬಂಧಿಸಿದ ಪ್ರಾಧಿಕಾರಕ್ಕೆ ಪಾವತಿಸಿದ್ದಾರೆ ಎಂದು ತಿಳಿಸಿದರು.



**ಕೇಂದ್ರ ಸರ್ಕಾರದ ಯೋಜನೆಗಳನ್ನು ಕ್ಷೇತ್ರಕ್ಕೆ ತರುವಲ್ಲಿ ಶ್ರಮಿಸುತ್ತಿದ್ದೇನೆ. ಕ್ಷೇತ್ರದಲ್ಲಿ ಗೋಪಾಲಕರು ಹೆಚ್ಚಿರುವುದರಿಂದ ಕ್ಷೇತ್ರದ ಯಾವುದಾದರೊಂದು ವಾರ್ಡ್‌ನಲ್ಲಿ ಗೋಬರ್ ಗ್ಯಾಸ್ ಯೋಜನೆ ಜಾರಿಗೊಳಿಸಲಾಗುವುದು. ಜತೆಗೆ ಸೌರಶಕ್ತಿ ಯೋಜನೆ ಜಾರಿಗೂ ಕ್ರಮವಹಿಸಲಾಗುವುದು.**

**-ಟಿ.ಎಸ್.ಶ್ರೀವತ್ಸ ಶಾಸಕ**

ಕೆ.ಆರ್. ಕ್ಷೇತ್ರದ ಪ್ರಮುಖ ಸಮಸ್ಯೆಗಳಲ್ಲಿ ಒಂದಾದ ಸುಯೇಜ್ ಫಾರಂ ಎಕ್ಸೆಲ್ ಪ್ಲಾಂಟ್ ನಲ್ಲಿ ಕಸ ವಿಲೇವಾರಿಗೆ ಕ್ರಮ ಕೈಗೊಳ್ಳಲಾಗಿದ್ದು, ಇನ್ನೆರಡು ವರ್ಷದಲ್ಲಿ 7 ಲಕ್ಷ ಟನ್ ಕಸ ತೆರವುಗೊಳಿಸಲಾಗುವುದು. ಇದಕ್ಕಾಗಿ 60 ಕೋಟಿ ರೂಗಳ ಟೆಂಡರ್ ನೀಡಲಾಗಿದೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಕೆಆರ್ ಕ್ಷೇತ್ರದಲ್ಲಿ ರೌಡಿಗಳ ಅಟ್ಟಹಾಸ ಹೆಚ್ಚಾಗಿದೆ, ಕೊಲೆಗಳು ನಡೆಯುತ್ತಿವೆ. ಬೀದಿ ಬದಿ ವ್ಯಾಪಾರಿಗಳಿಂದಲೂ ರೋಲ್ ಕಾಲ್ ವಸೂಲಿ ಮಾಡುತ್ತಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ನಗರ ಪೊಲೀಸ್ ಕಮಿಷನರ್ ರಮೇಶ್ ಅವರೊಂದಿಗೆ ಮಾತುಕತೆ ನಡೆಸಿದ್ದು, ಮುಂದಿನ ದಿನಗಳಲ್ಲಿ ಇಂತಹ ವರ್ತನೆಗಳು ನಡೆಯದಂತೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಗಿದೆ.

ಒಂದು ವೇಳೆ ರೌಡಿ ಚಟುವಟಿಕೆಗಳು ಮುಂದುವರಿದಿದ್ದೇ ಆದಲ್ಲಿ ಆಯಾ ಠಾಣೆಯ ಇನ್ಸ್‌ಪೆಕ್ಟರ್ ಗಳನ್ನು ಹೊಣೆಗಾರರನ್ನಾಗಿ ಮಾಡಬೇಕೆಂದು ಆಯುಕ್ತರಲ್ಲಿ ಮನವಿ ಮಾಡಿದ್ದೇನೆ ಎಂದು ತಿಳಿಸಿದರು.

ಮಹಾನಗರ ಪಾಲಿಕೆ ಅಧಿಕಾರಿಗಳು ನನ್ನ ವೇಗಕ್ಕೆ ಸ್ಪಂದಿಸುತ್ತಿಲ್ಲ. ಹಾಗಾಗಿ ಸೂಕ್ತವಾಗಿ ಕೆಲಸ ಮಾಡದವರನ್ನು ಬೇರೆ ಸ್ಥಳಕ್ಕೆ ಸ್ಥಳಾಂತರಿಸುವಂತೆ ಪಾಲಿಕೆ ಆಯುಕ್ತರಿಗೆ ಸೂಚಿಸಿದ್ದೇನೆ ಎಂದು ಹೇಳಿದರು.

ಅನುದಾನ ಬಿಡುಗಡೆಯಲ್ಲಿ ತಾರತಮ್ಯ: ಕಾಂಗ್ರೆಸ್ ಸರ್ಕಾರದಲ್ಲಿ ತಮ್ಮ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಮಾಡುವಲ್ಲಿ ತಾರತಮ್ಯ ಮಾಡಲಾಗುತ್ತಿದೆ. ಕೆಆರ್ ಕ್ಷೇತ್ರಕ್ಕೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಿಡುಗಡೆಯಾಗಿದ್ದ 45 ಕೋಟಿ ರೂ ಹಣವನ್ನು ಚಾಮರಾಜ ಹಾಗೂ ನರಸಿಂಹರಾಜ ಕ್ಷೇತ್ರಕ್ಕೆ ನಗರಪಾಲಿಕೆ ಆಯುಕ್ತರು ಕಾನೂನು ಬಾಹಿರವಾಗಿ ವರ್ಗಾವಣೆ ಮಾಡಿದ್ದು, ಈ ಬಗ್ಗೆ ವಿಧಾನಸಭೆಯಲ್ಲಿ ಪ್ರಸ್ತಾಪಿಸಿ ಸ್ಪೀಕರ್ ಅವರ ಗಮನ ಸೆಳೆದೆ. ಕೂಡಲೇ ಒಂದು ಕ್ಷೇತ್ರಕ್ಕೆ ಮೀಸಲಾದ ಹಣವನ್ನು ಬೇರೊಂದು ಕ್ಷೇತ್ರಕ್ಕೆ ವರ್ಗಾಯಿಸಬಾರದೆಂದು ಅವರು ಸೂಚಿಸಿದರು. ಹಾಗಾಗಿ ಈ ಹಣ ಮುಂದಿನ ತಿಂಗಳಲ್ಲಿ ತಮ್ಮ ಕ್ಷೇತ್ರಕ್ಕೆ ವಾಪಸ್ಸಾಗಲಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಮೇಯರುಗಳಾದ ಶಿವಕುಮಾರ್, ಸುನಂದ ಪಾಲನೇತ್ರ, ಬಿಜೆಪಿ ನಗರ ಪ್ರಧಾನ ಕಾರ್ಯದರ್ಶಿಗಳಾದ ಕೇಬಲ್ ಮಹೇಶ್, ಎಚ್.ಜಿ.ಗಿರಿಧರ್, ಮೋಹನ್, ಮುಖಂಡರುಗಳಾದ ಜೋಗಿ ಮಂಜು, ಕೆ.ಆರ್.ಕ್ಷೇತ್ರದ ಬಿಜೆಪಿ ಅಧ್ಯಕ್ಷ ಗೋಪಾಲ್ ರಾಜೇ ಅರಸ್ ಮತ್ತಿತರರು ಉಪಸ್ಥಿತರಿದ್ದರು.



**ಕೋಲಾರದಇಫ್ಕೋ ಟೋಕಿಯೋ ನಿರ್ದೇಶಕರಾಗಿ 7ನೇ ಬಾರಿ ಆಯ್ಕೆಯಾಗಿರುವ ಮಾಜಿ ಸಚಿವ ಕೆ.ಶ್ರೀನಿವಾಸಗೌಡರನ್ನು ಅವರ ನಿವಾಸದಲ್ಲಿ ಕೋಲಾರ ಜಿಲ್ಲಾ ಹಿಂದುಳಿದ ವರ್ಗಗಳ ವತಿಯಿಂದ ಅಭಿನಂದಿಸಲಾಯಿತು. ರವೀಂದ್ರಕುಮಾರ್, ಬಿ.ಎಲ್. ಶ್ರೀನಿವಾಸ್, ಶ್ರೀಧರ್, ಅಶ್ವಥ್, ನಾರಾಯಣಗೌಡ, ರಾಮಮೂರ್ತಿನಾಯ್ಡು, ರಾಜಣ್ಣ, ಫಲ್ಗುಣ ಉಪಸ್ಥಿತರಿದದ್ದರು.**

## ವಿಶೇಷಚೇತನರಿಂದ ಅರ್ಜಿ

**ಬೆಂಗಳೂರು ಗ್ರಾಮಾಂತರ:** ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರ, ತಿಲಕ್ ನಗರ ಮೈಸೂರು ಇಲ್ಲಿ 02 ವರ್ಷಗಳ ವಿಶೇಷ ಡಿ.ಇಡಿ(ಆ.ಇಆ) ತರಬೇತಿ ಕಾರ್ಯಕ್ರಮಕ್ಕೆ

ಅರ್ಹ ವಿಶೇಷಚೇತನರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಈ ವಿಶೇಷ ಡಿ.ಇಡಿ(ಆ.ಇಆ) ಕಾರ್ಯಕ್ರಮಗಳು ಸಾಮಾನ್ಯ ಡಿ.ಇಡಿ (ಆ.ಇಆ)ಗೆ ಸಮಾನಾಂತರವಾಗಿವೆ. ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ 50% (ಎಸ್.ಸಿ ಎಸ್.ಟಿ ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಶೇಕಡಾ 45%) ಅಂಕಗಳೊಂದಿಗೆ ತೇರ್ಗಡೆಯಾದ ವಿದ್ಯಾರ್ಥಿಗಳು ಜೂನ್10ರ ಒಳಗೆ ಅರ್ಜಿ ಸಲ್ಲಿಸಬಹುದು. ಈ ತರಬೇತಿಗೆ ಸಂಬಂಧಿಸಿದ ವಿವರವಾದ ಮಾಹಿತಿ ಹಾಗೂ ಅರ್ಜಿ ನಮೂನೆ ಮೈಸೂರು ಜಿಲ್ಲಾ ವೆಬ್ಸೈಟ್‌ನಲ್ಲಿ ಲಭ್ಯವಿರುತ್ತದೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿರುವ ಆಸಕ್ತ ಅರ್ಹ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಬಹುದಾಗಿದೆ.



**ಹುಳಿಯಾರು ಬೆಸ್ಕಾಂ ಶಾಖೆಯಲ್ಲಿ ಮಹರ್ಷಿ ಭಗೀರಥ ಜಯಂತಿಯನ್ನು ಆಚರಣೆ ಮಾಡಲಾಯಿತು. ಶಾಖಾಧಿಕಾರಿಗಳಾದ ರಘುರಾಮ್ ಮತ್ತು ತಿಮ್ಮೇಗೌಡ, ಸಿಬ್ಬಂದಿಗಳಾದ ಮಲ್ಲಿಕಾರ್ಜುನ್, ವಿಶ್ವನಾಥ್, ನವೀನ್‌ಕುಮಾರ್, ಗಿರೀಶ್, ದಯಾನಂದ್ ಹಾಗೂ ಗುತ್ತಿಗೆದಾರರು ಪಾಲ್ಗೊಂಡಿದ್ದರು.**

# ರಾಜೀವ್‌ಗಾಂಧಿ ಜ್ಯೋತಿ ಯಾತ್ರೆಗೆ ಬೀಳ್ಕೊಡುಗೆ

**ಚಾಮರಾಜನಗರ:** ಬೆಂಗಳೂರಿನಿಂದ ರಾಜೀವ್‌ಗಾಂಧಿ ಅವರ ಹತ್ಯೆಯಾದ ಸ್ಥಳ ಶ್ರೀ ಪೆರಂಬದೂರಿಗೆ ತೆರಳುವ 33ನೇ ವರ್ಷದ ರಾಜೀವ್‌ಗಾಂಧಿ ಜ್ಯೋತಿ ಯಾತ್ರೆಯು ಚಾ.ನಗರಕ್ಕೆ ಆಗಮಿಸುತ್ತಿದ್ದಂತೆ ಕ್ಷೇತ್ರದ ಶಾಸಕ ಸಿ. ಪುಟ್ಟರಂಗಶೆಟ್ಟಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ. ಮರಿಸ್ವಾಮಿ ರಾಜೀವ್‌ಜ್ಯೋತಿಯನ್ನು ಸ್ವೀಕರಿಸುವ ಮೂಲಕ ಸ್ವಾಗತ ಕೋರಿದರು.

ಬೆಂಗಳೂರಿನಿಂದ ನಿನ್ನೆ ಕೆಪಿಸಿಸಿ ಕಚೇರಿಯಿಂದ ಹೊರಟ ರಾಜೀವ್‌ಗಾಂಧಿ ಯಾತ್ರೆಯನ್ನು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹಾಗೂ ಮುಖಂಡರು ಚಾಲನೆ ನೀಡಿದ್ದರು. ಗುರುವಾರ ಚಾ.ನಗರಕ್ಕೆ ಆಗಮಿಸುತ್ತಿದ್ದಂತೆ ಶ್ರೀ ಚಾಮರಾಜೇಶ್ವರ ಉದ್ಯಾನವನ ಮುಂಭಾಗ ರಾಜೀವ್ ಜ್ಯೋತಿಯನ್ನು ಸ್ವೀಕರಿಸಿ, ಮೆರವಣಿಗೆಯ ಮೂಲಕ ಡಿವಿಯೇಷನ್ ರಸ್ತೆಯ ಮಾರ್ಗ ವಾಗಿ ಸತ್ಯಮಂಗಲಗೆ ಬೀಳ್ಕೊಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಸಿ. ಪುಟ್ಟರಂಗಶೆಟ್ಟಿ, ನಮ್ಮ ನಾಯಕರಾದ ಮಾಜಿ ಪ್ರಧಾನಿ ದಿ. ರಾಜೀವ್‌ಗಾಂಧಿ ಅವರ 33ನೇ ವರ್ಷದ ಜ್ಯೋತಿ ಯಾತ್ರೆ ಇಂದು ಚಾ.ನಗರಕ್ಕೆ ಆಗಮಿಸುತ್ತಿದ್ದು, ಪ್ರತಿ ವರ್ಷವು ಸಹ ಬೆಂಗಳೂರು ಮಾರ್ಗವಾಗಿ ಚಾ.ನಗರಕ್ಕೆ ಜ್ಯೋತಿ ಯಾತ್ರೆ ಆಗಮಿಸುತ್ತಿದೆ. ಈ ಸಂದರ್ಭಲ್ಲಿ ರಾಜೀವ್‌ಗಾಂಧಿ ಅವರ ಜ್ಯೋತಿ ಯಾತ್ರೆಯನ್ನು ಸ್ವೀಕರಿಸಿ, ಸ್ವಾಗತ ಕೋರುವ ಜೊತೆಗೆ ಗೌರವಯುತವಾಗಿ ಜ್ಯೋತಿಯನ್ನು ತಮಿಳುನಾಡಿಗೆ ಬೀಳ್ಕೊಡುವ ಕಾರ್ಯವನ್ನು ನಿರಂತರವಾಗಿ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಮಾಡಲಾಗುತ್ತಿದೆ ಎಂದರು.




ರಾಜೀವ್‌ಗಾಂಧಿ ಅವರು ಕೊಡುಗೆ ಬಹಳಷ್ಟಿದೆ. ಮಾಹಿತಿ ತಂತ್ರಜ್ಞಾನದ ಅಭಿವೃದ್ಧಿ ಹಾಗು ಯುವಕರಿಗೆ ಮತದಾನದ ಹಕ್ಕನ್ನು ನೀಡುವ ಮೂಲಕ ಯುವ ಜನತೆಯನ್ನು ರಾಜಕೀಯ ಕ್ಷೇತ್ರಕ್ಕೆ ಹೆಚ್ಚು ಸಕ್ರಿಯವಾಗುವಂತೆ ಮಾಡಿದರು. ಪಂಚಾಯತ್ ರಾಜ್ ವ್ಯವಸ್ಥೆಯನ್ನು ಬಲಗೊಳಿಸಿ, ಸ್ಥಳೀಯರ ಕೈಗೆ ಆಡಳಿತವನ್ನು ನೀಡಿದ ಕೀರ್ತಿ ರಾಜೀವ್‌ಗಾಂಧಿ ಅವರಿಗೆ ಸಲ್ಲುತ್ತದೆ. ಅವರು 33 ವರ್ಷಗಳ ಹಿಂದೆ ತಮಿಳುನಾಡಿನ ಶ್ರೀಪೆರಂಬದೂರಿನಲ್ಲಿ ಭಯೋತ್ಪಾದಕರ ಕೃತ್ಯಕ್ಕೆ ಬಲಿಯಾಗಿದ್ದು ದುರಂತ. ನೆಹರು ಕುಟುಂಬ ದೇಶಕ್ಕಾಗಿ ತಮ್ಮ ಪ್ರಾಣವನ್ನೇ ಸಮರ್ಪಣೆ ಮಾಡಿದೆ ಎಂದು ಪುಟ್ಟರಂಗಶೆಟ್ಟಿ ಸ್ಮರಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಆದ ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ ಮಾತನಾಡಿ, ರಾಜೀವ್‌ಗಾಂಧಿ ಅವರ ಜ್ಯೋತಿ ಯಾತ್ರೆಯನ್ನು ಸ್ವಾಗತಿಸುವುದೇ ಒಂದು ಪುಣ್ಯದ ಕೆಲಸವಾಗಿದೆ. ಕಳೆದ 33 ವರ್ಷಗಳಿಂದ ನಿರಂತರವಾಗಿ ರಾಜೀವ್‌ಗಾಂಧಿ ಜ್ಯೋತಿ ಯಾತ್ರೆಯು ಚಾ.ನಗರ ಮಾರ್ಗವಾಗಿ ಸಂಚರಿಸುತ್ತಿದ್ದು, ಮೇ 21 ರಂದು ಅವರು ಅವರ ಹತ್ಯೆಯಾದ ಸ್ಥಳದಲ್ಲಿ ಶಾಂತಿಯನ್ನು ಬೋದಿಸುವ ಜೊತೆಗೆ ರಾಜೀವ್‌ಗಾಂಧಿ ಅವರ ಸ್ಮರಣೆ ಮಾಡಲಾಗುತ್ತದೆ. ರಾಜೀವ್‌ಗಾಂಧಿ ಅವರು ನಮ್ಮೆಲ್ಲರಿಗೂ ಅದರ್ಶವಾಗಿದ್ದರು, ಬಹಳ ಚಿಕ್ಕ ವಯಸ್ಸಿನಲ್ಲಿಯೇ ದೊಡ್ಡ ಜವಾಬ್ದಾರಿಯನ್ನು ಸಮರ್ಪಕವಾಗಿ ನಿಭಾಯಿಸಿದ್ದರು ಎಂದರು.

# ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ

**ಚಾಮರಾಜನಗರ:** ಮಕ್ಕಳಲ್ಲಿ ಜನಪದ ಸಂಸ್ಕೃತಿಯನ್ನು ಕಥೆ, ನಾಟಕ, ಸಾಹಿತ್ಯದ ರೂಪದಲ್ಲಿ ತಿಳಿಸಿಕೊಟ್ಟರೆ. ಮಾನಸಿಕ ಬೆಳವಣಿಗೆ ಸಹಕಾರವಾಗುತ್ತದೆ. ಎಂದು ಜನಪದ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಡಾ.ಎಂ.ಮಹೇಶ್ ಚಿಕ್ಕಲ್ಲೂರು ತಿಳಿಸಿದರು. ನಗರದ ಭುವನೇಶ್ವರಿ ವೃತ್ತದಲ್ಲಿ ಇರುವ ಸಂತ ಜೋಸೆಫರ ಶಾಲೆಯ ಸಭಾಂಗಣದಲ್ಲಿ ಬುಧವಾರ ಆತ್ಮೀಯ ರಂಗ ಪ್ರಯೋಗಾಲಯ ಟ್ರಸ್ಟ್ ಆಯೋಜಿಸಿದ ಆಡು ಬಾ ಕಂದ ಬೇಸಿಗೆ ಶಿಬಿರ2024ರ ಯೋಜನೆಯನ್ನು ಸಂತ ಜೋಸೆಫರ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆ ಸಹಯೋಗದಲ್ಲಿ 35ದಿನಗಳಕಾಲ ನಡೆಸಿದ ಉಚಿತ ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳಿಗೆ ಜಾನಪದ ಗೀತೆ, ಭಕ್ತಿಗೀತೆ, ಚಿತ್ರಕಲೆ, ಅಭಿನಯ, ನಾಟಕಗಳನ್ನು ಕಲಿಸಿದರೆ ಮಕ್ಕಳಲ್ಲಿ ಬೌತ್ತಿಕ ಬೆಳವಣಿಗೆಗೆ ಮತ್ತು ಹಿರಿಯರನ್ನು ಗೌರವಿಸುವುದಕ್ಕೆ ಜೀವನದ ಮೌಲ್ಯಗಳನ್ನು ಅರ್ಥಯಿಸಿಕೊಳ್ಳುವುದಕ್ಕೆ ಸಹಕಾರಿಯಾಗುತ್ತದೆ ಎಂದು ಹೇಳಿದರು. ಪ್ರಪಂಚದಲ್ಲಿ ತಂತ್ರಜ್ಞಾನಗಳು ಹೆಚ್ಚಾಗುತ್ತಿದೆ. ಮಕ್ಕಳು ಮೊಬೈಲ್ ಜಗತ್ತಿನಲ್ಲಿ ತೇಲುತ್ತಿರುವ ಈ ಕಾಲಘಟ್ಟದಲ್ಲಿ ಮಕ್ಕಳಿಗೆ ವಾಸ್ತವ ಜಗತ್ತನ್ನು ಹಾಗೂ ಜೀವನ ಶೈಲಿಯನ್ನು ತಿಳಿಸಿಕೊಡಲು ಇಂತಹ ಬೇಸಿಗೆ ಶಿಬಿರಗಳು ತುಂಬ ಅವಶ್ಯಕವಾಗಿದೆ. ನಮ್ಮ ನಾಡಿನ ಸಂಸ್ಕೃತಿಯನ್ನು ಉಳಿಸಿಕೊಳ್ಳಲು ಇಂತಹ ರಂಗಸಂಸ್ಥೆಗಳು ಅತ್ಯವಶ್ಯಕವಾಗಿದೆ ಎಂದು ತಿಳಿಸಿದರು.

ನಿವೃತ್ತ ಸರ್ಕಾರಿ ನೌಕರರ ಹಾಗೂ ಸಮಾಜಸೇವಕರಾದ ಪಿ.ಮನೋರಾಜ್ ಮಾತನಾಡಿ ಮಕ್ಕಳೆ ನಿಜವಾದ ದೇವರು ಅವರ ಜೊತೆ ಕಾಲ ಕಳೆದರೆ ನಮ್ಮ ಆರೋಗ್ಯ ವೃದ್ದಿಸುತ್ತದೆ. ಮಕ್ಕಳಿಗೆ ಪಠ್ಯ ಚಟುವಟಿಕೆಯ ಜೊತೆ ಕಲೆಯು ಸೇರಿಕೊಂಡರೆ ಅವರ ಜೀವನಕ್ಕೆ ದಾರಿಯಾಗಲಿದೆ ಎಂದು ಹರ್ಷವ್ಯಕ್ತ ಪಡಿಸಿದರು. ಸಂತ ಜೋಸೆಫರ ಮಹಿಳಾ ಅಭಿವೃದ್ದಿ ಕೇಂದ್ರದ ಆಡಳಿತ ಅಧಿಕಾರಿ ಸಿಸ್ಟರ್ ಮರಿಯಾ ಜೋಸ್ ಮಾತನಾಡಿ ವಿದ್ಯಾರ್ಥಿಗಳಿಗೆ ಮನೆಗಳಲ್ಲಿ ಸಂಸ್ಕಾರಗಳನ್ನು ತಿಳಿಸಿಕೊಡುವ ಪಾಠಶಾಲೆಯಾಗಬೇಕು, ಸ್ವಾರ್ಥ ಪ್ರಪಂಚದಲ್ಲಿ ಯುವಕರುಗಳು ತಮ್ಮ ತಮ್ಮ ಬಗ್ಗೆ ಯೋಚಿಸುತ್ತಿರುವ ಈ ದಿನಗಳಲ್ಲಿ ಆತ್ಮೀಯ ರಂಗ ಪ್ರಯೋಗಾಲಯ ಟ್ರಸ್ಟ್ ಯುವಕರು ಮಕ್ಕಳಿಗಾಗಿ ಕಲೆಗಳನ್ನು ಪರಿಚಯಿಸುತ್ತಿರುವುದು ಶ್ಲಾಘನೀಯ ಎಂದರು.



# ಸಂಜೆ ಟಿಪ್ಸ್




## ಗ್ರೋಯಿಂಗ್ಟನ್ ವೆಂಚರ್ಸ್ ಇಂಡಿಯಾದ ಅತ್ಯುತ್ತಮ ಫಲಿತಾಂಶ

ಮುಂಬೈ ಮೂಲದ ಬಿಎಸ್ಇ ಲಿಸ್ಟೆಡ್ ಕಂಪನಿ ಗ್ರೋಯಿಂಗ್ಟನ್ ವೆಂಚರ್ಸ್ ಇಂಡಿಯಾ ಲಿಮಿಟೆಡ್ (ಬಿಎಸ್ಇ - 539222) ಸಿಎ ವಿಕ್ರಮ್ ಬಜಾಜ್ ಅವರಿಂದ ಮುನ್ನಡೆಯುತ್ತಿದ್ದು, ಮುಂಬರುವ ದಿನಗಳಲ್ಲಿ ದೃಢವಾದ ಬೆಳವಣಿಗೆಯ ಸೂಚನೆಯನ್ನು ನೀಡಿದೆ. ಡಿಸೆಂಬರ್ 2023 ಕ್ಕೆ ಕೊನೆಗೊಂಡ ಆರ್ಥಿಕ ವರ್ಷದ ಮೂರನೆಯ ತ್ರೈಮಾಸಿಕದಲ್ಲಿ ಕಂಪನಿಯು ಅತ್ಯುತ್ತಮ ಫಲಿತಾಂಶ ನೀಡಿದೆ. ಕಳೆದ ಒಂಬತ್ತು ತಿಂಗಳುಗಳಲ್ಲಿ, ಕಂಪನಿಯು ಒಟ್ಟು ಆದಾಯ ರೂ. 23.81 ಕೋಟಿಗೇರಿದೆ. ಇದು ನಿವ್ವಳ ಲಾಭದ ಪ್ರಮಾಣವು ಶೇ. 328ಕ್ಕೆ ಏರಿಕೆಯಾಗಿರುವುದನ್ನು ಸೂಚಿಸುತ್ತದೆ. ಕಳೆದ ವರ್ಷ ಈ ಅವಧಿಯಲ್ಲಿ ರೂ. 175 ಕೋಟಿ ನಿವ್ವಳ ಲಾಭ ಗಳಿಸಿತ್ತು. ನವೆಂಬರ್ 2023 ರಲ್ಲಿ, ಕಂಪನಿಯು ಃಖಇ ಯ ಖಒಇ ಪ್ಲಾಟ್ಫಾರ್ಮಿನಿಂದ ಃ ಖಇ ಐಣಜ ನ ಮುಖ್ಯ ಮಂಡಳಿಗೆ ಸ್ಥಳಾಂತರಗೊಂಡಿತು. ಕಂಪನಿಯು ತನ್ನ ಈಕ್ವಿಟಿ ಷೇರಿನ ಮುಖಬೆಲೆ ರೂ. 10 ಪ್ರತಿ, ರೂ ಮುಖಬೆಲೆಯನ್ನು ಹೊಂದಿರುವ 10 ಈಕ್ವಿಟಿ ಷೇರುಗಳನ್ನು ಸಂಪೂರ್ಣವಾಗಿ ಪಾವತಿಸಲಾಗಿದೆ.ಗ್ರೋಯಿಂಗ್ಟನ್ ವೆಂಚರ್ಸ್ ಲಿಮಿಟೆಡ್ ತಾಜಾ ಹಣ್ಣುಗಳ ಆಮದು ಮತ್ತು ಹಾಸ್ಪಿಟಾಲಿಟಿ ಮತ್ತು ಇ-ಕಾಮರ್ಸ್ನಲ್ಲಿ ಕಾರ್ಪೊರೇಟ್ಗೆ ವಿತರಣೆ ವ್ಯವಹಾರದಲ್ಲಿ ತೊಡಗಿಸಿಕೊಂಡಿದೆ. ಕಂಪನಿಯು ಟರ್ಕಿ, ವಿಯೆಟ್ನಾಂ, ದಕ್ಷಿಣ ಆಫ್ರಿಕಾ, ಗ್ರೀಸ್, ಚಿಲಿ ಮೊದಲಾದ ದೇಶಗಳ ಫಾರ್ಮ್ಗಳಿಂದ ಹಣ್ಣುಗಳನ್ನು ಸೋರ್ಸಿಂಗ್ ಮಾಡುವ ಮೂಲಕ ಪ್ಯಾನ್ ಇಂಡಿಯಾ ಮಾರುಕಟ್ಟೆಯಲ್ಲಿ ತಾಜಾ ಹಣ್ಣುಗಳನ್ನು ಪೂರೈಸುವ ನಿಟ್ಟಿನಲ್ಲಿ ವೃತ್ತಿಪರವಾಗಿ ನಿರ್ವಹಿಸಲ್ಪಡುತ್ತದೆ.ಕಂಪನಿಯು ಆಪಲ್, ಕಿತ್ತಳೆ, ಮ್ಯಾಂಡರಿನ್, ಪಿಯರ್, ಕಿವಿ, ಡ್ರ್ಯಾಗನ್ ಹಣ್ಣು, ಆವಕಾಡೊ, ರೆಡ್ ಗ್ಲೋಬ್ ದ್ರಾಕ್ಷಿಗಳು, ಪ್ಲಮ್, ನೆಕ್ಟರಿನ್ಗಳು, ಪೀಚ್ಗಳು, ಚೆರ್ರಿಗಳು, ಬ್ಲೂಬೆರ್ರಿಗಳು, ದ್ರಾಕ್ಷಿ ಹಣ್ಣು, ಮ್ಯಾಂಗೋಸ್ಟೀನ್, ರಾಂಬುಟಾನ್, ಲಾಂಗನ್, ಖರ್ಜೂರ, ಹುಣಸೆ ಹಣ್ಣುಗಳಂತಹ ಹಣ್ಣುಗಳ ವ್ಯಾಪಕ ಪೋರ್ಟ್ಫೋಲಿಯೊವನ್ನು ಹೊಂದಿದೆ.

## ಚೂಡಾ ಅವಲಕ್ಕಿ

### ಪಾಕ ಶಾಲೆ



### ಮಾಡುವ ವಿಧಾನ

ಅವಲಕ್ಕಿಯನ್ನು 4 ಗಂಟೆಗಳ ಕಾಲ ಬಿಸಿಲಿನಲ್ಲಿ ಒಣಗಿಸಿಕೊಳ್ಳಿರಿ. ಬಾಣಲೆಯಲ್ಲಿ ಎಣ್ಣೆ ಬಿಸಿ ಮಾಡಿಕೊಂಡು, ಜೀರಿಗೆ, ಸಾಸಿವೆ, ಕಡಲೆ ಬೀಜ, ಹುರಿಗಡಲೆ, ಅರಿಶಿಣ ಸೇರಿಸಿರಿ. ಸ್ವಲ್ಪ ಹುರಿದ ನಂತರ ರುಬ್ಬಿದ ಮಿಶ್ರಣ, ಉಪ್ಪು, ಕೊಬ್ಬರಿ ಸೇರಿಸಿ ತಣ್ಣಗಾದ ನಂತರ, ಅವಲಕ್ಕಿ ಸಕ್ಕರೆ ಸೇರಿಸಿ ಚೆನ್ನಾಗಿ ಕಲಸಿರಿ. ಬಳಿಕ ರುಚಿಯನ್ನು ಸವಿಯಿರಿ.

### ಬೇಕಾಗಿರುವ ಪದಾರ್ಥ

**ಮೀಡಿಯಂ ಅವಲಕ್ಕಿ-1/2 ಕೆ.ಜಿ., ಕಡಲೆಕಾಯಿ ಬೀಜ-1/4 ಬಟ್ಟಲು, ಹುರಿಗಡಲೆ-1/4 ಬಟ್ಟಲು, ಎಣ್ಣೆ-3 ಚಮಚ, ಅರಿಶಿಣ-1/4 ಚಮಚ, ಸಕ್ಕರೆ-1 ಚಮಚ, ಉಪ್ಪು-ರುಚಿಗೆ ತಕ್ಕಷ್ಟು, ಜೀರಿಗೆ-ಸ್ವಲ್ಪ, ಹೆಚ್ಚಿದ-1/4 ಬಟ್ಟಲು. ರುಬ್ಬಲು ಬೇಕಾದ ಪದಾರ್ಥಗಳು: ಕರಿಬೇವು ಸ್ವಲ್ಪ, ಕೊತ್ತಂಬರಿ ಸ್ವಲ್ಪ, ಹಸಿಮೆಣಸಿನಕಾಯಿ 6-8, ಬೆಳ್ಳುಳ್ಳಿ-10, ಶುಂಠಿ-ಸ್ವಲ್ಪ. ಎಲ್ಲವನ್ನು ತರಿತರಿಯಾಗಿ ರುಬ್ಬಿಕೊಳ್ಳಿರಿ.**

## ನೇಲ್ ಪಾಲಿಶ್‌ನಿಂದ ಕಾಡಲಿದೆ ಕ್ಯಾನ್ಸರ್

### ಹೆಲ್ತ್ ಟಿಪ್ಸ್



ಸುಂದರವಾಗಿ ಕಾಣಲು ಹುಡುಗಿಯರು ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಾರೆ. ಅವರು ಕೂದಲಿನಿಂದ ಉಗುರುಗಳವರೆಗೆ ತಮ್ಮ ಸೌಂದರ್ಯವನ್ನ ಕಾಪಾಡಿಕೊಳ್ಳುತ್ತಾರೆ. ಉಗುರುಗಳು ಸುಂದರವಾಗಿ ಕಾಣುವಲ್ಲಿ ನೇಲ್ ಪಾಲಿಶ್ ಪ್ರಮುಖ ಪಾತ್ರ ವಹಿಸುತ್ತದೆ. ಹಲವು ಬಗೆಯ ನೇಲ್ ಪಾಲಿಶ್'ಗಳು ಮಾರುಕಟ್ಟೆಯಲ್ಲಿ ಸುಲಭವಾಗಿ ಸಿಗುತ್ತವೆ. ಆದರೆ, ಅತಿಯಾಗಿ ನೇಲ್ ಪಾಲಿಶ್ ಬಳಸುವುದರಿಂದ ಕ್ಯಾನ್ಸರ್ ಬರುವ ಅಪಾಯವಿದೆ. ಇವುಗಳನ್ನು ಪದೇ ಪದೇ ಬಳಸುತ್ತಿದ್ದರೆ ಉಗುರಿನ ಬಣ್ಣ ಹಾಳಾಗುತ್ತದೆ. ಜೆಲ್ ಉಗುರು ಬಣ್ಣವನ್ನ ಒಣಗಿಸಲು ಬಳಸುವ ಯುವಿ ಕಿರಣಗಳು ಚರ್ಮದ ಕ್ಯಾನ್ಸರ್ ಮತ್ತು ವಯಸ್ಸಾದಿಕೆಯನ್ನ ಹೆಚ್ಚಿಸಬಹುದು. ಆದ್ದರಿಂದ ಜೆಲ್ ಮ್ಯಾನಿಕ್ಯೂರ್ ಅನ್ವಯಿಸುವ ಮೊದಲು ಬೆರಳುಗಳ ಮೇಲೆ ಸನ್ ಸ್ಕ್ರೀನ್ ಅನ್ವಯಿಸುವುದು ಉತ್ತಮ. ರಾಸಾಯನಿಕಗಳೊಂದಿಗೆ ಉಗುರು ಬಣ್ಣವನ್ನ ತೆಗೆದುಹಾಕುವುದರಿಂದ ನಿಮ್ಮ ಉಗುರುಗಳು ಒರಟಾಗಬಹುದು.

ನೇಲ್ ಪಾಲಿಶ್'ನಲ್ಲಿರುವ ರಾಸಾಯನಿಕಗಳು ಬಾಯಿಯ ಮೂಲಕ ಪ್ರವೇಶಿಸಿ ಆರೋಗ್ಯಕ್ಕೆ ತೊಂದರೆ ಉಂಟುಮಾಡುತ್ತವೆ. ವಿಶೇಷ ಸಂದರ್ಭಗಳಲ್ಲಿ ಮಾತ್ರ ನೈಲ್ ಪಾಲಿಶ್ ಬಳಸಿ. ಉಗುರುಗಳ ಬಣ್ಣವನ್ನ ಪ್ರತಿದಿನ ಬಳಸಬಾರದು. ಯಾಕಂದ್ರೆ, ಉಗುರುಗಳು ಸಹ ತಮ್ಮನ್ನು ತಾವು ಸರಿಪಡಿಸಿಕೊಳ್ಳಲು ಸಮಯವನ್ನ ನೀಡಬೇಕು. ಕಡಿಮೆ ರಾಸಾಯನಿಕಗಳನ್ನು ಹೊಂದಿರುವ ಬ್ರಾಂಡ್'ಗಳನ್ನು ಖರೀದಿಸಲು ಪ್ರಯತ್ನಿಸಿ.

## ಚರ್ಮದ ಆರೈಕೆಗೂ ಜೇನುತುಪ್ಪ ಪ್ರಯೋಜನಕಾರಿ

### ಬ್ಯೂಟಿ ಟಿಪ್ಸ್

ಜೇನುತುಪ್ಪದಲ್ಲಿ ಹೈಡ್ರೋಜನ್ ಪೆರಾಕ್ಸೈಡ್ ಕಂಡುಬರುತ್ತದೆ. ಇದು ಚರ್ಮವನ್ನು ಹಗುರಗೊಳಿಸಲು ಬಹಳ ಸಹಾಯಕ. ಇದು ಕಪ್ಪು ಕಲೆಗಳನ್ನು ಹೋಗಲಾಡಿಸಲು ಸಹ ಸಹಾಯ ಮಾಡುತ್ತದೆ. ಮೊಡವೆಗಳಿಂದ ಉಂಟಾಗುವ ಗುರುತುಗಳನ್ನು ಹಗುರಗೊಳಿಸಲು ಜೇನುತುಪ್ಪವು ತುಂಬಾ ಸಹಾಯಕ. ಜೇನುತುಪ್ಪವನ್ನು ಹಚ್ಚುವುದರಿಂದ ಚರ್ಮವು ತೇವಾಂಶದಿಂದ ಕೂಡಿರುತ್ತದೆ. ಇದು ಒಂದು ರೀತಿಯ ಹ್ಯೂಮೆಕ್ಟಂಟ್ ಆಗಿದೆ, ಗಾಳಿಯಿಂದ ತೇವಾಂಶವನ್ನು ತೆಗೆದುಕೊಳ್ಳುವ ಮೂಲಕ ಚರ್ಮವನ್ನು ಆರ್ದ್ರಗೊಳಿಸಲು ಸಹಾಯ ಮಾಡುತ್ತದೆ. ಇದರ ಬಳಕೆಯಿಂದ ಚರ್ಮವು ಮೃದುವಾಗಿರುತ್ತದೆ. ಆಂಟಿಫಂಗಲ್ ಮತ್ತು ಬ್ಯಾಕ್ಟೀರಿಯಾ ವಿರೋಧಿ ಗುಣಗಳು ಜೇನುತುಪ್ಪದಲ್ಲಿ ಕಂಡುಬರುತ್ತವೆ. ಇದು ಮೊಡವೆಗಳನ್ನು ತ್ವರಿತವಾಗಿ ಗುಣಪಡಿಸಲು ಮತ್ತು ಹೆಚ್ಚಿನ ಮೊಡವೆಗಳನ್ನು ತಡೆಯಲು ಬಹಳಷ್ಟು ಸಹಾಯ ಮಾಡುತ್ತದೆ. ಜೇನಿನಲ್ಲಿ ಎಕ್ಸ್‌ಫೋಲಿಯೇಟಿಂಗ್ ಗುಣವಿದ್ದು, ಈ ಕಾರಣದಿಂದಾಗಿ ತ್ವಚೆಯಲ್ಲಿ ಸಂಗ್ರಹವಾಗಿರುವ ನಿರ್ಜೀವ ಕೋಶಗಳನ್ನು ತೆಗೆದುಹಾಕಲು ಮತ್ತು ಚರ್ಮದ ರಂಧ್ರಗಳಲ್ಲಿ ಸಂಗ್ರಹವಾಗಿರುವ ಕೊಳೆಯನ್ನು ಸ್ವಚ್ಛಗೊಳಿಸಲು ಇದು ತುಂಬಾ ಸಹಕಾರಿಯಾಗಿದೆ. ಸತ್ತ ಚರ್ಮದ ಕೋಶಗಳನ್ನು ತೆಗೆದುಹಾಕುವುದರಿಂದ, ಚರ್ಮವು ಪ್ರಕಾಶಮಾನವಾಗಿ ಕಾಣುತ್ತದೆ. ಆದ್ದರಿಂದ ಇದು ಚರ್ಮವನ್ನು ಹೊಳೆಯುವಂತೆ ಮಾಡಲು ಸಹಾಯ ಮಾಡುತ್ತದೆ.



ರಾತ್ರಿ ಮಲಗುವ ಸಂದರ್ಭದಲ್ಲಿ ಮುಖಕ್ಕೆ ಕೊಂಚ ಜೇನುತುಪ್ಪ ಹಚ್ಚಿ ಮಲಗಿ. ಬೆಳಗಾಗುವಷ್ಟರಲ್ಲಿ ಮುಖಕ್ಕೆ ಕಾಂತಿಯನ್ನು ನೀಡುತ್ತದೆ.

## ರಶ್ಮಿಕಾ ಮಂದಣ್ಣಗೆ ಪ್ರಧಾನಿ ಮೋದಿ ಮೆಚ್ಚುಗೆ



ಪ್ರಧಾನಿ ನರೇಂದ್ರ ಮೋದಿ ಅವರು ಜನವರಿಯಲ್ಲಿ ಉದ್ಘಾಟಿಸಿದ ಅಟಲ್ ಬಿಹಾರಿ ವಾಜಪೇಯಿ ಸೇವಾರಿ-ನವಾ ಶೇವಾ ಅಟಲ್ ಸೇತು ಬಗ್ಗೆ ನಟಿ ರಶ್ಮಿಕಾ ಮಂದಣ್ಣ ಕೊಂಡಾಡಿದ್ದು. ಇದೀಗ ನಟಿ ತನ್ನ ಫಿ ಹ್ಯಾಂಡಲ್ನಲ್ಲಿ ಟ್ರಾನ್ಸ್ ಹಾರ್ಬರ್ ಲಿಂಕ್ನಲ್ಲಿ ಪ್ರಯಾಣಿಸುವ ವೀಡಿಯೊವನ್ನು ಹಂಚಿಕೊಂಡಿದ್ದಾರೆ. ಈ ಅದ್ಭುತವು ಹೊಸ ಭಾರತಕ್ಕೆ ಹೇಗೆ ಬಾಗಿಲು ತೆರೆಯುತ್ತದೆ ಎಂಬುದರ ಕುರಿತು ಮಾತನಾಡಿದ್ದು. ಈ ವಿಡಿಯೋಗೆ ಪ್ರಧಾನಿ ನರೇಂದ್ರ ಮೋದಿ ಕೂಡ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಟ್ರಾನ್ಸ್ ಹಾರ್ಬರ್ ಲಿಂಕ್ನಲ್ಲಿ ಪ್ರಯಾಣಿಸುವ ವೀಡಿಯೊವನ್ನು ಹಂಚಿಕೊಂಡ ನಟಿ ರಶ್ಮಿಕಾ ಮಂದಣ್ಣ, ''ನನ್ನನ್ನು ನೋಡಬೇಡಿ, ಕಾರಿನ ಹೊರಗೆ ನೋಡಿ. ಏನು ಕಾಣಿಸುತ್ತಿದೆ? ನೀವು ಇನ್ನೂ ಸಮುದ್ರ ಸೇತುವೆಯನ್ನು ನೋಡುತ್ತಿದ್ದರೆ ನಿಮ್ಮ ಕಣ್ಣುಗಳನ್ನು ತೆರೆಯಿರಿ ಬ್ರೋ... ಮುಂಬೈ ಟ್ರಾನ್ಸ್ ಹಾರ್ಬರ್ ಲಿಂಕ್, ಭಾರತದ ಇದುವರೆಗಿನ ಅತಿ ಉದ್ದದ ಸಮುದ್ರ ಸೇತುವೆ, 22 ಕಿಮೀ ಉದ್ದ, 6 ಲೇನ್, ಮತ್ತು ಇದು 2-ಗಂಟೆಗಳ ಪ್ರಯಾಣವನ್ನು 20 ನಿಮಿಷಗಳಿಗೆ ಕಡಿತಗೊಳಿಸುತ್ತದೆ. ನಂಬಲಸಾಧ್ಯ, ಅಲ್ಲವೇ? ಕೆಲವು ವರ್ಷಗಳ ಹಿಂದೆ, ಇದು ಸಂಭವಿಸಬಹುದು ಎಂದು ಯಾರು ಭಾವಿಸಿದ್ದರು? ಭಾರತವು ದೊಡ್ಡ ಕನಸು ಕಾಣಲು ಸಾಧ್ಯವಾಗಿದೆ'' ಎಂದು ಅವರು ವೀಡಿಯೊದಲ್ಲಿ ಹೇಳಿದ್ದಾರೆ.

**ಅಭಿವೃದ್ಧಿಗಾಗಿ ಮತ ಚಲಾಯಿಸಿ:** ಕೇವಲ 7 ವರ್ಷಗಳಲ್ಲಿ ಈ ಭವ್ಯವಾದ ಅದ್ಭುತವನ್ನು ನಿರ್ಮಿಸಿದ್ದೇವೆ. ಅಟಲ್ ಸೇತು ಭವಿಷ್ಯದ ಬಾಗಿಲುಗಳನ್ನು ಎಷ್ಟು ಬಲವಾಗಿ ತಟ್ಟಿದ್ದಾರೆ ಎಂದರೆ ಭಾರತಕ್ಕೆ ಹೊಸ ಬಾಗಿಲುಗಳು ತೆರೆದಿವೆ. ಅಟಲ್ ಸೇತು ಸೇತುವೆ ಅಷ್ಟೇ ಅಲ್ಲ ಯುವ ಭಾರತಕ್ಕೆ ಗ್ಯಾರಂಟಿ. ನಮ್ಮ ರಾಷ್ಟ್ರವನ್ನು ಈಗ ತಡೆಯಲಾಗದು. ನೀವು ಇಂತಹ 100 ರಷ್ಟು ಅಟಲ್ ಸೇತು ಸೇತುವೆಗಳನ್ನು ಪಡೆಯಲು ಬಯಸುವಿರಾ? ಎಚ್ಚೆತ್ತುಕೊಂಡು ಅಭಿವೃದ್ಧಿಗಾಗಿ ಮತ ಚಲಾಯಿಸಿ' ಎಂದು ರಶ್ಮಿಕಾ ಹೇಳಿದರು. ಅಟಲ್ ಸೇತು ಬಗ್ಗೆ ಜನರಿಗೆ ಮಾಹಿತಿ ನೀಡಿ ಅಭಿವೃದ್ಧಿಗೆ ಮತ ಚಲಾಯಿಸಿ ಎಂದ ನಟಿ ರಶ್ಮಿಕಾ ಮಂದಣ್ಣ ಅವರ ವಿಡಿಯೋವನ್ನು ಪ್ರಧಾನಿ ನರೇಂದ್ರ ಮೋದಿ ಅವರಯ ತಮ್ಮ ಎಕ್ಸ್ ಹ್ಯಾಂಡಲ್ನಲ್ಲಿ ಶೇರ್ ಮಾಡಿದ್ದಾರೆ. ಜನರನ್ನು ಸಂಪರ್ಕಿಸುವುದು ಮತ್ತು ಜೀವನವನ್ನು ಸುಧಾರಿಸುವುದಕ್ಕಿಂತ ಹೆಚ್ಚು ತೃಪ್ತಿಕರವಾದದ್ದೇನೂ ಇಲ್ಲ ಎಂದು ಮೋದಿ ಪೋಸ್ಟ್ನಲ್ಲಿ ಬರೆದಿದ್ದಾರೆ.



## ಬರ್ತಿದೆ ಬ್ರ್ಯಾಂಡ್ ನ್ಯೂ ಸೆಲೆಬ್ರಿಟಿ ಗೇಮ್ ಶೋ Huu ಅಂತೀಯಾ...Uhuu ಅಂತೀಯಾ..




ಕನ್ನಡ ಕಿರುತೆರೆಯಲ್ಲಿ ರಿಯಾಲಿಟಿ ಶೋ ಗಳ ಸರದಾರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಸ್ಟಾರ್ ಸುವರ್ಣ ವಾಹಿನಿಯು ಇದೀಗ 'ಬರ್ತಿದೆ ಬ್ರ್ಯಾಂಡ್ ನ್ಯೂ ಸೆಲೆಬ್ರಿಟಿ ಗೇಮ್ ಶೋ Huu ಅಂತೀಯಾ...Uhuu ಅಂತೀಯಾ' ಎಂಬ ಹೊಸ ಬಗೆಯ ವಿನೂತನ ಗೇಮ್ ಶೋ ಅನ್ನು ಪ್ರಸಾರ ಮಾಡಲಿದೆ.

ಇಬ್ಬರು ಜನಪ್ರಿಯ ಆ್ಯಂಕರ್‌ಗಳನ್ನು ಹೊಂದಿರುವ ಈ ಶೋ ಒಟ್ಟು ಮೂರು ಸುತ್ತುಗಳನ್ನು ಹೊಂದಿರುತ್ತದೆ. ಸೆಲೆಬ್ರಿಟಿ ಸ್ಪರ್ಧಿಗಳಿಗೆ 6 ಲಕ್ಷ ರೂಪಾಯಿಗಳನ್ನು ಗೆಲ್ಲುವ ಅವಕಾಶವಿರುತ್ತದೆ.

ಮೊದಲ ಸುತ್ತಿನಲ್ಲಿ ಸ್ಪರ್ಧಿಗಳು ಒಬ್ಬರ ನಂತರ ಒಬ್ಬರು ಆಡುತ್ತಾರೆ. ನಿರೂಪಕರು ನೀಡಿದ ಸತ್ಯ ಮತ್ತು ಸುಳ್ಳು ಸಂಗತಿಗಳನ್ನು ಸ್ಪರ್ಧಿಗಳು ಸರಿಯಾಗಿ ಆರಿಸಿದರೆ 1 ಲಕ್ಷ ರೂಪಾಯಿ ಗೆಲ್ಲುವ ಅವಕಾಶವಿದೆ.

ಇನ್ನು ಎರಡನೇ ಸುತ್ತಿನಲ್ಲಿ ಸ್ಪರ್ಧಿಗಳಿಗೆ ಆಹಾರವನ್ನು ಸೇವಿಸುವ ಸವಾಲಿರುತ್ತದೆ, ಮಜಾ ತುಂಬಿರುವ ಟ್ವಿಸ್ಟ್ ಗಳೊಂದಿಗೆ ಒಟ್ಟು 60 ಸೆಕೆಂಡ್ಗಳ ಸಮಯವನ್ನು ನೀಡಲಾಗುತ್ತದೆ. ಇದರಲ್ಲಿ ಗೆದ್ದ ವಿಜೇತರು 2 ಲಕ್ಷ ರೂಪಾಯಿಗಳನ್ನು ಗೆಲ್ಲಬಹುದು.

ಮೂರನೇ ಹಾಗು ಕೊನೆಯ ಸುತ್ತಿನಲ್ಲಿ ಕೇವಲ ಇಬ್ಬರು ಸ್ಪರ್ಧಿಗಳು ತಮ್ಮ ಅದೃಷ್ಟದ ಆಧಾರದ ಮೇಲೆ ಆಡುತ್ತಾರೆ, ಗೆದ್ದ ಸ್ಪರ್ಧಿಗೆ 3 ಲಕ್ಷಗಳನ್ನು ಗೆಲ್ಲುವ ಅವಕಾಶವಿದೆ. ಇದು ಈ ಗೇಮ್ ಶೋ ನ ನಿಯಮಾವಳಿಗಳು.

ಇನ್ನು ಬರ್ತಿದೆ ಬ್ರ್ಯಾಂಡ್ ನ್ಯೂ ಸೆಲೆಬ್ರಿಟಿ ಗೇಮ್ ಶೋ Huu ಅಂತೀಯಾ...Uhuu ಅಂತೀಯಾ'.. ಶೋ ನ ನಿರೂಪಣೆಯ ಜವಾಬ್ದಾರಿಯನ್ನು ಹೊತ್ತಿರೋದು ತುಳುನಾಡಿನ ರಾಕ್ ಸ್ಟಾರ್ ರೂಪೇಶ್ ಶೆಟ್ಟಿ ಮತ್ತು ನಟನೆ ಹಾಗು ತನ್ನ ಹಾಸ್ಯಗಾರಿಕೆಯ ಮೂಲಕ ನೋಡುಗರ ಮನಗೆದ್ದಿರುವ ಅರುಣ್ ಹರಿಹರನ್ ಈ ಶೋ ನ ರೂವಾರಿಗಳಾಗಿದ್ದಾರೆ. ಮೊದಲ ಗ್ರ್ಯಾಂಡ್ ಓಪನಿಂಗ್ ಸಂಚಿಕೆಯಲ್ಲಿ ಸೆಲೆಬ್ರಿಟಿ ಸ್ಪರ್ಧಿಗಳಾಗಿ ನಟ ಡಾರ್ಲಿಂಗ್ ಕೃಷ್ಣ, ನಟಿಯರಾದ ಮಿಲನ ನಾಗರಾಜ್ ಹಾಗು ಅಮೃತಾ ಅಯ್ಯಂಗಾರ್ ಭಾಗವಹಿಸಲಿದ್ದಾರೆ. ಈ ರಿಯಾಲಿಟಿ ಶೋ ನ ಟೈಟಲ್ ಟ್ರ್ಯಾಕ್ ಗೆ ನೋಡುಗರು ಫಿದಾ ಆಗಿದ್ದು, ಮಸ್ತ್ ಮನರಂಜನೆಗೆ ಕಾತುರತೆಯಿಂದ ಕಾಯುತ್ತಿದ್ದಾರೆ. ಅಷ್ಟೇ ಅಲ್ಲದೆ ಮನೆಯಲ್ಲಿ ಕುಳಿತು ವೀಕ್ಷಿಸುವ ವೀಕ್ಷಕರಿಗೂ ಐ ಫೋನ್ ಗೆಲ್ಲುವ ಅವಕಾಶವನ್ನು ಸ್ಟಾರ್ ಸುವರ್ಣ ವಾಹಿನಿಯು ನೀಡುತ್ತಿದೆ. ಮೊದಲ ಹಾಗು ಎರಡನೇ ಸಂಚಿಕೆಯ ಕೊನೆಯಲ್ಲಿ ಕೇಳುವ ಪ್ರಶ್ನೆಗೆ ಸರಿಯಾದ ಉತ್ತರವನ್ನು ನೀಡಿದರೆ 'I Phone' ಗೆಲ್ಲುವ ಅವಕಾಶವನ್ನು ನಿಮ್ಮದಾಗಿಸಿಕೊಳ್ಳಬಹುದು .

ನಿಮ್ಮನ್ನ ಮನರಂಜಿಸಲು ಬರ್ತಿದೆ ಹೊಚ್ಚ ಹೊಸ ಯೂನಿಕ್ ಸೆಲೆಬ್ರಿಟಿ ಗೇಮ್ ಶೋ ಬರ್ತಿದೆ ಬ್ರ್ಯಾಂಡ್ ನ್ಯೂ ಸೆಲೆಬ್ರಿಟಿ ಗೇಮ್ ಶೋ Huu ಅಂತೀಯಾ...Uhuu ಅಂತೀಯಾ'.. ಇದೇ ಮೇ 19 ರಿಂದ ಪ್ರತಿ ಭಾನುವಾರ ರಾತ್ರಿ 7 ಗಂಟೆಗೆ ಪ್ರಸಾರವಾಗಲಿದೆ. ಈ ಮಜಭರಿತ ಸಂಚಿಕೆಗಳನ್ನು ತಪ್ಪದೇ ವೀಕ್ಷಿಸಿ ನಿಮ್ಮ ಸ್ಟಾರ್ ಸುವರ್ಣ ವಾಹಿನಿಯಲ್ಲಿ.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ದಾಂಪತ್ಯದಲ್ಲಿ ಮನಸ್ತಾಪ, ಉದ್ಯೋಗ ಒತ್ತಡ, ಆರ್ಥಿಕ ವ್ಯವಹಾರದಲ್ಲಿ ತೊಂದರೆ, ಲಾಭದಲ್ಲಿ ಕುಂಠಿತ

**ವೃಷಭ:** ಅದೃಷ್ಟದ ದಿವಸ, ತಂದೆಯಿಂದ ಅನುಕೂಲ, ದಾಂಪತ್ಯದಲ್ಲಿ ಕಿರಿಕಿರಿ, ಪ್ರಯಾಣದಲ್ಲಿ ಅನುಕೂಲ

**ಮಿಥುನ:** ಪ್ರೀತಿ ಪ್ರೇಮ ಭಾವನೆಗಳಿಂದ ನೋವು, ಆರೋಗ್ಯದ ಚಿಂತೆ, ಸ್ತ್ರೀಯರೊಂದಿಗೆ ಶತ್ರುತ್ವ, ಮಕ್ಕಳೊಂದಿಗೆ ಕಲಹ ಮತ್ತು ಬೇಸರ

**ಕಟಕ:** ಪ್ರೀತಿ ಪ್ರೇಮದಲ್ಲಿ ಯಶಸ್ಸು, ಐಷಾರಾಮಿ ಜೀವನದ ಕನಸು, ಸಂಗಾತಿಯಿಂದ ಅನುಕೂಲ, ಮಾಟ ಮಂತ್ರ ತಂತ್ರದ ಆತಂಕ

**ಸಿಂಹ:** ಆರೋಗ್ಯದ ಬಗ್ಗೆ ಎಚ್ಚರ, ವಾಹನ ಚಾಲನೆಯಲ್ಲಿ ಎಚ್ಚರಿಕೆ, ವ್ಯಾಪಾರ ವ್ಯವಹಾರದಲ್ಲಿ ಅಡೆತಡೆಗಳು, ಸಂಗಾತಿ ನಡವಳಿಕೆಯಿಂದ ಬೇಸರ

**ಕನ್ಯಾ:** ಆರ್ಥಿಕ ಬೆಳವಣಿಗೆ, ಮಕ್ಕಳಿಂದ ಯೋಗ ಫಲ, ಪ್ರಯಾಣದಲ್ಲಿ ಕಿರಿಕಿರಿ, ವಿದ್ಯಾಭ್ಯಾಸದಲ್ಲಿ ಉತ್ತಮ ಪ್ರಗತಿ

**ತುಲಾ:** ವಿದ್ಯಾಭ್ಯಾಸದಲ್ಲಿ ನಿರಾಸಕ್ತಿ, ಆರ್ಥಿಕ ಚೇತರಿಕೆ, ಅವಕಾಶದಿಂದ ವಂಚಿತರಾಗುವಿರಿ, ತಾಯಿ ಆರೋಗ್ಯದಲ್ಲಿ ವ್ಯತ್ಯಾಸ

**ವೃಶ್ಚಿಕ:** ಸಂಗಾತಿ ನಡವಳಿಕೆಯಿಂದ ಕಿರಿಕಿರಿ, ದುಶ್ಚಟಗಳಿಗೆ ಅಧಿಕ ಖರ್ಚು, ವಿದ್ಯಾಭ್ಯಾಸದಲ್ಲಿ ಉತ್ತಮ ಅವಕಾಶ, ಆರೋಗ್ಯದಲ್ಲಿ ಏರುಪೇರು

**ಧನಸ್ಸು:** ಸಾಲದ ಚಿಂತೆ, ಕೌಟುಂಬಿಕ ಸಮಸ್ಯೆಯಿಂದ ಚಿಂತೆ, ವ್ಯವಹಾರದಲ್ಲಿ ಶತ್ರು ಕಾಟ, ಅನಾರೋಗ್ಯ ಸಮಸ್ಯೆ

**ಮಕರ:** ಮಕ್ಕಳಿಂದ ಲಾಭ, ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಹೆಣ್ಣು ಮಕ್ಕಳಿಂದ ಅನುಕೂಲ, ತಂತ್ರದ ಭೀತಿ ಕಾಡುವುದು

**ಕುಂಭ:** ಸ್ಥಿರಾಸ್ತಿ ಮತ್ತು ವಾಹನ ಯೋಗ, ತಾಯಿಯಿಂದ ಅನುಕೂಲ, ಉದ್ಯೋಗ ಸ್ಥಳದಲ್ಲಿ ಕಿರಿಕಿರಿ, ಸಂಗಾತಿಯೊಂದಿಗೆ ಉತ್ತಮ ಬಾಂಧವ್ಯ

**ಮೀನ:** ಉತ್ತಮ ಲಾಭ, ಉನ್ನತ ವಿದ್ಯಾಭ್ಯಾಸದಲ್ಲಿ ಪ್ರಗತಿ, ಕೋರ್ಟ್ ಕೇಸುಗಳಲ್ಲಿ ಜಯ, ವಾಹನ ಚಾಲನೆಯಲ್ಲಿ ಎಚ್ಚರಿಕೆ

## ವಿಶ್ವ ಅಧಿಕ ರಕ್ತದೊತ್ತಡ ದಿನ

ಅಧಿಕ ರಕ್ತದೊತ್ತಡದ ಅರಿವು ಮೂಡಿಸಲು ಮತ್ತು ಅಧಿಕ ರಕ್ತದೊತ್ತಡ ತಡೆಗಟ್ಟುವಿಕೆ, ಪತ್ತೆ ಮತ್ತು ನಿಯಂತ್ರಣವನ್ನು ಉತ್ತೇಜಿಸಲು ವಾರ್ಷಿಕವಾಗಿ ಮೇ 17 ರಂದು ವಿಶ್ವ ಅಧಿಕ ರಕ್ತದೊತ್ತಡ ದಿನವನ್ನು ಆಚರಿಸಲಾಗುತ್ತದೆ. ಅಧಿಕ ರಕ್ತದೊತ್ತಡವು ಜಗತ್ತಿನಾದ್ಯಂತ ಒಂದು ಶತಕೋಟಿಗೂ ಹೆಚ್ಚು ಜನರ ಮೇಲೆ ಮತ್ತು ವಿಶ್ವದ ವಯಸ್ಕ ಜನಸಂಖ್ಯೆಯ 30% ಕ್ಕಿಂತ ಹೆಚ್ಚು ಜನರ ಮೇಲೆ ಪರಿಣಾಮ ಬೀರುತ್ತದೆ. ಇದು ಹೃದಯರಕ್ತನಾಳದ ಕಾಯಿಲೆಗಳಿಗೆ, ವಿಶೇಷವಾಗಿ ಪರಿಧಮನಿಯ ಕಾಯಿಲೆ ಮತ್ತು ಪಾರ್ಶ್ವವಾಯುಗಳಿಗೆ ಪ್ರಾಥಮಿಕ ಅಪಾಯಕಾರಿ ಅಂಶವಾಗಿದೆ. ಇದಲ್ಲದೆ, ಅಧಿಕ ರಕ್ತದೊತ್ತಡವು ದೀರ್ಘಕಾಲದ ಮೂತ್ರಪಿಂಡ ಕಾಯಿಲೆ, ಹೃದಯ ವೈಫಲ್ಯ, ಆರ್ಹೆತ್ಮಿಯಾ ಮತ್ತು ಬುದ್ಧಿಮಾಂದ್ಯತೆಗೆ ಅಪಾಯಕಾರಿ ಅಂಶವಾಗಿದೆ. ಅದಕ್ಕಾಗಿಯೇ ಈ ಸ್ಥಿತಿಯ ಬಗ್ಗೆ ಮಾಹಿತಿಯನ್ನು ಹಂಚಿಕೊಳ್ಳುವುದು ಅತ್ಯಗತ್ಯ. ವಿಶ್ವ ಅಧಿಕ ರಕ್ತದೊತ್ತಡ ದಿನವನ್ನು ವರ್ಲ್ಡ್ ಹೈಪರ್ಟೆನ್ಷನ್ ಲೀಗ್ ಪ್ರಾರಂಭಿಸಿತು. W.H.L. ಜನವರಿ 4, 1984 ರಂದು ಸ್ಥಾಪನೆಯಾದ ಲಾಭರಹಿತ ಅಂತರಾಷ್ಟ್ರೀಯ ಸಂಸ್ಥೆಯಾಗಿದ್ದು, ಜನಸಂಖ್ಯೆಯ ಮಟ್ಟದಲ್ಲಿ ಅಧಿಕ ರಕ್ತದೊತ್ತಡವನ್ನು ತಡೆಗಟ್ಟಲು ಮತ್ತು ನಿಯಂತ್ರಿಸಲು ಸಮರ್ಪಿಸಲಾಗಿದೆ. ವಿಶ್ವ ಅಧಿಕ ರಕ್ತದೊತ್ತಡ ದಿನವನ್ನು ಮೊದಲು ಮೇ 14, 2005 ರಂದು ಪ್ರಾರಂಭಿಸಲಾಯಿತು. 2006 ರಿಂದ, W.H.L. ಪ್ರತಿ ವರ್ಷ ಮೇ 17 ಅನ್ನು ವಿಶ್ವ ಅಧಿಕ ರಕ್ತದೊತ್ತಡ ದಿನವನ್ನಾಗಿ ಆಚರಿಸಲಾಗುತ್ತಿದೆ. ಅಧಿಕ ರಕ್ತದೊತ್ತಡ ಹೊಂದಿರುವ ರೋಗಿಗಳಲ್ಲಿ ಸರಿಯಾದ ಜ್ಞಾನದ ಕೊರತೆಯಿಂದಾಗಿ ಅಧಿಕ ರಕ್ತದೊತ್ತಡದ ಜಾಗೃತಿಯನ್ನು ಹೆಚ್ಚಿಸುವ ಗುರಿಯನ್ನು ಈ ದಿನ ಹೊಂದಿದೆ. ಅಧಿಕ ರಕ್ತದೊತ್ತಡವನ್ನು ಅಧಿಕ ರಕ್ತದೊತ್ತಡ ಎಂದೂ ಕರೆಯುತ್ತಾರೆ, ಇದು ರಕ್ತನಾಳಗಳಲ್ಲಿ ರಕ್ತದೊತ್ತಡ ನಿರಂತರವಾಗಿ ಹೆಚ್ಚಾದಾಗ ವೈದ್ಯಕೀಯ ಸ್ಥಿತಿಯಾಗಿದೆ. ನಿಮ್ಮ ಹೃದಯವು ಹೆಚ್ಚು ರಕ್ತವನ್ನು ಪಂಪ್ ಮಾಡುತ್ತದೆ ಮತ್ತು ನಿಮ್ಮ ರಕ್ತನಾಳಗಳು ಕಿರಿದಾಗುತ್ತವೆ, ನಿಮ್ಮ ರಕ್ತದೊತ್ತಡ ಹೆಚ್ಚಾಗುತ್ತದೆ. ಅಧಿಕ ರಕ್ತದೊತ್ತಡವು ಸಾಮಾನ್ಯವಾಗಿ ರೋಗಲಕ್ಷಣಗಳನ್ನು ಉಂಟುಮಾಡುವುದಿಲ್ಲ, ಆದರೆ ದೀರ್ಘಕಾಲದ ಅಧಿಕ ರಕ್ತದೊತ್ತಡವು ಪರಿಧಮನಿಯ ಕಾಯಿಲೆ, ಪಾರ್ಶ್ವವಾಯು, ದೀರ್ಘಕಾಲದ ಮೂತ್ರಪಿಂಡ ಕಾಯಿಲೆ, ಹೃದಯ ವೈಫಲ್ಯ, ಆರ್ಹೆತ್ಮಿಯಾ ಮತ್ತು ಬುದ್ಧಿಮಾಂದ್ಯತೆಗೆ ಕಾರಣವಾಗಬಹುದು. ಸಾಮಾನ್ಯವಾಗಿ ಯಾವುದೇ ರೋಗಲಕ್ಷಣಗಳಿಲ್ಲದ ಕಾರಣ, ನಿಮ್ಮ ರಕ್ತದೊತ್ತಡವನ್ನು ಗುರುತಿಸಲು ನೀವು ಸ್ಕ್ರೀನಿಂಗ್ ಅನ್ನು ಹೊಂದಿರಬೇಕು.

# ಪಶ್ಚಿಮ ಬಂಗಾಳದಲ್ಲಿ ಸಿಡಿಲು ಬಡಿದು 11 ಮಂದಿ ಸಾವು



**ಕೊಲ್ಕತ್ತ:** ಪಶ್ಚಿಮ ಬಂಗಾಳದ ಮಾಲ್ಡಾ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಸಿಡಿಲು ಬಡಿದು ಕನಿಷ್ಠ 11 ಜನರು ಸಾವನ್ನಪ್ಪಿದ್ದಾರೆ. ಇಬ್ಬರು ಗಾಯಗೊಂಡಿದ್ದಾರೆ.

ಮಾನ್ಸೂನ್ ಪ್ರಾರಂಭವಾಗುವ ಮುನ್ನ ಗುರುವಾರ ಗುಡುಗು ಸಿಡಿಲಿನ ಆರ್ಭಟದೊಂದಿಗೆ ಮಳೆಯಾಗಿದೆ. ಮಾಲ್ಡಾ ಮತ್ತು ಮುರ್ಷಿದಾಬಾದ್ ಪ್ರದೇಶಗಳು ಇಂದು ಮಧ್ಯಾಹ್ನ ಪಶ್ಚಿಮ ಬಂಗಾಳದ ಕಲ್ ಬೈಶಾಖಿ ಎಂಬ ಋತುಮಾನದ ಚಂಡಮಾರುತಕ್ಕೆ ಸಾಕ್ಷಿಯಾಗಿದೆ.

ಸಿಡಿಲಿಂದ ಮೃತಪಟ್ಟವರನ್ನು ಚಂದನ್ ಸಾಹ್ನಿ(40), ರಾಜ್ ಮೃಧಾ(16), ಮನೋಜಿತ್ ಮಂಡಲ್(21), ಅಸಿತ್ ಸಹಾ(19), ಸುಮಿತ್ರಾ ಮಂಡಲ್(46), ಪಂಕಜ್ ಮಂಡಲ್ (23), ನಯನ್ ರಾಯ್ (23), ಪ್ರಿಯಾಂಕಾ ಸಿಂಗ್ (20), ರಾಣಾ ಶೇಖ್(8), ಅತುಲ್ ಮಂಡಲ್(65) ಮತ್ತು ಸಬರುಲ್ ಶೇಖ್ (11) ಎಂದು ಗುರುತಿಸಲಾಗಿದೆ.

ಅವರಲ್ಲಿ ರಾಣಾ ಶೇಖ್ ಮತ್ತು ಸಬರುಲ್ ಶೇಖ್ ಮಾಣಿಕ್ಚಕ್ ಪೊಲೀಸ್ ಠಾಣೆ ವ್ಯಾಪ್ತಿಯ ನಿವಾಸಿಗಳು. ಇತರ ಮೂವರು ಮಾಲ್ಡಾ ಪೊಲೀಸ್ ಠಾಣೆ ವ್ಯಾಪ್ತಿಯ ಸಹಾಪುರದವರು. ಹರಿಶ್ಚಂದ್ರಪುರದಲ್ಲಿ ದಂಪತಿಗಳು ಹೊಲದಲ್ಲಿ ಕೆಲಸ ಮಾಡುತ್ತಿದ್ದಾಗ ಸಾವನ್ನಪ್ಪಿದ್ದಾರೆ. ಇನ್ನಿಬ್ಬರು ಮೃತರು ಗಜೋಲ್ ಪೊಲೀಸ್ ಠಾಣೆ ವ್ಯಾಪ್ತಿಯ ಆದಿನಾ ಮತ್ತು ರಟುವಾ ಪೊಲೀಸ್ ಠಾಣೆ ವ್ಯಾಪ್ತಿಯ ಬಾಲುಪುರದವರು. ಉಳಿದ ಇಬ್ಬರು ಇಂಗ್ಲಿಷ್ ಬಜಾರ್ ಮತ್ತು ಮಾಣಿಕ್ಚಕ್ ಪೊಲೀಸ್ ಠಾಣೆ ವ್ಯಾಪ್ತಿಯ ನಿವಾಸಿಗಳಾಗಿದ್ದಾರೆ.

# ನ್ಯೂ ಕ್ಯಾಲೆಡೋನಿಯಾದಲ್ಲಿ ತುರ್ತು ಪರಿಸ್ಥಿತಿ ಘೋಷಣೆ




**ನ್ಯೂ ಕ್ಯಾಲೆಡೋನಿಯಾ:** ಪೆಸಿಫಿಕ್ ದ್ವೀಪ ನ್ಯೂ ಕ್ಯಾಲೆಡೋನಿಯಾದಲ್ಲಿ ಬುಧವಾರ ತುರ್ತು ಪರಿಸ್ಥಿತಿ ಘೋಷಿಸಲಾಗಿದ್ದು, ಚುನಾವಣಾ ಸುಧಾರಣೆಗೆ ಸಂಬಂಧಿಸಿದಂತೆ ನಡೆದ ಗಲಭೆಯಲ್ಲಿ ಮೂವರು ಸ್ಥಳೀಯರು ಮತ್ತು ಒಬ್ಬ ಪೊಲೀಸ್ ಅಧಿಕಾರಿ ಸಾವನ್ನಪ್ಪಿದ್ದಾರೆ.

ಸ್ಥಳೀಯ ಕಾಲಮಾನ ಬೆಳಿಗ್ಗೆ 5 ಗಂಟೆಗೆ ಜಾರಿಗೆ ಬಂದ ತುರ್ತು ಪರಿಸ್ಥಿತಿಯು ಸಭೆಗಳನ್ನು ನಿಷೇಧಿಸಲು ಮತ್ತು ಫ್ರೆಂಚ್ ಆಡಳಿತದ ದ್ವೀಪದ ಸುತ್ತಲೂ ಜನರು ಗುಂಪು ಸೇರುವುದು ನಿಷೇಧಿಸಲಾಗಿದೆ.

ಗಲಭೆಕೋರರು ವಾಹನಗಳು ಮತ್ತು ಅಂಗಡಿಗಳಿಗೆ ಬೆಂಕಿ ಹಚ್ಚಿ ನಂತರ ಅಂಗಡಿಗಳನ್ನು ಲೂಟಿ ಮಾಡಿದರು. ದ್ವೀಪದಲ್ಲಿ ಸಾಮಾನ್ಯವಾಗಿ ಇರುವ 1,800 ಅಧಿಕಾರಿಗಳಿಗೆ ಹೆಚ್ಚಿನ 500 ಅಧಿಕಾರಿಗಳನ್ನು ಪೊಲೀಸ್ ಬಲವರ್ಧನೆಗಳನ್ನು ಕಳುಹಿಸಲಾಗಿದೆ. ಶಾಲೆಗಳನ್ನು ಮುಚ್ಚಲಾಗಿದೆ ಮತ್ತು ರಾಜಧಾನಿಯಲ್ಲಿ ಈಗಾಗಲೇ ಕರ್ಫ್ಯೂ ಇದೆ. ನ್ಯೂ ಕ್ಯಾಲೆಡೋನಿಯಾದಲ್ಲಿ 10 ವರ್ಷಗಳಿಂದ ವಾಸಿಸುತ್ತಿರುವ ಫ್ರೆಂಚ್ ನಿವಾಸಿಗಳಿಗೆ ಪ್ರಾಂತೀಯ ಚುನಾವಣೆಯಲ್ಲಿ ಮತ ಚಲಾಯಿಸಲು ಅವಕಾಶ ನೀಡುವ ಹೊಸ ಮಸೂದೆಯ ಬಗ್ಗೆ ಪ್ಯಾರಿಸ್ನಲ್ಲಿ ಮಂಗಳವಾರ ಸಂಸದರು ಅಂಗೀಕರಿಸಿದ ಹೊಸ ಮಸೂದೆಯ ಬಗ್ಗೆ ಗಲಭೆಗಳು ಭುಗಿಲೆದ್ದವು – ಈ ಕ್ರಮವು ಮತಗಳನ್ನು ದುರ್ಬಲಗೊಳಿಸುತ್ತದೆ ಎಂದು ಕೆಲವು ಸ್ಥಳೀಯ ನಾಯಕರು ಆತಂಕ ವ್ಯಕ್ತಪಡಿಸಿದ್ದಾರೆ.

## ಗುಂಡೇಟಿಗೊಳಗಾದ ಸ್ಲೊವಾಕಿಯಾ ಪ್ರಧಾನಿ ಸ್ಥಿತಿ ಗಂಭೀರ

**ಬಾನ್ಸ್ಕಾ ಬಿಸ್ಟ್ರಿಕಾ:** ಗುಂಡಿನ ದಾಳಿಗೆ ಒಳಗಾದ ಸ್ಲೊವಾಕಿಯಾದ ಪ್ರಧಾನಿ ರಾಬರ್ಟ್ ಫಿಕೋ ಅವಪ ದೇಹಸ್ಥಿತಿ ಸ್ಥಿರವಾಗಿದೆಯಾದರೂ, ಇನ್ನೂ ಗಂಭೀರವಾಗಿದೆಯೆಂದು ಆಸ್ಪತ್ರೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ತೀವ್ರ ಗುಂಡಿನ ಗಾಯಗಳಾಗಿರುವ ಫಿಕೋ ಅವರಿಗೆ ವೈದ್ಯರುಗಳು ಚಿಕಿತ್ಸೆಯನ್ನು ಮುಂದುವರಿಸಿದ್ದಾರೆಂದು ರಕ್ಷಣಾ ಸಚಿವ ರಾಬರ್ಟ್ ಕಾಲಿನಾಕ್ ಅವರು ಬಾನ್ಸ್ಕಾ ಬಿಸ್ಟ್ರಿಕಾ ನಗರದ ಆಸ್ಪತ್ರೆಯ ಹೊರಭಾಗದಲ್ಲಿ ಜಮಾಯಿಸಿದ್ದ ಸುದ್ದಿಗಾರರಿಗೆ ತಿಳಿಸಿದರು. ಪ್ರಧಾನಿ ರಾಬರ್ಟ್ ಫಿಕೋ ಅವರು ಗುರುವಾರ ಬ್ರಾನ್ ಬಿಸ್ಟ್ರಿಕಾ ನಗರದ ಸಾಂಸ್ಕೃತಿಕ ಭವನದ ಹೊರಭಾಗದಲ್ಲಿ ತನ್ನ ಬೆಂಬಲಿಗರೊಂದಿಗೆ ಮಾತನಾಡುತ್ತಿದ್ದ ಸಂದರ್ಭ ಅವರೆಡೆಗೆ ಐದು ಗುಂಡುಗಳನ್ನು ಹಾರಿಸಲಾಗಿತ್ತು. ಪ್ರಕರಣಕ್ಕೆ ಸಂಬಂಧಿಸಿ ಓರ್ವ ಶಂಕಿತನನ್ನು ಬಂಧಿಸಲಾಗಿದ್ದು, ರಾಜಕೀಯ ಉದ್ದೇಶದಿಂದ ಈ ಹತ್ಯೆ ಯತ್ನ ನಡೆದಿರುವುದಾಗಿ ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ ಎಂದ ಆಂತರಿಕ ಸಚಿವ ಸುಟಾಜ್ ಎಸ್ಟೋಕ್ ಬುಧವಾರ ತಿಳಿಸಿದ್ದಾರೆ.



# ತೆಲಂಗಾಣದಲ್ಲಿ ಸಿಂಗಲ್ ಸ್ಕ್ರೀನ್ ಥಿಯೇಟರ್ ಬಂದ್



**ತೆಲಂಗಾಣ:** 10 ದಿನಗಳ ಕಾಲ ಸಿಂಗಲ್ ಸ್ಕ್ರೀನ್ ಥಿಯೇಟರ್ಗಳನ್ನು ತಾತ್ಕಾಲಿಕ ಸ್ಥಗಿತಗೊಳಿಸುವುದಾಗಿ ತೆಲಂಗಾಣದಲ್ಲಿ ಘೋಷಣೆ ಮಾಡಲಾಗಿದೆ. ಯಾವುದೇ ಗಮನಾರ್ಹ ಚಲನಚಿತ್ರ ಬಿಡುಗಡೆಗೆ ಇಲ್ಲದಿರುವ ಪರಿಣಾಮ ಈ ನಿರ್ಧಾರವನ್ನು ಕೈಗೊಂಡಿದೆ.

ಯಾವುದೇ ದೊಡ್ಡ ಬಜೆಟ್ ನ ಚಿತ್ರಗಳು ಬಾರದೇ ಇರುವುದರಿಂದ ಥಿಯೇಟರ್ ಗಳನ್ನು ಮುಚ್ಚುತ್ತಿರುವುದಾಗಿ ಥಿಯೇಟರ್ ಮಾಲೀಕರು ಉಲ್ಲೇಖಿಸಿದ್ದಾರೆ.

ಪ್ರೇಕ್ಷಕರನ್ನು ಆಕರ್ಷಿಸಲು ಯಾವುದೇ ಪ್ರಮುಖ ಚಿತ್ರಗಳು ಬಿಡುಗಡೆಯಾಗುತ್ತಿಲ್ಲ ಎಂದು ಅವರು ಹೇಳಿದ್ದಾರೆ. ಚಲನಚಿತ್ರ ಪ್ರದರ್ಶನ ಕಾರ್ಯಾಚರಣೆಯ ವೆಚ್ಚ ಮತ್ತು ಕಡಿಮೆಯಾದ ಆದಾಯ ಸೇರಿದಂತೆ ಹಣಕಾಸಿನ ಸವಾಲುಗಳ ನಡುವೆ 2024ರ ಸಂಕ್ರಾಂತಿ ನಂತರ ಯಾವುದೇ ದೊಡ್ಡ ಚಿತ್ರಗಳು ಪ್ರೇಕ್ಷಕರನ್ನು ಥಿಯೇಟರ್ಗಳಿಗೆ ಸೆಳೆಯುವಲ್ಲಿ ಯಶಸ್ವಿಯಾಗಲಿಲ್ಲ.

ಕಳೆದ ಕೆಲವು ವಾರಗಳಲ್ಲಿ ತೆಲಂಗಾಣದಲ್ಲಿ ಚಲನಚಿತ್ರ ವ್ಯಾಪಾರಿಗಳು ಮೇ 17ರಿಂದ ಥಿಯೇಟರ್ ಗಳನ್ನು ಮುಚ್ಚುವ ನಿರ್ಧಾರವನ್ನು ಕೈಗೊಂಡರು. ಒಂದೆಡೆ ಲೋಕಸಭಾ ಚುನಾವಣೆ, ಇನ್ನೊಂದೆಡೆ ದೊಡ್ಡ ಚಿತ್ರಗಳ ಬಿಡುಗಡೆಗಳ ಕೊರತೆ, ಇಂಡಿಯನ್ ಪ್ರೀಮಿಯರ್ ಲೀಗ್ ಗಳು ತೆಲಂಗಾಣ ಮತ್ತು ಆಂಧ್ರಪ್ರದೇಶದಾದ್ಯಂತ ಥಿಯೇಟರ್ಗಳ ಮೇಲೆ ಭಾರಿ ಪ್ರಭಾವವನ್ನು ಬೀರಿದೆ. ಮೇ 31 ರಂದು ವಿಶ್ವಕ್ ಸೇನ್ ಅವರ 'ಗ್ಯಾಂಗ್ಸ್ ಆಫ್ ಗೋದಾವರಿ'ಗಾಗಿ ಸಿಂಗಲ್ ಸ್ಕ್ರೀನ್ ಥಿಯೇಟರ್ಗಳು ಮತ್ತೆ ತೆರೆಯಲ್ಪಡುತ್ತವೆ. ಅಲ್ಲದೆ ಅನೇಕ ಥಿಯೇಟರ್ಗಳು ಮತ್ತು ಮಲ್ಟಿಪ್ಲೆಕ್ಸ್ಗಳು 'ಕಲ್ಕಿ'ಯಂತಹ ದೊಡ್ಡ-ಬಜೆಟ್ ಚಿತ್ರಗಳ ಮೇಲೆ ಭರವಸೆ ಇಡುತ್ತಿವೆ.

2898 AD', 'ಪುಷ್ಪ: ದಿ ರೂಲ್', 'ಗೇಮ್ ಚೇಂಜರ್', 'ವಿಶ್ವಂಭರ' ಮತ್ತು 'ಇಂಡಿಯನ್ 2' ಸೇರಿದಂತೆ ಈ ಬಾರಿ ಹಲವು ಚಿತ್ರಗಳು ತೆರೆಗೆ ಬರುವ ನಿರೀಕ್ಷೆಯಲ್ಲಿದೆ.

# ಸೀತಾ ಮಾತೆ ಮಂದಿರ ನಿರ್ಮಾಣ ಮಾಡುತ್ತೇವೆ: ಸಚಿವ ಅಮಿತ್ ಶಾ



**ಬಿಹಾರ:** ಬಿಹಾರದಲ್ಲಿ ಲೋಕಚುನಾವಣೆ ಪ್ರಚಾರದಲ್ಲಿರುವ ಕೇಂದ್ರ ಗೃಹ ಸಚಿವ ಅಮಿತ್‌ಶಾ, ಒಂದು ಮಹತ್ವದ ಘೋಷಣೆ ಮಾಡಿದ್ದಾರೆ. ಬಿಹಾರದ ಸೀತಾಮರ್ಹಿಯಲ್ಲಿ ಸೀತಾ ಮಾತೆಯ ಮಂದಿರವನ್ನು ಬಿಜೆಪಿ ನಿರ್ಮಿಸಲಿದೆ ಎಂದು ಹೇಳಿದೆ. ರಾಮ ಮಂದಿರ ಆಯಿತು ಇನ್ನು ಸೀತಾ ಮಂದಿರವನ್ನು ನಿರ್ಮಾಣ ಮಾಡುತ್ತೇವೆ ಎಂದು ಹೇಳಿದ್ದಾರೆ. ನಾವು 'ವೋಟ್ ಬ್ಯಾಂಕ್'ಗೆ ಹೆದರುವುದಿಲ್ಲ. . ಅಯೋಧ್ಯೆಯಲ್ಲಿ ರಾಮಲಲ್ಲಾ ಮಂದಿರವನ್ನು ನಿರ್ಮಿಸಿದ ಪ್ರಧಾನಿ ಮೋದಿಗೆ ಈಗ ಉಳಿದಿರುವ ಕೆಲಸವೆಂದರೆ ಮಾ ಸೀತೆಯ ಜನ್ಮಸ್ಥಳದಲ್ಲಿ ದೊಡ್ಡ ಸ್ಮಾರಕವನ್ನು ನಿರ್ಮಿಸುವುದು. ರಾಮನನ್ನು ಮಂದಿರದಿಂದ ಹಾಗೂ ಆತನ ಜನ್ಮಸ್ಥಳದಿಂದ ದೂರವಿಟ್ಟರು. ಆದರೆ ಸೀತೆಯನ್ನು ಆಕೆಯ ಜನ್ಮಸ್ಥಳದಿಂದ ದೂರವಿಡಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಸೀತೆಯ ಜೀವನದಂತೆ ಆದರ್ಶಪ್ರಾಯವಾದ ದೇವಾಲಯವನ್ನು ಯಾರಾದರೂ ನಿರ್ಮಿಸಲು ಸಾಧ್ಯವಾದರೆ, ಅದು ನರೇಂದ್ರ ಮೋದಿ ಮತ್ತು ಬಿಜೆಪಿಯಿಂದ ಮಾತ್ರ ಸಾಧ್ಯ ಎಂದು ಹೇಳಿದ್ದಾರೆ. ಹಿಂದೂ ಪುರಾಣಗಳ ಪ್ರಕಾರ, ರಾಜ ಜನಕನು ಸೀತಾಮರ್ಹಿಯ ಬಳಿ ಹೊಲವನ್ನು ಉಳುಮೆ ಮಾಡುತ್ತಿದ್ದಾಗ, ಸೀತಾ ಮಾತೆ ಮಣ್ಣಿನ ಮಡಕೆಯಿಂದ ಜೀವವನ್ನು ಪಡೆಯುತ್ತಾಳೆ. ಜನವರಿಯಲ್ಲಿ ಅಯೋಧ್ಯೆಯಲ್ಲಿ ನಡೆದ ರಾಮಮಂದಿರದ ಶಂಕುಸ್ಥಾಪನೆ ಸಮಾರಂಭದ ಅಧ್ಯಕ್ಷತೆಯನ್ನು ಪ್ರಧಾನಿ ನರೇಂದ್ರ ಮೋದಿ ವಹಿಸಿದರು. ಇದೀಗ ಸೀತಾ ದೇವಿಯ ದೇವಸ್ಥಾನಕ್ಕಾಗಿ ಮತ್ತೊಮ್ಮೆ ಮೋದಿ ನೇತೃತ್ವ ವಹಿಸಲಿದ್ದಾರೆ ಎಂದು ಹೇಳಿದರು.

ಬಿಹಾರದ 40 ಕ್ಷೇತ್ರಗಳ ಪೈಕಿ ಸೀತಾಮರ್ಹಿ ಕೂಡ ಒಂದು, ಮೇ 20 ರಂದು ಐದನೇ ಹಂತದ ಲೋಕಸಭೆ ಚುನಾವಣೆ ನಡೆಯಲಿದೆ ಎಂದರು. ಈ ರ್ಯಾಲಿಯಲ್ಲಿ ಅಮಿತ್ ಶಾ, ಜನತಾ ದಳ ಮುಖ್ಯಸ್ಥ ಲಾಲು ಪ್ರಸಾದ್ ಅವರನ್ನು ಟೀಕಿಸಿದ್ದಾರೆ. ಇಂದು ಲಾಲು ಯಾದವ್ ರಾಜ್ಯದಲ್ಲಿ ಅಧಿಕಾರ ಉಳಿಸಿಕೊಳ್ಳಲು ತಮ್ಮ ಮಗನನ್ನು ಉಪಮುಖ್ಯಮಂತ್ರಿ ಮಾಡಿದ್ರು, ಆದರೆ ಇದೀಗ ಅವರ ಪರಿಸ್ಥಿತಿ ಏನಾಗಿದೆ ಎಂಬುದನ್ನು ನೀವು ನೋಡಬಹುದು ಎಂದು ಹೇಳಿದರು.

ಮೋದಿ ಸರ್ಕಾರ ಬಿಹಾರದ ಮಾಜಿ ಸಿಎಂ ಕರ್ಪೂರಿ ಠಾಕೂರ್ ಅವರಿಗೆ ಭಾರತ ರತ್ನ ನೀಡುತ್ತದೆ ಎಂದು ಕಾಂಗ್ರೆಸ್, ಆರ್‌ಜೆಡಿ ಎಂದಿಗೂ ಯೋಚಿಸಿರಲಿಲ್ಲ. ಬಿಹಾರಕ್ಕೆ 'ವಿಕಾಸರಾಜ್' ಬೇಕು, 'ಜಂಗಲ್ ರಾಜ್' ಅಲ್ಲ ಎಂದರು. 2019ರ ಲೋಕಸಭೆ ಚುನಾವಣೆಯಲ್ಲಿ ಬಿಹಾರದ 40 ಸ್ಥಾನಗಳಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ 39 ಸ್ಥಾನಗಳನ್ನು ಗೆದ್ದಿತ್ತು.

# ಕೇರಳ ನಂತರ ಕರ್ನಾಟಕಕ್ಕೆ ಮುಂಗಾರು ಪ್ರವೇಶ ಸಾಧ್ಯತೆ



**ನವದೆಹಲಿ:** ನೈಋತ್ಯ ಮುಂಗಾರು ಮೇ 31 ರಂದು ಕೇರಳ ಪ್ರವೇಶಿಸುವ ಸಾಧ್ಯತೆಯಿದೆ. ಇದು ಕೃಷಿ ಆಧಾರಿತ ಭಾರತದ ಆರ್ಥಿಕತೆಗೆ ನಿರ್ಣಾಯಕವಾದ ನಾಲ್ಕು ತಿಂಗಳ ಮಳೆಗಾಲಕ್ಕೆ ವೇದಿಕೆಯಾಗಿದೆ. ಈ ಬಾರಿ ನೈರುತ್ಯ ಮುಂಗಾರು ನಾಲ್ಕು ದಿನ ಏರು ಪೇರಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಬುಧವಾರ ತಿಳಿಸಿದೆ. ಕೇರಳ ಪ್ರವೇಶಿಸಿದ ಬಳಿಕ ಒಂದೆರಡು ದಿನಗಳಲ್ಲಿ ಕರ್ನಾಟಕದ ಕರಾವಳಿಗೂ ಮುಂಗಾರು ಪ್ರವೇಶಿಸುವ ನಿರೀಕ್ಷೆಯಿದೆ. ಕರ್ನಾಟಕದಲ್ಲಿ ಈಗಾಗಲೇ ಪೂರ್ವ ಮುಂಗಾರು ವೇಗ ಪಡೆದುಕೊಂಡಿದೆ. ಸಾಮಾನ್ಯವಾಗಿ ಕೇರಳಕ್ಕೆ ಮೇ 31 ರಂದು ಮುಂಗಾರು ಪ್ರವೇಶಿದರೆ ಕರ್ನಾಟಕಕ್ಕೆ ಎರಡು ದಿನದ ಬಳಿಕ ಮುಂಗಾರು ಪ್ರವೇಶವಾಗಲಿದೆ. ಜೂನ್ 3 ಅಥವಾ 4ರಂದು ಕರ್ನಾಟಕದ ಕರಾವಳಿಗೆ ಮುಂಗಾರು ಪ್ರವೇಶಿಸಲಿದ್ದು, ಬಳಿಕ ರಾಜ್ಯಾದ್ಯಂತ ವಿಸ್ತರಣೆಯಾಗಲಿದೆ ಎಂದು ಅಂದಾಜಿಸಲಾಗಿದೆ.

## ತೋಷಿಬಾದಿಂದ 4,000 ಉದ್ಯೋಗಗಳು ವಜಾ

**ದೆಹಲಿ:** ಹೊಸ ಮಾಲೀಕತ್ವದ ಅಡಿಯಲ್ಲಿ ಮಹತ್ವದ ಪುನರ್ರಚನೆ ಉಪಕ್ರಮದ ಭಾಗವಾಗಿ ತೋಷಿಬಾ ತನ್ನ ದೇಶೀಯ ಉದ್ಯೋಗಿಗಳನ್ನ 4,000 ಉದ್ಯೋಗಗಳವರೆಗೆ ಕಡಿತಗೊಳಿಸುವುದಾಗಿ ಗುರುವಾರ ಘೋಷಿಸಿದೆ ಎಂದು ಸುದ್ದಿ ಸಂಸ್ಥೆ ರಾಯಿಟರ್ಸ್ ವರದಿ ಮಾಡಿದೆ. ಖಾಸಗಿ ಈಕ್ವಿಟಿ ಸಂಸ್ಥೆ ಜಪಾನ್ ಇಂಡಸ್ಟ್ರಿಯಲ್ ಪಾರ್ಟ್ನರ್ಸ್ (ಎಐಪಿ) ನೇತೃತ್ವದ ಒಕ್ಕೂಟವು 13 ಬಿಲಿಯನ್ ಡಾಲರ್ ಸ್ವಾಧೀನಪಡಿಸಿಕೊಂಡ ನಂತರ ಡಿಸೆಂಬರ್'ನಲ್ಲಿ ತೋಷಿಬಾವನ್ನ ಪಟ್ಟಿಯಿಂದ ತೆಗೆದುಹಾಕಿದ ನಂತರ ಈ ಬೆಳವಣಿಗೆ ಸಂಭವಿಸಿದೆ. ಹೆಚ್ಚುವರಿಯಾಗಿ, ಕಂಪನಿಯು ತನ್ನ ಕಚೇರಿ ಕಾರ್ಯಗಳನ್ನ ಮಧ್ಯ ಟೋಕಿಯೊದಿಂದ ಕವಾಸಕಿಗೆ ಸ್ಥಳಾಂತರಿಸಲು ಯೋಜಿಸಿದೆ, ಮೂರು ವರ್ಷಗಳಲ್ಲಿ 10% ಕಾರ್ಯಾಚರಣೆ ಲಾಭಾಂಶವನ್ನ ಸಾಧಿಸುವ ಗುರಿಯನ್ನ ಹೊಂದಿದೆ.




## ಹೆಲಿಕಾಪ್ಟರ್‌ನಲ್ಲಿ ಸಿಎಂ ಶಿಂಧೆ ಹಣ ಸಾಗಿಸಿದ ಆರೋಪ

**ಮುಂಬೈ:** ನಾಸಿಕ್‌ನ ಪಂಚವಟಿಯಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರ ಲಗೇಜ್ ಅನ್ನು ಚುನಾವಣಾ ಆಯೋಗದ ಅಧಿಕಾರಿಗಳು ಗುರುವಾರ ಪರಿಶೀಲಿಸಿದ್ದಾರೆ. ಹೆಲಿಕಾಪ್ಟರ್ನಲ್ಲಿ ಶಿಂಧೆ ಅವರು ಹಣ ತುಂಬಿದ ಬ್ಯಾಗ್ಗಳನ್ನು ನಾಸಿಕ್ ಗೆ ಕೊಂಡೊಯ್ದಿದ್ದಾರೆ ಎಂದು ಶಿವಸೇನಾ(ಯುಬಿಟಿ) ಸಂಸದ ಸಂಜಯ್ ರಾವುತ್ ಸೋಮವಾರ ಆರೋಪಿಸಿದ ನಂತರ ಈ ಬೆಳವಣಿಗೆ ನಡೆದಿದೆ. ರಾವುತ್ ಅವರು ಫಿ ನಲ್ಲಿ ವೀಡಿಯೊವನ್ನು ಪೋಸ್ಟ್ ಮಾಡಿದ್ದಾರೆ, ಶಿಂಧೆ ಅವರು ನಾಸಿಕ್ ನಲ್ಲಿ ಹೆಲಿಕಾಪ್ಟರ್ನಿಂದ ಹೊರಬರುತ್ತಿದ್ದಾರೆ ಮತ್ತು ಅವರ ಸುತ್ತಲಿನ ಕೆಲವು ವ್ಯಕ್ತಿಗಳು ದೊಡ್ಡ ಚೀಲಗಳನ್ನು ಹೊತ್ತೊಯ್ಯುತ್ತಿದ್ದರು ಎಂದು ತಿಳಿಸಿದ್ದಾರೆ. ಗುರುವಾರ ನಾಸಿಕ್ ಗೆ ಆಗಮಿಸಿದ ನಂತರ ಶಿಂಧೆ ಅವರು ನಾಸಿಕ್ ಲೋಕಸಭಾ ಕ್ಷೇತ್ರವನ್ನು ಈ ಬಾರಿ ಹೆಚ್ಚಿನ ಅಂತರದಲ್ಲಿ ತಮ್ಮ ಪಕ್ಷ ಉಳಿಸಿಕೊಳ್ಳಲಿದೆ ಎಂದು ಹೇಳಿದರು. 2019 ರಲ್ಲಿ ರಾಜ್ಯ ಸಚಿವ ಛಗನ್ ಭುಜಬಲ್ ಅವರ ಸೋದರಳಿಯ ಎನ್ಸಿಪಿಯ ಸಮೀರ್ ಭುಜಬಲ್ ಅವರನ್ನು ಸುಮಾರು 3 ಲಕ್ಷ ಮತಗಳ ಅಂತರದಿಂದ ಸೋಲಿಸಿದ ಶಿವಸೇನಾ ಅಭ್ಯರ್ಥಿ ಮತ್ತು ಹಾಲಿ ಸಂಸದ ಹೇಮಂತ್ ಗೋಡ್ಸೆ ಪರ ಪ್ರಚಾರ ಮಾಡಲು ಶಿಂಧೆ ಇಲ್ಲಿಗೆ ಬಂದಿದ್ದರು.




# 50 ನವೋದ್ಯಮಗಳಿಗೆ ಅಮೆಜಾನ್ ನೆರವು




**ದೆಹಲಿ:** ಅಮೆಜಾನ್ ಇಂಡಿಯಾ ಕಂಪನಿಯು ಪ್ರೊಪೆಲ್ ಕಾರ್ಯಕ್ರಮದ ನಾಲ್ಕನೆಯ ಆವೃತ್ತಿಯನ್ನು ಘೋಷಿಸಿದೆ. ಈ ಕಾರ್ಯಕ್ರಮವು ಗ್ರಾಹಕ ಉತ್ಪನ್ನಗಳ ವಲಯದ ನವೋದ್ಯಮಗಳಿಗೆ ಜಾಗತಿಕ ಮಟ್ಟದಲ್ಲಿ ಉತ್ತೇಜನ ಒದಗಿಸುವ ಉದ್ದೇಶ ಹೊಂದಿದೆ. ಪ್ರೊಪೆಲ್ ಎಸ್4 ಕಾರ್ಯಕ್ರಮವು ಗರಿಷ್ಠ 50 ನವೋದ್ಯಮಗಳಿಗೆ ಅಂತರರಾಷ್ಟ್ರೀಯ ಮಾರುಕಟ್ಟೆಯನ್ನು ಪ್ರವೇಶಿಸಲು, ಭಾರತದ ಬ್ರ್ಯಾಂಡ್ಗಳನ್ನು ಜಾಗತಿಕ ಮಟ್ಟದಲ್ಲಿ ಬೆಳೆಸಲು ನೆರವು ಒದಗಿಸಲಿದೆ. ಈ ಕಾರ್ಯಕ್ರಮದಲ್ಲಿ ಭಾಗಿಯಾಗುವ ನವೋದ್ಯಮಗಳು 1.5 ಮಿಲಿಯನ್ ಡಾಲರ್ಗಿಂತ ಹೆಚ್ಚಿನ ಮೊತ್ತದ ಬಹುಮಾನ ಪಡೆಯಲು ಅವಕಾಶ ಇದೆ. ಎಡಬ್ಲ್ಯೂಎಸ್ ಕ್ರೆಡಿಟ್ಗಳು, ಆರು ತಿಂಗಳ ಅವಧಿಗೆ ಉಚಿತವಾಗಿ ಸರಕು ಸಾಗಣೆ ಸೌಲಭ್ಯ ಹಾಗೂ ಖಾತೆ ನಿರ್ವಹಣೆಗೆ ನೆರವು, ಮೊದಲ ಮೂವರು ವಿಜಯಿಗಳಿಗೆ ಅಮೆಜಾನ್ ಕಡೆಯಿಂದ ಒಟ್ಟು 1,00,000 ಡಾಲರ್ ನೆರವು ಇದರಲ್ಲಿ ಸೇರಿವೆ ಎಂದು ಅಮೆಜಾನ್ ಇಂಡಿಯಾ ಕಂಪನಿಯ ಜಾಗತಿಕ ವ್ಯಾಪಾರದ ನಿರ್ದೇಶಕ ಭೂಪೆನ್ ವಕಾಂಕರ್ ಹೇಳಿದ್ದಾರೆ. ಈ ಕಾರ್ಯಕ್ರಮಕ್ಕೆ ಅರ್ಜಿಯನ್ನು ಇಂದಿನಿಂದ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕಡೆಯ ದಿನ ಜೂನ್ 14, 2024. ಕಾರ್ಯಕ್ರಮದಲ್ಲಿ ಭಾಗಿಯಾಗಲು ಬಯಸುವವರು ತಮ್ಮ ಉದ್ಯಮದ ಸ್ವರೂಪದ ಬಗ್ಗೆ ಮಾಹಿತಿ ಒದಗಿಸಬೇಕಾಗುತ್ತದೆ.

ಗ್ರಾಹಕ ಬಳಕೆಯ ಉತ್ಪನ್ನಗಳ ವಲಯದಲ್ಲಿ ಇರುವ, ತಮ್ಮ ಉತ್ಪನ್ನಗಳನ್ನು ಜಾಗತಿಕ ಮಾರುಕಟ್ಟೆಗೆ ತಲುಪಿಸಬೇಕು ಎಂಬ ಬಯಕೆ ಹೊಂದಿರುವ ನವೋದ್ಯಮಗಳು ಈ ಕಾರ್ಯಕ್ರಮಕ್ಕೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ www.amazon.in/propelಗೆ ಭೇಟಿ ನೀಡಬಹುದು.

# ನಿದ್ರೆ ಬರುವ ಮಾತ್ರೆ ಬೆರೆಸಿ ಅರ್ಚಕನಿಂದ ಟಿವಿ ನಿರೂಪಕಿ ಮೇಲೆ ಅತ್ಯಾಚಾರ



**ಚೆನ್ನೈ:** ತಮಿಳುನಾಡಿನ ಖಾಸಗಿ ಟಿವಿ ಚಾನೆಲ್ನ ನಿರೂಪಕಿ, ಚೆನ್ನೈನ ಪ್ರಮುಖ ಅಮ್ಮನ್ ದೇವಸ್ಥಾನಗಳಲ್ಲಿ ಒಂದಾಗಿರುವ ಕಾಳಿಕಾಂಪಲ್ ದೇವಸ್ಥಾನದ ಅರ್ಚಕ ಕಾರ್ತಿಕ್ ಮುನಿಸ್ವಾಮಿ ವಿರುದ್ಧ ಅತ್ಯಾಚಾರದ ಆರೋಪ ಮಾಡಿದ್ದಾರೆ.

ಈ ಕುರಿತಾಗಿ ಅವರು ವಿರುಗಂಬಾಕ್ಕಂ ಮಹಿಳಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲು ಮಾಡಿದ್ದಾರೆ.

ನಿದ್ರೆ ಬರುವ ಮಾತ್ರೆಯನ್ನ ತೀರ್ಥದಲ್ಲಿ ಬೆರೆಸಿದ್ದ ಅರ್ಚಕ ಅದನ್ನು ನನಗೆ ನೀಡಿದ್ದ ಆ ಬಳಿಕ ನನ್ನ ಮೇಲೆ ಅತ್ಯಾಚಾರ ಎಸಗಿದ್ದಾನೆ ಎಂದು ನಿರೂಪಕಿ ತನ್ನ ದೂರಿನಲ್ಲಿ ತಿಳಿಸಿದ್ದಾಳೆ. ಪೊಲೀಸರು ನೀಡಿರುವ ಮಾಹಿತಿಯ ಪ್ರಕಾರ 30 ವರ್ಷದ ಟಿವಿ ಚಾನೆಲ್ ನಿರೂಪಕಿ ಸಾಲಿಗ್ರಾಮಮ್ ಮೂಲದವರಾಗಿದ್ದಾರೆ. ತಾವು ಆಧ್ಯಾತ್ಮಿಕ ವ್ಯಕ್ತಿಯಾಗಿದ್ದು ದೇವಸ್ಥಾನಗಳಿಗೆ ಭೇಟಿ ನೀಡುತ್ತಲೇ ಇರುತ್ತೇನೆ ಎಂದು ಹೇಳಿದ್ದಾರೆ. ಚೆನ್ನೈನ ಪರ್ಯಾಸ್ ಪ್ರದೇಶದಲ್ಲಿರುವ ಪ್ರಸಿದ್ಧ ಕಾಳಿಕಾಂಪಲ್ ದೇವಸ್ಥಾನಕ್ಕೆ ಸಾಮಾನ್ಯವಾಗಿ ಭೇಟಿ ನೀಡುತ್ತೇನೆ. ಈ ವೇಳೆ ಇದೇ ದೇವಸ್ಥಾನದ ಅರ್ಚಕ ಕಾರ್ತಿಕ್ ಮುನಿಸ್ವಾಮಿ ಜೊತೆ ಸ್ನೇಹ ಸಂಬಂಧ ಬೆಳೆದಿತ್ತು ಎಂದು ತಿಳಿಸಿದ್ದಾರೆ.

ಇಬ್ಬರ ನಡುವೆ ಆತ್ಮೀಯ ಸ್ನೇಹ ಬೆಳೆದ ಬಳಿಕ ಕಾರ್ತಿಕ್ ಮುನಿಸ್ವಾಮಿ, ದೇವಸ್ಥಾನದಲ್ಲಿ ಆಗುವ ಕಾರ್ಯಕ್ರಮಗಳ ಬಗ್ಗೆ ಹಾಗೂ ವಿಶೇಷ ಪೂಜೆಗಳ ಬಗ್ಗೆ ವಾಟ್ಸಾಪ್ ಮೂಲಕ ಸಂದೇಶಗಳನ್ನು ಕಳಿಸುತ್ತಿದ್ದ. ಆತ್ಮೀಯ ಸ್ನೇಹಿತರಾಗಿದ್ದ ಕಾರಣ, ದಿವ್ಯಾ ದೇವಸ್ಥಾನಕ್ಕೆ ಬಂದಾಗೆಲ್ಲಾ ಆಕೆಯನ್ನು ದೇವರ ಗರ್ಭಗುಡಿಗೆ ಕರೆದುಕೊಂಡು ಹೋಗಿ ಕಾರ್ತಿಕ್ ಮುನಿಸ್ವಾಮಿ ವಿಶೇಷ ದರ್ಶನ ನೀಡುತ್ತಿದ್ದ ಎಂದು ದೂರಿನಲ್ಲಿ ತಿಳಿಸಲಾಗಿದೆ.

# ಬೋರ್ಡ್ ಪರೀಕ್ಷೆಯಲ್ಲಿ 99.70% ಅಂಕ ಗಳಿಸಿದ ಹುಡುಗಿ ಮೆದುಳಿನ ರಕ್ತಸ್ರಾವಕ್ಕೆ ಬಲಿ

ಗಾಂಧಿನಗರ: ಬೋರ್ಡ್ ಪರೀಕ್ಷೆಯಲ್ಲಿ 99.70% ಅಂಕ ಗಳಿಸಿ ಟಾಪರ್ ಆಗಿದ್ದ ಗುಜರಾತ್ನ ಮೊರ್ಬಿಯ 16 ವರ್ಷದ ಹುಡುಗಿ ಮೆದುಳಿನ ರಕ್ತಸ್ರಾವದಿಂದ ಸಾವನ್ನಪ್ಪಿದ್ದಾರೆ ಗುಜರಾತ್ ಸೆಕೆಂಡರಿ ಮತ್ತು ಹೈಯರ್ ಸೆಕೆಂಡರಿ ಎಜುಕೇಶನ್ ಬೋರ್ಡ್ ಫಲಿತಾಂಶ ಮೇ 11 ರಂದು ಪ್ರಕಟವಾಗಿದೆ. ಹೀರ್ ಘೆಟಿಯಾ ಎಂಬಾಕೆ 10 ನೇ ತರಗತಿ ಪರೀಕ್ಷೆಯಲ್ಲಿ 99.70% ಅಂಕ ಗಳಿಸಿದ್ದಾಳೆ. ಆಕೆಗೆ ಮೆದುಳಿನ ರಕ್ತಸ್ರಾವವಾಗಿದ್ದು, ಒಂದು ತಿಂಗಳ ಹಿಂದೆ ರಾಜ್ಕೋಟ್ನ ಖಾಸಗಿ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದಳು. ಶಸ್ತ್ರಚಿಕಿತ್ಸೆಯ ನಂತರ ಡಿಸ್ಚಾರ್ಜ್ ಕೂಡ ಆಗಿ ಮನೆಗೆ ತೆರಳಿದ್ದರು. ವಾರದ ಹಿಂದೆ ಆಕೆಯಲ್ಲಿ ಮತ್ತೆ ಉಸಿರಾಟ ಮತ್ತು ಹೃದಯದ ತೊಂದರೆ ಕಾಣಿಸಿಕೊಂಡಿದೆ. ಕೂಡಲೇ ಆಕೆಯನ್ನು ಆಸ್ಪತ್ರೆಯಲ್ಲಿ ಐಸಿಯುಗೆ ದಾಖಲಿಸಲಾಯಿತು. ಎಂಆರ್‌ಐ ವರದಿಯಲ್ಲಿ 80% ರಿಂದ 90% ರಷ್ಟು ಆಕೆಯ ಮೆದುಳು ಕೆಲಸ ಮಾಡುವುದನ್ನು ನಿಲ್ಲಿಸಿದೆ ಎಂದು ತೋರಿಸಿದೆ. ಆಕೆಯ ಹೃದಯ ಕೆಲಸ ಮಾಡುವುದನ್ನು ನಿಲ್ಲಿಸಿದ ನಂತರ ಹೀರ್ ಬುಧವಾರ ನಿಧನರಾಗಿದ್ದಾರೆ.



# ಇಸ್ರೇಲಿ ಸೇನಾ ನೆಲೆಗಳ ಮೇಲೆ ಹಿಜ್ಬುಲ್ಲಾದಿಂದ ದಾಳಿ



**ಬೈರೂತ್:** ಲೆಬನಾನ್‌ನ ಪೂರ್ವ ಭಾಗದಲ್ಲಿ ಇಸ್ರೇಲಿ ಸೇನಾಪಡೆಗಳು ನಡೆಸಿದ ವಾಯುದಾಳಿಗೆ ಪ್ರತೀಕಾರವಾಗಿ ಇರಾನ್ ಬೆಂಬಲಿತ ಹಿಜ್ಬುಲ್ಲಾ ಹೋರಾಟಗಾರರು ಗುರುವಾರ ಇಸ್ರೇಲಿ ಸೇನಾ ನೆಲೆಗಳ ಮೇಲೆ 60ಕ್ಕೂ ಅಧಿಕ ರಾಕೆಟ್ ದಾಳಿಗಳನ್ನು ನಡೆಸಿದ್ದಾರೆ.

ದಕ್ಷಿಣ ಇಸ್ರೇಲ್‌ನಲ್ಲಿ, ಹಮಾಸ್ ಕಳೆದ ವರ್ಷದ ಅಕ್ಟೋಬರ್ 7ರಂದು ದಾಳಿ ನಡೆಸಿದಾಗಿನಿಂದ ಇಸ್ರೇಲ್ ಹಾಗೂ ಹಮಾಸ್ನ ಜೊತೆಗಾರ ಸಂಘಟನೆಯಾದ ಹಿಜ್ಬುಲ್ಲಾ ಹೋರಾಟಗಾರರ ನಡುವೆ ಹೆಚ್ಚುಕಮ್ಮಿ ಪ್ರತಿ ದಿನವೂ ಗುಂಡಿನ ಚಕಮಕಿ ನಡೆಯುತ್ತಲೇ ಇದೆ.

ಹಿಜ್ಬುಲ್ಲಾ ಹೋರಾಟಗಾರರು ಇಸ್ರೇಲಿ ಆಕ್ರಮಿತ ಗೋಲನ್ ಬೆಟ್ಟಗಳಲ್ಲಿರುವ ಹಲವಾರು ಇಸ್ರೇಲಿ ಮಿಲಿಟರಿ ನೆಲೆಗಳ ಮೇಲೆ 60ಕ್ಕೂ ಅಧಿಕ ಕತ್ಯುಶಾ ರಾಕೆಟ್ಗಳೊಂದಿಗೆ ಕ್ಷಿಪಣಿ ದಾಳಿಯನ್ನು ನಡೆಸಿದ್ದಾರೆಂದು ಆ ಗುಂಪಿನ ಹೇಳಿಕೆಯೊಂದು ತಿಳಿಸಿದೆ.

ಬುಧವಾರ ಮಧ್ಯರಾತ್ರಿಯಿಂದ ಲೆಬನಾನ್ನ ಬಾಲ್ಬೆಕ್ ಪ್ರದೇಶದ ಮೇಲೆ ಇಸ್ರೇಲ್ ವಾಯುದಾಳಿ ನಡೆಸಿತ್ತೆಂದು ಲೆಬನಾನ್ನ ಸರಕಾರಿ ಮಾಧ್ಯಮವೊಂದು ವರದಿ ಮಾಡಿದೆ.

ಇಸ್ರೇಲ್ ಸೇನೆಯ ದಾಳಿಯಲ್ಲಿ ನಾಗರಿಕನೊಬ್ಬನಿಗೆ ಸಣ್ಣಪುಟ್ಟ ಗಾಯಗಳಾಗಿವೆ ಹಾಗೂ ಬೆಂಕಿ ಅನಾಹುತ ಉಂಟಾಗಿದೆ ಎಂದು ಲೆಬನಾನ್ನ ಅಧಿಕೃತ ರಾಷ್ಟ್ರೀಯ ಸುದ್ದಿ ಏಜೆನ್ಸಿ (ಎನ್ಎನ್ಎ) ತಿಳಿಸಿದೆ. ಇಸ್ರೇಲ್ ವಾಯುದಾಳಿಯಿಂದಾಗಿ ಹಿಜ್ಬುಲ್ಲಾ ಶಿಬಿರಕ್ಕೂ ಹಾನಿಯಾಗಿದೆ ಎಂದು ಮೂಲಗಳು ತಿಳಿಸಿವೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಅವಕಾಶ ಸಿಕ್ಕರೆ ಕನ್ನಡದಲ್ಲಿ ನಟಿಸ್ತೇನೆ

'ಎ' ಚಿತ್ರದ ನೆನಪು ಮೆಲುಕು ಹಾಕಿದ ಚಾಂದಿನಿ





ಚಾಂದಿನಿ ಹೇಳಿಕೆ

ಅವಕಾಶ ಸಿಕ್ಕರೆ ಮತ್ತೆ ಕನ್ನಡ ಚಿತ್ರಗಳಲ್ಲಿ ನಟಿಸುವುದಾಗಿ ಹೇಳಿದ್ದಾರೆ ನಟಿ ಚಾಂದನಿ. ಹಲವಾರು ವರ್ಷಗಳಿಂದ ಸಿನಿಮಾ ರಂಗದಿಂದ ದೂರವಿದ್ದ ನಟಿ, ಇದೀಗ ಅವರ ನಟನೆಯ 'ಎ' ಸಿನಿಮಾ ಬಿಡುಗಡೆ ಆಗುವ ಹೊತ್ತಿನಲ್ಲಿ ಮತ್ತೆ ವಾಪಸ್ಸು ಸಿನಿಮಾಗೆ ಬರುವ ಮಾತುಗಳನ್ನು ಆಡಿದ್ದಾರೆ. ಜೊತೆಗೆ ತಮ್ಮ 'ಎ' ಚಿತ್ರದ ನೆನಪುಗಳನ್ನೂ ಹಂಚಿಕೊಂಡಿದ್ದಾರೆ.

ಕನ್ನಡ ಚಿತ್ರರಂಗದ ಸರ್ವಕಾಲಿಕ ಸೂಪರ್ ಹಿಟ್ ಚಿತ್ರ, ಉಪೇಂದ್ರ ನಿರ್ದೇಶನದ 'ಎ'. ಉಪೇಂದ್ರ ಅವರು ನಿರ್ದೇಶನದೊಂದಿಗೆ ನಾಯಕನಾಗೂ ನಟಿಸಿದ್ದ ಈ ಚಿತ್ರದ ನಾಯಕಿಯಾಗಿ ಚಾಂದಿನಿ ಅಭಿನಯಿಸಿದ್ದರು. 2024 ರ ಮೇ 17 ರಂದು 'ಎ' ಚಿತ್ರ ರೀ ರಿಲೀಸ್ ಆಗುತ್ತಿದೆ. ಇದು ನಾಯಕಿ ಚಾಂದಿನಿ ಜೀವನವನ್ನೇ ಬದಲಿಸಿದ ಒಂದು ಸಿನಿಮಾ. ಕನ್ನಡ ಚಿತ್ರರಂಗದ ಒಂದು ಮೈಲಿಗಲ್ಲು ಸಿನಿಮಾ ಅಂದರೆ ತಪ್ಪಾಗಲಾರದು. ಈ ರೀತಿಯಲ್ಲೂ ಸಿನಿಮಾ ಮಾಡಬಹುದು ಅಂತ ಸಿನಿಮಾ ಜಗತ್ತಿಗೆ ಉಪೇಂದ್ರ ರವರು ತೋರಿಸಿಕೊಟ್ಟರು. ಈ ಸಿನಿಮಾ ಆ ಕಾಲಕ್ಕೆ ಹೇಗೆ ಪ್ರಸ್ತುತವೋ, ಈ ಕಾಲಕ್ಕೂ ಕೂಡ ಈ ಸಿನಿಮಾ ಸಲ್ಲುತ್ತದೆ.

ನಾಯಕಿ ಚಾಂದಿನಿ 'ಎ' ಸಿನಿಮಾದಲ್ಲಿ ಹೇಗಿದ್ದರೋ, ಈಗಲು ಹಾಗೆ ಇದ್ದಾರೆ. ಅದಕ್ಕೆ ಅವರು ನೀಡುವ ಕಾರಣ, ನನ್ನ ಜೀವನವನ್ನೇ ಬದಲಿಸಿದಂತಹ ಸಿನಿಮಾ ಅದು. ಅದರಿಂದ ನನಗೆ ಸಿಕ್ಕ ಕನ್ನಡ ಜನರ ಪ್ರೀತಿ ಹಾಗು ಆ ಸಿನಿಮಾದ ಆ ಒಂದು ಫೇಮಸ್ ಡೈಲಾಗ್ "GOD IS GREAT" ' ಅನ್ನುವ ಹಾಗೆ, ಈ ಎರೆಡರ ಆಶೀರ್ವಾದದಿಂದ ನಾನು ಇವತ್ತಿಗೂ 'ಎ' ಚಾಂದಿನಿ ರೀತಿಯಲ್ಲೆ ಇದ್ದೀನಿ. ಕಾಲಘಟ್ಟವನ್ನೂ ಮೀರಿದ ಒಂದು ಅಪ್ರತಿಮ ಪ್ರೇಮ ಕಥೆ A ಅಂತಾರೆ ನಾಯಕಿ.

ಪ್ರಬುದ್ಧ ನಿರ್ದೇಶಕ ಉಪೇಂದ್ರ ಅವರ ನಿರ್ದೇಶನದ ಬಗ್ಗೆ ವರ್ಣಿಸಲು ಪದಗಳೇ ಇಲ್ಲ. ಅಂದಿಗು ಇಂದಿಗೂ ನನ್ನ ಮೆಚ್ಚಿನ ನಿರ್ದೇಶಕ ಉಪೇಂದ್ರ ಅವರು. ಗುರುಕಿರಣ್ ಅವರ ಸಂಗೀತದಲ್ಲಿ ಮೂಡಿಬಂದಿರುವ 'ಎ' ಚಿತ್ರದ ಹಾಡುಗಳು ಈಗಲೂ ಜನಪ್ರಿಯ. ಕನ್ನಡಿಗರು 'ಎ' ಚಿತ್ರದಿಂದ ಇಲ್ಲಿಯವರೆಗೂ ನನಗೆ ತೋರುತ್ತಿರುವ ಪ್ರೀತಿಗೆ ಚಿರ ಋಣಿ. ಇಂತಹ ಸೂಪರ್ ಹಿಟ್ ಚಿತ್ರದಲ್ಲಿ ನಟಿಸಲು ಅವಕಾಶ ನೀಡಿದ ನಿರ್ಮಾಪಕರಿಗೆ ಹಾಗೂ ನಿರ್ದೇಶಕರಿಗೆ ಧನ್ಯವಾದ ಎನ್ನುತ್ತಾರೆ.

# ನಿರ್ದೇಶನದತ್ತ ಐಶಾನಿ ಶೆಟ್ಟಿ

ಸ್ಯಾಂಡಲ್‌ವುಡ್ ಶಾಕುಂತಲೆ ಐಶಾನಿ ಶೆಟ್ಟಿ ಇದೀಗ ನಟನೆಯಿಂದ ನಿರ್ದೇಶನದತ್ತ ಹೊರಟಿದ್ದಾರೆ. ತಾವೇ ಬರೆದ ಕಥೆಯನ್ನು ದೃಶ್ಯ ರೂಪದಲ್ಲಿ ತೋರಿಸಲು ಸಜ್ಜಾಗಿದ್ದಾರೆ. ಈ ಮೂಲಕ ನಟಿ ಡೈರೆಕ್ಷನ್ ಕ್ಯಾಪ್ ತೊಟ್ಟಿದ್ದಾರೆ.

'ವಾಸ್ತು ಪ್ರಕಾರ' ಸಿನಿಮಾದ ನಟಿ ಐಶಾನಿ ಶೆಟ್ಟಿಗೆ ತಾವು ಬಹುದಿನಗಳಿಂದ ನಿರ್ದೇಶಕಿ ಆಗಬೇಕು ಎಂಬ ಕನಸಿತ್ತು. ಈಗ ಆ ಕನಸಿನತ್ತ ಹೆಜ್ಜೆ ಇಡ್ತಿದ್ದಾರೆ. ಅದಕ್ಕಾಗಿ 2 ವರ್ಷಗಳ ಕಾಲ ಶ್ರಮಿಸಿದ್ದಾರೆ. ಎರಡು ವರ್ಷಗಳ ಹಿಂದೆ ಹೊಳೆದ ಕಥೆಯ ಮೇಲೆ ಕೆಲಸ ಮಾಡಿ ಈಗ ನಟನೆಯ ಜೊತೆಗೆ ನಿರ್ದೇಶನ ಮಾಡಲು ರೆಡಿಯಾಗಿದ್ದಾರೆ.

ಈ ಹಿಂದೆ ಐಶಾನಿ 'ಕಾಜಿ' ಎಂಬ ಕಿರುಚಿತ್ರ ನಿರ್ದೇಶನ ಮಾಡಿದ್ದರು. ಅದು ಹಲವು ಚಿತ್ರೋತ್ಸವದಲ್ಲಿ ಆಯ್ಕೆಯಾಗಿ, ಮೆಚ್ಚುಗೆ ಕೂಡ ಪಡೆಯಿತು. ಈಗ ಮೊದಲ ಚಲನಚಿತ್ರ ನಿರ್ದೇಶನ ಮಾಡಲು ತಯಾರಿ ಮಾಡಿಕೊಂಡಿದ್ದಾರೆ. ನಮ್ಮೂರಿನ ಭಾಗದಲ್ಲಿ ನಡೆಯುವ ಕಥೆಯಿದು. ಕಂಟೆಂಟ್ ಇರುವಂಥ ಕಮರ್ಷಿಯಲ್ ಚಿತ್ರವಿದು. ಇದರಲ್ಲಿ ಹೀರೊ ಅಥವಾ ಹೀರೋಯಿನ್ ಇರುವುದಿಲ್ಲ. ಕಥೆಯೇ ಮುಖ್ಯ ಪಾತ್ರ. ಸದ್ಯಕ್ಕೆ ಈ ಚಿತ್ರದ ಫೈನಲ್ ಡ್ರಾಫ್ಟ್ ರೆಡಿಯಾಗಿದ್ದು, ಶೀಘ್ರದಲ್ಲೇ ಪ್ರಿ ಪ್ರೊಡಕ್ಷನ್ ಕೆಲಸ ಶುರುವಾಗಲಿದೆ ಎಂದು ಐಶಾನಿ ತಮ್ಮ ಮುಂದಿನ ಯೋಜನೆಗಳ ಬಗ್ಗೆ ಹಂಚಿಕೊಂಡಿದ್ದಾರೆ.

ಜೂನ್ ನಲ್ಲಿ ಚಿತ್ರದ ಬಗ್ಗೆ ಅಧಿಕೃತ ಘೋಷಣೆ



ನಮ್ಮ ಸಿನಿಮಾ ಹೆಣ್ಣು ಮಕ್ಕಳ ಪರವಾಗಿ ಇರುವಂತಹ ಕಥೆ. ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಚಿತ್ರೀಕರಣ ನಡೆಯಲಿದೆ. ಇದೇ ಜೂನ್ ಅಂತ್ಯದಲ್ಲಿ ಸಿನಿಮಾ ಬಗ್ಗೆ ಅಧಿಕೃತ ಮಾಹಿತಿ ನೀಡೋದಾಗಿ ನಟಿ ತಿಳಿಸಿದ್ದಾರೆ. 'ವಾಸ್ತು ಪ್ರಕಾರ' ಸಿನಿಮಾದ ಮೂಲಕ ಪರಿಚಿತರಾದ ಐಶಾನಿ, ಪ್ಲಸ್, ರಾಕೇಟ್, ನಡುವೆ ಅಂತರವಿರಲಿ, ನಮ್ ಗಣಿ ಬಿಕಾಂ ಪಾಸ್, ಧರಣಿ ಮಂಡಲ ಮಧ್ಯದೊಳಗೆ, ಹೊಂದಿಸಿ ಬರೆಯಿರಿ ಸಿನಿಮಾಗಳಲ್ಲಿ ನಾಯಕಿಯಾಗಿ ನಟಿಸಿದ್ದಾರೆ.



# 'ಮ್ಯಾಕ್ಸ್' ಶೂಟಿಂಗ್ ಮುಗಿಸಿದ ಕಿಚ್ಚ ಸುದೀಪ್

ಸ್ಯಾಂಡಲ್‌ವುಡ್ ನಟ ಕಿಚ್ಚ ಸುದೀಪ್ ಇದೀಗ 'ಮ್ಯಾಕ್ಸ್' ಸಿನಿಮಾದ ಮೂಲಕ ಎಂಟ್ರಿ ಕೊಡುತ್ತಿದ್ದಾರೆ. 'ಮ್ಯಾಕ್ಸ್' ಚಿತ್ರದ ಕೊನೆಯ ದಿನದ ಶೂಟಿಂಗ್ ವಿಡಿಯೋವನ್ನು ಹಂಚಿಕೊಂಡು ಚಿತ್ರತಂಡಕ್ಕೆ ಸುದೀಪ್ ಧನ್ಯವಾದ ತಿಳಿಸಿದ್ದಾರೆ. ಈ ಚಿತ್ರದಲ್ಲಿ ಪೊಲೀಸ್ ಅಧಿಕಾರಿ ಅರ್ಜುನ್ ಮಹಾಕ್ಷಯ್ ಪಾತ್ರದಲ್ಲಿ ಸುದೀಪ್ ನಟಿಸಿದ್ದಾರೆ. ಮಹಾಬಲಿಪುರಂನಲ್ಲಿ ಮ್ಯಾಕ್ಸ್ ಚಿತ್ರದ ಶೂಟಿಂಗ್ ಭರದಿಂದ ಸಾಗುತ್ತಿದೆ. ಈ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ಸುದೀಪ್ ಮಾಹಿತಿ ಹಂಚಿಕೊಂಡಿದ್ದಾರೆ. ಇದು ಸುದೀರ್ಘ 10 ತಿಂಗಳ ಪ್ರಯಾಣವಾಗಿದೆ. ನಾನು ಪ್ರತಿ ಕ್ಷಣ ಎಂಜಾಯ್ ಮಾಡಿದ್ದೇನೆ. ಅದ್ಭುತ ತಂಡ ಮತ್ತು ಕಲಾವಿದರ ಜೊತೆ ಕೆಲಸ ಮಾಡಿರೋದಾಗಿ ತಿಳಿಸಿದ್ದಾರೆ. ನನ್ನ ಚೆನ್ನಾಗಿ ಹೋಸ್ಟ್ ಮಾಡಿದ್ದಕ್ಕಾಗಿ ಧನ್ಯವಾದಗಳು ಧನು ಸರ್ ಎಂದು ಸುದೀಪ್ ಬರೆದುಕೊಂಡಿದ್ದಾರೆ. ನಿರ್ದೇಶಕ ವಿಜಯ್‌ಗೆ ಸುದೀಪ್ ಥ್ಯಾಂಕ್ಯೂ ಎಂದಿದ್ದಾರೆ. ಈ ಮೂಲಕ 'ಮ್ಯಾಕ್ಸ್' ಸಿನಿಮಾ ಕಡೆಯ ದಿನ ಶೂಟಿಂಗ್ ವಿಡಿಯೋ ಶೇರ್ ಮಾಡಿದ್ದಾರೆ. ಅಂದಹಾಗೆ, ಸುದೀಪ್ ಜೊತೆ ವರಲಕ್ಷ್ಮಿ ಶರತ್ ಕುಮಾರ್, ಸಂಯುಕ್ತಾ ಹೊರನಾಡ್, ಸುಕೃತಾ, ಅನಿರುದ್ಧ ಭಟ್ ಸೇರಿದಂತೆ ಅನೇಕರು ನಟಿಸಿದ್ದಾರೆ. ಅಂದಹಾಗೆ, ವಿಕ್ರಾಂತ್ ರೋಣ ಚಿತ್ರದ ನಂತರ 'ಮ್ಯಾಕ್ಸ್' ಸಿನಿಮಾದ ಮೂಲಕ ಬರುತ್ತಿರೋ ಸುದೀಪ್ ನಟನೆಯ ಈ ಚಿತ್ರದ ಮೇಲೆ ಅಭಿಮಾನಿಗಳಿಗೆ ಭಾರೀ ನಿರೀಕ್ಷೆಯಿದೆ.






# ಸಿಎಸ್‌ಕೆಗೆ ಗುಡ್‌ನ್ಯೂಸ್, ಆರ್‌ಸಿಬಿಗೆ ಬ್ಯಾಡ್ ನ್ಯೂಸ್

ಕ್ರೀಡೆ



ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತುಚೆನ್ನೈ ಸೂಪರ್‌ಕಿಂಗ್ಸ್ ನಡುವಿನ ಮಹಾಕಾಳಗ ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿದೆ. ಈ ಹೈವೋಲ್ಟೇಜ್ ಪಂದ್ಯವನ್ನು ಕಣ್ತುಂಬಿಕೊಳ್ಳಲು ಕಾದುಕುಳಿತಿರುವ ಕೋಟ್ಯಂತರ ಆರ್‌ಸಿಬಿ ಅಭಿಮಾನಿಗಳಿಗೆ ಮಳೆ ನಿರಾಸೆ ಮೂಡಿಸಲಿದೆಯೇ ಎಂಬ ಆತಂಕ ಶುರುವಾಗಿದೆ.

ಬೆಂಗಳೂರಿನಲ್ಲಿ ಮುಂದಿನ 5 ದಿನಗಳ ಕಾಲವೂ ಭಾರೀ ಮಳೆಯಾಗಲಿದ್ದು, ಆರೆಂಜ್ ಅಲರ್ಟ್ ಘೋಷಿಸಲಾಗಿದೆಎಂದು ಹವಾಮಾನ ಇಲಾಖೆ ತಿಳಿಸಿದೆ. ಇದರಿಂದ ಶನಿವಾರ ನಡೆಯಲಿರುವ ಆರ್ ಸಿಬಿ ವರ್ಸಸ್ ಚೆನ್ನೈನಡುವಿನ ನಾಕೌಟ್ ಪಂದ್ಯಕ್ಕೆಅಡ್ಡಿಉಂಟಾಗಲಿದೆ ಎಂದು ಹೇಳಲಾಗಿದೆ.

5 ದಿನಗಳ ವಾತಾವರಣ ಹೇಗಿರಲಿದೆ?: ಬೆಂಗಳೂರಿನಲ್ಲಿ ಶುಕ್ರವಾರಗರಿಷ್ಠ 27ಲಿ ಕನಿಷ್ಠ 21ಲಿ ಸೆಲ್ಸಿಯಸ್‌ತಾಪಮಾನಇರಲಿದೆ. ಹಾಗೆಯೇ ಶನಿವಾರಗರಿಷ್ಠ 28ಲಿ ಕನಿಷ್ಠ 22ಲಿ, ಭಾನುವಾರಗರಿಷ್ಠ 28ಲಿ ಕನಿಷ್ಠ 22ಲಿ, ಸೋಮವಾರಗರಿಷ್ಠ 28ಲಿ ಕನಿಷ್ಠ 21ಲಿ, ಮಂಗಳವಾರಗರಿಷ್ಠ 29ಲಿ ಕನಿಷ್ಠ 21ಲಿಸೆಲ್ಸಿಯಸ್‌ತಾಪಮಾನಇರಲಿದ್ದು, ಐದುದಿನವೂಭಾರೀಮಳೆಯಾಗಲಿದೆ. ಶನಿವಾರ ಸಂಜೆ ವೇಳೆಗೆ ಭಾರೀ ಮಳೆಯಾಗುವ ಸಾಧ್ಯತೆ ಹೆಚ್ಚಾಗಿಯೇಇದೆಎಂದು ಹವಾಮಾನ ಇಲಾಖೆ ತಿಳಿಸಿದೆ.ಆರ್‌ಸಿಬಿಗೆ ಈ ಪಂದ್ಯ ನಿರ್ಣಾಯಕವಾಗಿರುವುದರಿಂದರಾತ್ರಿ 8 ರಿಂದ 12 ಗಂಟೆವರೆಗೆ ಮಳೆ ಬಿಡುವುಕೊಟ್ಟರೆ ಪೂರ್ಣ ಪಂದ್ಯ ನಡೆಯಲಿದೆ.

## ಪಂದ್ಯವಾಡದೆಯೇ ಪ್ಲೇಆಫ್ ತಲುಪುತ್ತಾ ಸಿಎಸ್‌ಕೆ?

**13 ಪಂದ್ಯಗಳಲ್ಲಿ 7 ರಲ್ಲಿ ಗೆಲುವು ಸಾಧಿಸಿರುವ ಸಿಎಸ್‌ಕೆ ಉತ್ತಮ ನೆಟ್‌ರನ್‌ರೇಟ್‌ನೊಂದಿಗೆ 3ನೇ ಸ್ಥಾನದಲ್ಲಿದೆ. ಒಂದು ವೇಳೆ ಮುಂದಿನ ಪಂದ್ಯ ಮಳೆಯಿಂದ ರದ್ದಾದರೂ ಸಿಎಸ್‌ಕೆ ಒಂದು ಅಂಕ ಪಡೆದು ಪ್ಲೇಆಫ್ ತಲುಪಲಿದೆ.ಆದ್ರೆ 13 ಪಂದ್ಯಗಳಲ್ಲಿ 6ರಲ್ಲಿ ಗೆಲುವು ಸಾಧಿಸಿರುವ ಆರ್‌ಸಿಬಿ 6ನೇ ಸ್ಥಾನದಲ್ಲಿದೆ.ಒಂದು ವೇಳೆ ಆರ್‌ಸಿಬಿ ರನ್‌ಚೇಸ್ ಮಾಡಿದರೆ 18.1 ಓವರ್‌ಗಳ ಒಳಗೆ ಗೆಲ್ಲಬೇಕು.ಮೊದಲು ಬ್ಯಾಟ್ ಮಾಡಿದರೆಕನಿಷ್ಠ 18 ರನ್‌ಗಳಿಂದ ಗೆಲ್ಲಬೇಕು.ಆಗ?ೀ ಆರ್‌ಸಿಬಿಗೆ ಗೆಲ್ಲುವಅವಕಾಶವಿದೆಎಂದುಕ್ರಿಕೆಟ್‌ತಜ್ಞರು ಅಂದಾಜಿಸಿದ್ದಾರೆ. ಮಳೆಯಿಂದ ಪಂದ್ಯರದ್ದಾದರೆಒಂದುಅಂಕದೊಂದಿಗೆ ಪ್ಲೇಆಫ್ ನಿಂದ ಹೊರಗುಳಿಯಲಿದೆ.**

## ಸಬ್‌ಏರ್ ಸಿಸ್ಟಮ್ ಕೈಹಿಡಿಯುತ್ತಾ

**ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಎಷ್ಟೇ ಮಳೆಯಾದರೂ, ಮಳೆ ನಿಂತ ನಂತರ ಕೆಲವೇ ನಿಮಿ?ಗಳಲ್ಲಿ ಪಂದ್ಯಗಳು ಆರಂಭಿಸಬಹುದಾಗಿದೆ. ಉದಾಹರಣೆಗೆ ಒಂದುಗಂಟೆ ಭಾರೀ ಮಳೆ ಸುರಿದರೆ ಕೇವಲ 7 ನಿಮಿಷಗಳಲ್ಲಿ ಪಂದ್ಯವನ್ನುಆರಂಭಿಸಬಹುದು.ಕ್ರೀಡಾಂಗಣದಲ್ಲಿ ಸಬ್‌ಏರ್ ಸಿಸ್ಟಂ ಅಳವಡಿಕೆಯಾಗಿದ್ದು ಕೂಡಲೇ ನೀರನ್ನು ಹೊರ ಹಾಕಲಾಗುತ್ತದೆ.ಬಿಸಿ ಗಾಳಿಯನ್ನು ಹಾಯಿಸಿ ಮೈದಾನವನ್ನ ಒಣಗಿಸುವ ವ್ಯವಸ್ಥೆಯಿದೆ. 4.5 ಕೋಟಿರೂ. ವೆಚ್ಚದಲ್ಲಿ ಈ ವ್ಯವಸ್ಥೆಯನ್ನು ಅಳವಡಿಸಲಾಗಿದೆ. ಆದ್ದರಿಂದ ಮಳೆಯು 9 ಗಂಟೆ ವೇಳೆಗೆ ಬಿಡುವುಕೊಟ್ಟರುಕನಿಷ್ಠ ಓವರ್‌ಗಳ ಮಿತಿಯಲ್ಲಿ 9:30 ರಿಂದ ಪಂದ್ಯಆರಂಭಿಸಬಹುದಾಗಿದೆಎಂದುತಜ್ಞರು ಸಲಹೆ ನೀಡಿದ್ದಾರೆ.**

# ಸನ್ ರೈಸರ್ಸ್ ಪ್ಲೇಆಫ್‌ಗೆ, ಟೈಟಾನ್ಸ್ ಮನೆಗೆ




ಇಲ್ಲಿನ ರಾಜೀವ್‌ಗಾಂಧಿ ಕ್ರೀಡಾಂಗಣದಲ್ಲಿ ನಡೆಯಬೇಕಿದ್ದ ಗುಜರಾತ್ ಟೈಟಾನ್ಸ್ ಮತ್ತು ಸನ್‌ರೈಸರ್ಸ್ ಹೈದರಾಬಾದ್ ನಡುವಿನ ಪಂದ್ಯವು ಮಳೆಯಿಂದ ರದ್ದಾಗಿದೆ.ಪಂದ್ಯರದ್ದಾದ ಹಿನ್ನೆಲೆಉಭಯ ತಂಡಗಳು ತಲಾಒಂದೊಂದು ಅಂಕ ಪಡೆದುಕೊಂಡಿವೆ. ಇದರೊಂದಿಗೆ ಸನ್‌ರೈಸರ್ಸ್ ಹೈದರಾಬಾದ್‌ತಂಡವು ಪ್ಲೇಆಫ್‌ಗೆಅಧಿಕೃತವಾಗಿ ಪ್ರವೇಶ ಗಿಟ್ಟಿಸಿಕೊಂಡಿದೆ. ಈಗಾಗಲೇ ಕೋಲ್ಕತ್ತಾ ನೈಟ್‌ರೈಡರ್ಸ್, ರಾಜಸ್ಥಾನ್‌ರಾಯಲ್ಸ್ ಪ್ಲೇಆಫ್‌ಗೆಎಂಟ್ರಿಕೊಟ್ಟಿದ್ದು, ಸನ್‌ರೈಸರ್ಸ್ ಹೈದರಾಬಾದ್ 2024ರ ಆವೃತ್ತಿಯಲ್ಲಿ ಪ್ಲೇಆಫ್‌ಗೆಎಂಟ್ರಿಕೊಟ್ಟ 3ನೇ ತಂಡವಾಗಿದೆ. ಇನ್ನೊಂದುತಂಡಕ್ಕೆ ಪ್ಲೇಆಫ್ ಪ್ರವೇಶಿಸುವ ಅವಕಾಶವಿದೆ.ಶನಿವಾರ ಬೆಂಗಳೂರು ಚಿನ್ನಸ್ವಾಮಿಕ್ರೀಡಾಂಗಣದಲ್ಲಿ ನಡೆಯುವ ಪಂದ್ಯದಲ್ಲಿಚೆನ್ನೈ ಸೂಪರ್‌ಕಿಂಗ್ಸ್ ವಿರುದ್ಧ ಆರ್‌ಸಿಬಿ ಉತ್ತಮರನ್‌ರೇಟ್‌ನೊಂದಿಗೆಗೆದ್ದರೆ ಪ್ಲೇಆಫ್‌ಗೆಎಂಟ್ರಿಕೊಡಲಿದೆ.ಒಂದು ವೇಳೆ ಮಳೆಯಿಂದ ಪಂದ್ಯರದ್ದಾದರೆಚೆನ್ನೈ ಪ್ಲೇಆಫ್‌ಗೆ ಲಗ್ಗೆಯಿಡಲಿದೆ. 2022ರಲ್ಲಿ ಐಪಿಎಲ್‌ಗೆ ಪದಾರ್ಪಣೆ ಮಾಡಿದಗುಜರಾತ್ ಟೈಟಾನ್ಸ್‌ತನ್ನ ಚೊಚ್ಚಲ ಆವೃತ್ತಿಯಲ್ಲೇಟ್ರೋಫಿ ಮುಡಿಗೇರಿಸಿಕೊಂಡಿತ್ತು.2ನೇ ಆವೃತ್ತಿಯಲ್ಲಿ ಹಾರ್ದಿಕ್ ಪಾಂಡ್ಯ ನಾಯಕತ್ವದಲ್ಲಿರನ್ನರ್ ಅಪ್ ಪ್ರಶಸ್ತಿಗೆ ತೃಪ್ತಿಪಟ್ಟುಕೊಂಡಿತ್ತು.ಆದ್ರೆ 2024ರ ಆವೃತ್ತಿಯಲ್ಲಿ 12ರಲ್ಲಿ 5 ಪಂದ್ಯಗೆದ್ದು ಪ್ಲೇಆಫ್ ಕನಸು ಕಂಡಿದ್ದಗುಜರಾತ್‌ತಂಡಕ್ಕೆ ಮಳೆ ತಣ್ಣೀರುಎರಚಿತು.ತನ್ನ ಪಾಲಿನ ಕೊನೆಯಎರಡೂ ಪಂದ್ಯಗಳೂ ಮಳೆಯಿಂದ ರದ್ದಾದ ಹಿನ್ನೆಲೆಯಲ್ಲಿಒಂದೊಂದು ಅಂಕ ಪಡೆದುಕೊಂಡು ಲೀಗ್ ಸುತ್ತಿನಲ್ಲೇತನ್ನ ಆಟ ಮುಗಿಸಿತು. 12 ಪಂದ್ಯಗಳಲ್ಲಿ 7ರಲ್ಲಿ ಗೆಲುವು ಸಾಧಿಸಿದ್ದ ಸನ್‌ರೈಸರ್ಸ್ ಹೈದರಾಬಾದ್‌ತಂಡ 13ನೇ ಪಂದ್ಯರದ್ದಾದರೂಒಂದು ಅಂಕ ಪಡೆದು ಪ್ಲೇಆಫ್‌ಗೆಅರ್ಹತೆ ಗಿಟ್ಟಿಸಿಕೊಂಡಿದೆ. ಒಟ್ಟು 13 ಪಂದ್ಯಗಳಲ್ಲಿ 7 ರಲ್ಲಿ ಗೆಲುವು ಸಾಧಿಸಿರುವ ಹೈದರಾಬಾದ್ 15 ಅಂಕಗಳೊಂದಿಗೆ ಪ್ಲೇಆಫ್ ಪ್ರವೇಶಿಸಿದೆ.

## ಜಾಮೀನು ಅರ್ಜಿ ವಜಾಗೊಂಡರೂ ಮೊದಲ

# ಐವರು ಆರೋಪಿಗಳ ಬಂಧನವಾಗಿಲ್ಲ

**ಹಾಸನ:** ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾದ ಅಶ್ಲೀಲ ವೀಡಿಯೋಗಳ ಪೆನ್‌ಡ್ರೈವ್ ವೈರಲ್ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡ ನಡೆ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಹಾಸನದ ಸೈಬರ್ ಕ್ರೈಂ ಠಾಣೆಯಲ್ಲಿ ದಾಖಲಾದ 33/2024 ಪ್ರಕರಣಕ್ಕೆ ಹೊಸ ಹೆಸರು ಸೇರಿಸಿ ಇಬ್ಬರನ್ನು ಬಂಧಿಸಲಾಗಿದೆ. 6 ಮತ್ತು 7 ನೇ ಆರೋಪಿಗಳಾಗಿ ಚೇತನ್ ಹಾಗೂ ಲಿಖಿತ್ ಬಂಧನ ಮಾಡಲಾಗಿದೆ.6 ಮತ್ತು 7ನೇ ಆರೋಪಿ ಬಂಧನವಾದರೂ ಮೊದಲ ಐವರು ಆರೋಪಿಗಳನ್ನು ಇನ್ನೂ ಬಂಧಿಸಿಲ್ಲ.

ಕಾಂಗ್ರೆಸ್ ಕಾರ್ಯಕರ್ತರಾದ ನವೀನ್ ಗೌಡ, ಚೇತನ್ ಹಾಗೂ ಪುಟ್ಟಿ ಅಲಿಯಾಸ್ ಪುಟ್ಟರಾಜ್ ರನ್ನ ಎಸ್‌ಐಟಿ ಅಧಿಕಾರಿಗಳು ಈವರೆಗೂ ಬಂಧಿಸಿಲ್ಲ. ಅಲ್ಲದೇ ಪೆನ್‌ಡ್ರೈವ್ ಹೊಂದಿದ್ದ ಮೂಲ ವ್ಯಕ್ತಿಯಗಿರುವ ಸಂಸದನ ಮಾಜಿ ಕಾರು ಚಾಲಕನನ್ನೂ ಕೂಡ ತನಿಖಾ ತಂಡ ವಶಕ್ಕೆ ಪಡೆಯದೇ ಇರುವುದು ಕುತೂಹಲ ಮೂಡಿಸಿದೆ.



ಮಾಜಿ ಶಾಸಕ ಪ್ರೀತಂಗೌಡ ಅತ್ಯಾಪ್ತ ಶರತ್ ಅಲಿಯಾಸ್ ಕ್ವಾಲಿಟಿ ಬಾರ್ ಶರತ್ ಕೂಡ ಇದೇ ಪ್ರಕರಣದಲ್ಲಿ ಆರೋಪಿಯಾಗಿದ್ದಾರೆ. ಹಾಸನದ ಮೂರನೇ ಅಧಿಕ ಜಿಲ್ಲಾ ಸತ್ರ ನ್ಯಾಯಾಲಯದಲ್ಲಿ ಕಾರ್ತಿಕ್, ಚೇತನ್, ನವೀನ್ ಗೌಡಹಾಗೂಪುಟ್ಟರಾಜ್ ನಿರೀಕ್ಷಣಾ ಜಾಮೀನು ಅರ್ಜಿ ವಜಾ ಆಗಿದೆ. ಇವರುಗಳ ಜಾಮೀನು ಅರ್ಜಿ ವಜಾಗೊಂಡರೂ ಬಂಧನ ಮಾತ್ರ ಆಗಿಲ್ಲ. ಈಗಾಗಲೇ ಎಸ್‌ಐಟಿ ಎಲ್ಲಾ ಆರೋಪಿಗಳ ಮನೆ ಶೋಧ ನಡೆಸಿದೆ.ಇಷ್ಟಾದರೂ ವೀಡಿಯೋ ವೈರಲ್ ಆರೋಪದ ಆರೋಪಿಗಳನ್ನು ಎಸ್‌ಐಟಿ ಬಂಧಿಸಿದೇ ಅಚ್ಚರಿ ಮೂಡಿಸಿದೆ. ಎಫ್ ಐಆರ್ ನಲ್ಲಿ ಹೆಸರಿದ್ದ ಐವರು ಆರೋಪಿಗಳ ಬಂಧನವಾಗದಿರುವ ಬಗ್ಗೆ ಜೆಡಿಎಸ್ ನಾಯಕರು ತೀವ್ರ ಆಕ್ರೋಶ ಹೊರಹಾಕಿದ್ದಾರೆ.ಈ ಹಿಂದೆಯೇ ಐವರು ಆರೋಪಿಗಳ ಬಂಧನಕ್ಕೆ ಜೆಡಿಎಸ್ ಆಗ್ರಹಿಸಿತ್ತು.ಪ್ರಕರಣದ ತನಿಖೆ ಚುರುಕುಗೊಂಡರೂ ಆರೋಪಿಗಳ ಬಂಧನವಾಗದಿರುವ ಬಗ್ಗೆ ಚರ್ಚೆ ಶುರುವಾಗಿದೆ.

# 10 ಪೆನ್‌ಡ್ರೈವ್, ಹಾರ್ಡ್ ಡಿಸ್ಕ್‌ಪತ್ತೆ

**ಹಾಸನ:** ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿ ಹಾಸನ ಜಿಲ್ಲೆಯ ವಿವಿಧೆಡೆ ದಾಳಿ ನಡೆಸಿರುವ ವಿಶೇಷ ತನಿಖಾ ತಂಡಕ್ಕೆ ಬಿಜೆಪಿ ನಾಯಕ ಪ್ರೀತಂ ಗೌಡ ಆಪ್ತರ ಮನೆಯಲ್ಲಿ 10 ಪೆನ್‌ಡ್ರೈವ್‌ಗಳು, ಹಾರ್ಡ್ ಡಿಸ್ಕ್‌ಪತ್ತೆಯಾಗಿವೆ. ಪ್ರೀತಂ ಗೌಡ ಆಪ್ತರು ಮತ್ತುಪ್ರಕರಣದ ಸಂಬಂಧ ಈಗಾಗಲೇ ಬಂಧಕ್ಕೊಳಗಾಗಿರುವವರ ಮನೆಗಳಮೇಲೆ ಎಸ್‌ಐಟಿ ದಾಳಿನಡೆಸಿತ್ತು. ಈಗ ವಶಕ್ಕೆ ಪಡೆದಿರುವ ಪೆನ್‌ಡ್ರೈವ್‌ಗಳನ್ನು ಎಸ್‌ಐಟಿ ವಿಧಿವಿಜ್ಞಾನಪ್ರಯೋಗಾಲಯಕ್ಕೆ ಕಳುಹಿಸಿಕೊಡಲಿದೆ.



ಪ್ರೀತಂಗೌಡ ಆಪ್ತರ ಮನೆಯಲ್ಲಿ ದೊರೆತ ಪೆನ್‌ಡ್ರೈವ್‌ಪ್ರಜ್ವಲ್ ಪ್ರಕರಣಕ್ಕೆಸಂಬಂಧಿಸಿದ್ದೇಹೌದೋ ಅಲ್ಲವೋ ಎಂಬುದು ವಿಧಿ ವಿಜ್ಞಾನಪ್ರಯೋಗಾಲಯದ ವರದಿ ಬಂದ ಬಳಿಕವಷ್ಟೇ ತಿಳಿದುಬರಲಿದೆ.

ಇನ್ನು ಹಾಸನದ 18 ಕಡೆ ನಡೆಸಿದ ದಾಳಿಯಲ್ಲಿ ಎಸ್‌ಐಟಿ ಮಹತ್ವದ ದಾಖಲೆಗಳನ್ನುವಶಪಡಿಸಿಕೊಂಡಿದೆ.7 ಪೆನ್ ಡ್ರೈವ್, 6 ಹಾರ್ಡ್ ಡಿಸ್ಕ್, ನಾಲ್ಕುಲ್ಯಾಪ್ ಟಾಪ್, ಮೂರು ಡೆಸ್ಕ್ ಟಾಪ್ ವಶಕ್ಕೆಪಡೆದಿದೆ.ದಾಳಿನಡೆಸಿದ ಕಡೆಯಲ್ಲಿಸಿಕ್ಕಸಿಸಿ ಕ್ಯಾಮರಾಗಳ ದೃಶ್ಯಗಳನ್ನೂಪರಿಶೀಲನೆ ನಡೆಸಲಾಗುತ್ತಿದೆ. ಪತ್ತೆಯಾದ ಹಾರ್ಡ್ಡ ಡಿಸ್ಕ್‌ಗಳಲ್ಲಿರುವವಿಡಿಯೋಗಳನ್ನೂಪರಿಶೀಲನೆಮಾಡಲಾಗುತ್ತಿದೆ. ವಿಡಿಯೋಗಳನ್ನುಪೆನ್ ಡ್ರೈವ್, ಲ್ಯಾಪ್ ಟಾಪ್‌ಹಾಗೂ ಡೆಸ್ಕ್ ಟಾಪ್‌ಗೆ ಕಾಪಿಮಾಡಿ ನಂತರಬೇರೆಯವರಿಗೆಹಂಚಿರುವ ಆರೋಪವಿದೆ.

ವಿಡಿಯೋ ಉಳ್ಳ ಪೆಬ್‌ಡ್ರೈವ್‌ಹಂಚಿಕೆಯ ಆರೋಪ ಎದುರಿಸುತ್ತಿರುವವರ ಮನೆ, ಕಚೇರಿಗೆ ಬಂದು ಹೋಗಿರುವವರ ಬಗ್ಗೆಯೂ ಎಸ್‌ಐಟಿ ಮಾಹಿತಿ ಕಲೆಹಾಕುತ್ತಿದೆ.

# ರಾಜ್ಯದಲ್ಲಿದ್ದಾಗಲೇ ನನ್ನ ಸಂಪರ್ಕದಲ್ಲಿ ಇರಲಿಲ್ಲ ಪ್ರಜ್ವಲ್

**ಮೈಸೂರು:** ಹಾಸನ ಸಂಸದ ಪ್ರಜ್ವಲ್ ರೇವಣ್ಣನನ್ನ ಸಂಪರ್ಕದಲ್ಲಿ ಇಲ್ಲ. ಆತ ಮೊದಲಿನಿಂದಲೂ ಪಕ್ಷದ ಚಟುವಟಿಕೆಗಳ ಸಂದರ್ಭದಲ್ಲಿಯೂನನ್ನಸಂಪರ್ಕದಲ್ಲಿ ಇರಲಿಲ್ಲ ಎಂದು ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್‌ಡಿ ಕುಮಾರಸ್ವಾಮಿ ಹೇಳಿದರು. ಮೈಸೂರಿನಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿದ್ದಾಗಲೇ ನನ್ನ ಸಂಪರ್ಕದಲ್ಲಿರದ ಪ್ರಜ್ವಲ್ ವಿದೇಶದಲ್ಲಿರುವಾಗ ಹೇಗೆ ನನ್ನ ಜೊತೆ ಸಂಪರ್ಕದಲ್ಲಿರುತ್ತಾನೆ ಎಂದು ಪ್ರಶ್ನಿಸಿದರು.



ಇನ್ನು ಪ್ರಜ್ವಲ್ ಪ್ರಕರಣ ಸಂಬಂಧ ಎಸ್‌ಐಟಿ ತನಿಖೆಯನಡೆಯನ್ನುಪ್ರಶ್ನಿಸಿರುವ ಅವರು, ಎಸ್‌ಐಟಿ ಅನವಶ್ಯಕವಾಗಿ ಕೆಲವರನ್ನು ಬಂಧಿಸುತ್ತಿದೆ ಎಂದು ಆರೋಪಿಸಿದರು.

ಬಿಜೆಪಿ ಮುಖಂಡ ದೇವೇರಾಜೇಗೌಡರನ್ನು ಪ್ರಕರಣ ದಾಖಲಾಗಿ ಒಂದು ತಿಂಗಳ ನಂತರ ಬಂಧಿಸಿದ್ದು ಯಾಕೆ?ಎಸ್‌ಐಟಿಯವರಿಗೆ ದೇವೇರಾಜೇಗೌಡರಿಂದ ಏನು ಮಾಹಿತಿ ಬೇಕಿದೆ?ಪ್ರಜ್ವಲ್ ರೇವಣ್ಣ ವಿಡಿಯೋ ವೈರಲ್ ಮಾಹಿತಿನಾ?ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದ ಮಾಹಿತಿನಾ?ಈ ಪ್ರಕರಣದ ಆಡಿಯೋ ತುಣುಕು ಬಿಡುಗಡೆಯಾಗಿತ್ತಲ್ಲ ಅದರ ಮಾಹಿತಿನಾ?ಏತಕ್ಕಾಗಿ ಎಸ್‌ಐಟಿ ನಾಲ್ಕು ದಿನದಿಂದ ವಶಕ್ಕೆ ಪಡೆದುಕೊಂಡು ಇಟ್ಟುಕೊಂಡಿದೆ ಎಂದು ಅವರು ಪ್ರಶ್ನಿಸಿದರು.

ಈ ಪ್ರಕರಣದಲ್ಲಿ ಎರಡು ಭಾಗ ಇದೆ.ಒಂದು ವಿಡಿಯೋ ಮಾಡಿಕೊಂಡವನ ಅಪರಾಧ.ಮತ್ತೊಂದು ಆ ವಿಡಿಯೋವನ್ನು ವೈರಲ್ ಮಾಡಿ ಕುಟುಂಬಗಳನ್ನು ಬೀದಿಗೆ ತಂದವರದ್ದು.ಇದು ಕೂಡ ಘೋರ ಅಪರಾಧ.ಆದರೆ ಎಸ್‌ಐಟಿ ವೈರಲ್ ಮಾಡಿದವರನ್ನು ಬಂಧಿಸುವಲ್ಲಿ ವಿಫಲವಾಗಿದೆ.ಆರೋಪಿ ಖಾಸಗಿ ಚಾನೆಲ್‌ಗೆ ಸಂದರ್ಶನ ನೀಡುತ್ತಾನೆ. ಆದರೆ ಎಸ್‌ಐಟಿಗೆ ಸಿಗುತ್ತಿಲ್ಲ ಅಂದರೆ ಏನು ಅರ್ಥ ಎಂದು ಕುಮಾರಸ್ವಾಮಿ ಪ್ರಶ್ನಿಸಿದರು.ಎಸ್‌ಐಟಿ ಸೂಕ್ತವಾದ ರೀತಿಯಲ್ಲಿ ತನಿಖೆ ನಡೆಸುತ್ತಿಲ್ಲ ಎಂದು ಅವರು ಆರೋಪಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com